ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 135 ಸಂಚಿಕೆ- 135 | PAGE-8 ಪುಟ-8 | ಭಾನುವಾರ 06.07.2025 | RS.2/- ಬೆಲೆ 2/-

## ಅಕ್ರಮ ಗಣಿಗಾರಿಕೆ ಪ್ರಕರಣಗಳ ಪರಿಶೀಲನೆಗೆ

# ಸಂಪುಟ ಉಪಸಮಿತಿ ರಚನೆ

ಮಲ್ಲಮನುಡಿವಾರ್ತೆಬೆಂಗಳೂರು:ಜು.5: 'ಅಕ್ರಮ ಗಣಿಗಾರಿಕೆ' ಪ್ರಕರಣಗಳಿಗೆ ಸಂಬಂಧಿಸಿದಂತೆ ಇದುವರೆಗೆ ಆಗಿರುವ ಪ್ರಗತಿ, ಆಗಬೇಕಾಗಿರುವ ಕ್ರಮಗಳು ಸೇರಿ ಹಲವು ವಿಷಯಗಳ ಕುರಿತು ಪರಿಶೀಲಿಸಲು ಮತ್ತು ಸೂಕ್ತ ಕ್ರಮಗಳನ್ನು ಶಿಫಾರಸು ಮಾಡಲು ರಾಜ್ಯ ಸರ್ಕಾರ ಶನಿವಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ನೇತೃತ್ವದಲ್ಲಿ ಆರು ಸದಸ್ಯರ ಸಂಪುಟ ಉಪಸಮಿತಿ ರಚಿಸಿದೆ. ಒಂದು ತಿಂಗಳೊಳಗೆ ತನ್ನ ವರದಿಯನ್ನು ಸಲ್ಲಿಸಲು ಸಂಪುಟ ಉಪಸಮಿತಿಗೆ ಸೂಚಿಸಲಾಗಿದೆ.



ಗೃಹ ಸಚಿವ ಜಿ ಪರಮೇಶ್ವರ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ ಎಚ್ ಮುನಿಯಪ್ಪ, ಸಮಾಜ ಕಲ್ಯಾಣ ಸಚಿವ ಎಚ್ ಸಿ ಮಹಾದೇವಪ್ಪ, ಅರಣ್ಯ ಸಚಿವ ಈಶ್ವರ್ ಖಂಡ್ರೆ ಹಾಗೂ ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಅವರು ಸಂಪುಟ ಉಪಸಮಿತಿಯ ಸದಸ್ಯರಾಗಿದ್ದಾರೆ ಜುಲೈ 2 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಉಪಸಮಿತಿ ರಚಿಸಲು ನಿರ್ಧರಿಸಲಾಗಿತ್ತು."ಗಣಿಗಾರಿಕೆಯಲ್ಲಿನ ಅಕ್ರಮಗಳ ಬಗ್ಗೆ, ವಿಶೇಷವಾಗಿ ರಿಕವರಿ ಆಯುಕ್ತರ ನೇಮಕ ಮತ್ತು ಪ್ರಕರಣಗಳ ತ್ವರಿತ ವಿಲೇವಾರಿಗಾಗಿ ಫಾಸ್ಟ್-ಟ್ರ್ಯಾಕ್ ನ್ಯಾಯಾಲಯ ಸ್ಥಾಪಿಸುವ ಬಗ್ಗೆ ಚರ್ಚಿಸಲು ಮತ್ತು ಸೂಕ್ತ ಶಿಫಾರಸುಗಳನ್ನು ಮಾಡಲು ಸಂಪುಟ ಉಪಸಮಿತಿ ರಚಿಸಲಾಗಿದೆ" ಎಂದು ಅಧಿಕೃತ ಟಿಪ್ಪಣಿಯಲ್ಲಿ ತಿಳಿಸಲಾಗಿದೆ. ಅಕ್ರಮ ಗಣಿಗಾರಿಕೆ ಪ್ರಕರಣಗಳನ್ನು "ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವಲ್ಲಿ ಸರ್ಕಾರ ವಿಫಲವಾಗಿದೆ" ಎಂದು ಎಚ್‌ಕೆ ಪಾಟೀಲ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. ಅಲ್ಲದೆ ಎಚ್ ಕೆ ಪಾಟೀಲ್ ಅವರು ಅಪರಾಧಿಗಳಿಗೆ ಶಿಕ್ಷೆಯಾಗುವಂತೆ ನೋಡಿಕೊಳ್ಳುವುದು ಮತ್ತು ರಾಜ್ಯದ ಕಳೆದುಹೋದ ಸಂಪತ್ತನ್ನು ಮರಳಿ ಪಡೆಯುವುದು ಸೇರಿದಂತೆ ಹಲವು ಕಳವಳಗಳನ್ನು ವ್ಯಕ್ತಪಡಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

## ಅರಣ್ಯ ಇಲಾಖೆಯ ೬೦೦೦ ಹುದ್ದೆಗಳು ಶೀಘ್ರ ಭರ್ತಿ: ಈಶ್ವರ ಖಂಡ್ರೆ



ಕಲಬುರಗಿ:ಜು.5: ರಾಜ್ಯದ ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ 6000 ಹುದ್ದೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು ಎಂದು ರಾಜ್ಯದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಹೇಳಿದರು.

(2ನೇ ಪುಟ ನೋಡಿ)

## ನಿಸರ್ಗವೇ ಜೀವನಕ್ಕೆ ಆಧಾರ:ಡಾ.ಮಲ್ಲಿಕಾರ್ಜುನ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜು.5:ಭೂಮಿ ಮೇಲೆ ಜೀವನ ನಡೆಸಲು ನಿಸರ್ಗವೇ ಜೀವನಕ್ಕೆ ಆಧಾರವಾಗಿದೆ. ಹಸಿರಿದ್ದರೆ ಮಾತ್ರ ಉಸಿರು ಎಂಬುದನ್ನು ಯಾರು ಮರೆಯಬಾರದು. ಮನುಷ್ಯ ತನ್ನ ದುರಾಸೆ ಬಿಟ್ಟು ಗಿಡ-ಮರಗಳನ್ನು ಬೆಳೆಸಿ ಪರಿಸರ ಸಂರಕ್ಷಣೆ ಮಾಡಬೇಕು ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು. ಶನಿವಾರ



ಅರಣ್ಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಲಬುರಗಿ ಮಹಾನಗರ ಪಾಲಿಕೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರ ಇವುಗಳ ಸಹಯೋಗದೊಂದಿಗೆ ಶನಿವಾರ ಇಲ್ಲಿನ ಪಿ.ಡಿ.ಎ ಕಾಲೇಜು ಹಿಂಭಾಗದ ಹೆಚ್.ಕೆ.ಇ. ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಆಯೋಜಿಸಿದ "ವನಮಹೋತ್ಸವ-2025", "ಹಸಿರು

(2ನೇ ಪುಟ ನೋಡಿ)

## ಕುಮಾರಣ್ಣ ಮತ್ತೇ ಸಿಎಂ: ನಿಖಿಲ್ ವಿಶ್ವಾಸ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಜು.5: ರಾಜ್ಯದಲ್ಲಿ ಮುಂಬರುವ 2028ರಲ್ಲಿ ಜೆಡಿಎಸ್ ,ಬಿಜೆಪಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ, ಪೂರ್ಣ ಪ್ರಮಾಣದ ಸರ್ಕಾರ ರಚನೆಗೊಂಡು ಕುಮಾರಣ್ಣ ಮುಖ್ಯಮಂತ್ರಿಯಾಗುವುದು ಶತಸಿದ್ಧ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಿಶ್ವಾಸದಿಂದ ನುಡಿದರು.

ಇಲ್ಲಿನ ಯರಗೋಳ್ ರಸ್ತೆಯಲ್ಲಿನ ಸಪ್ತಪದಿ ಕಲ್ಯಾಣ ಮಂಟಪದಲ್ಲಿ ಶನಿವಾರ ಜಿಲ್ಲಾ ಜೆಡಿಎಸ್



ಆಯೋಜಿಸಿದ್ದ ಜನರೊಂದಿಗೆ ಜನತಾದಳ ಮತ್ತು ಸದಸ್ಯತ್ವ ನೊಂದಣಿ ಕಾರ್ಯಕ್ರಮವನ್ನು

(2ನೇ ಪುಟ ನೋಡಿ)




ಒಂದನೇ ಪುಟದಿಂದ

# ಶೀಘ್ರ ಭರ್ತಿ: ಈಶ್ವರ ಖಂಡ್ರೆ

ನಗರದಲ್ಲಿ ಶನಿವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇಲಾಖೆಯಲ್ಲಿ ಈಗಾಗಲೇ 341 ಹುದ್ದೆಗಳ ಭರ್ತಿ ಮಾಡಲಾಗಿದೆ. 540 ಹುದ್ದೆಗಳ ನೇಮಕಾತಿಯ ಪ್ರಕ್ರಿಯೆ ನಡೆಯುತ್ತಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೊಂದಿಗೆ ಚರ್ಚೆ ನಡೆಸಿ ಆದಷ್ಟು ಬೇಗ ಎಲ್ಲ ರೀತಿಯ ಹುದ್ದೆಗಳನ್ನು ನೇಮಕ ಮಾಡಲಾಗುವುದು ಎಂದು ತಿಳಿಸಿದರು.

ಚಾಮರಾಜನಗರದಲ್ಲಿ ಹುಲಿಗಳು ಸಾವನ್ನಪ್ಪಿರುವ ಪ್ರಕರಣದಲ್ಲಿ ಅಧಿಕಾರಿಗಳ ಕರ್ತವ್ಯ ಲೋಪ ಮತ್ತು ನಿರ್ಲಕ್ಷ್ಯ ಮಾಡಿದ್ದರಿಂದಲೇ ಅವರನ್ನು ಅಮಾನತ್ತು ಮಾಡುವಂತೆ ಸೂಚನೆ ಕೊಡಲಾಗಿದೆ. ಇನ್ನೋರ್ವ ಅಧಿಕಾರಿ ಭಾರತೀಯ ಅರಣ್ಯ ಇಲಾಖೆಯ ಸೇವೆಯ ವ್ಯಾಪ್ತಿಯಲ್ಲಿದ್ದರಿಂದ ಅವರ ಅಮಾನತ್ತಿಗೆ ಮುಖ್ಯಮಂತ್ರಿಗಳಿಗೆ ಶಿಫಾರಸು ಮಾಡಿದ್ದೇನೆ ಎಂದು ಅವರು ಹೇಳಿದರು.

ಆನೆ, ಹುಲಿಗಳ ದಾಳಿಯಿಂದಾಗಿ ಪ್ರತಿ ವರ್ಷ 50ರಿಂದ 60 ಜನರು ಸಾವಿಗೀಡಾಗುತ್ತಿದ್ದಾರೆ. ಆನೆ ಮಾನವ ಸಂಘರ್ಷ ತಪ್ಪಿಸಲು ಕಾಡಿನಿಂದ ಆನೆಗಳು ಬರುವುದನ್ನು ತಪ್ಪಿಸಬೇಕಿದೆ. ಅದಕ್ಕಾಗಿ ಅರಣ್ಯದಲ್ಲಿ ಹೆಚ್ಚಿನ ಬಿದಿರು ಬೆಳೆಸಿ ಆನೆಗಳಿಗೆ ಆಹಾರ ಒದಗಿಸಲಾಗುವುದು. ಆನೆ ಕಾರಿಡಾರ್ ಗಳನ್ನು ಹಂತ ಹಂತವಾಗಿ ಪುನರ್ ಸ್ಥಾಪನೆ ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚಿನ ಪ್ರಮಾಣದ ಬಿಸಿಲಿನ ತಾಪ ತಗ್ಗಿಸಲು ಈ ಭಾಗದ ಐದು ಜಿಲ್ಲೆಗಳಲ್ಲಿ 25 ಲಕ್ಷ ದೊಡ್ಡ ಗಾತ್ರದ ಸಸಿಗಳನ್ನು ನೆಡಲಾಗುತ್ತಿದೆ. ಅದಕ್ಕಾಗಿ ಕಲಬುರಗಿಯಲ್ಲಿ ಹಸಿರು ಪಥ ಯೋಜನೆಗೆ ಚಾಲನೆ ನೀಡಲಾಗುತ್ತಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಅರಣ್ಯ ಸಿಬ್ಬಂದಿಗೆ ವೇತನ ವಿಳಂಬವಾಗಿ ಪಾವತಿಯಾಗದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಪ್ರತಿ ತಿಂಗಳು ಐದರೊಳಗೆ ವೇತನ ಪಾವತಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದ ಅವರು, ರಾಜ್ಯದಲ್ಲಿ ಅನಾದಿ ಕಾಲದಿಂದ 2 ಲಕ್ಷ ಎಕರೆ ಭೂಮಿ ಒತ್ತುವರಿಯಾಗಿದೆ. ಅರಣ್ಯ ಭೂಮಿ ಕ್ಷೀಣಿಸುತ್ತಿರುವುದರಿಂದ ವನ್ಯಜೀವಿ ಮಾನವ ಸಂಘರ್ಷ ನಡೆಯುತ್ತಿದೆ ಎಂದು ಹೇಳಿದರು.

ಬೆಂಗಳೂರಿನಲ್ಲಿ 248 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವುಗೊಳಿಸಿದ್ದು, ಒಟ್ಟಾರೆ 6231 ಎಕರೆ ಅರಣ್ಯ ಭೂಮಿ ಮರು ವಶಕ್ಕೆ ಪಡೆಯಲಾಗಿದೆ. ಇದರಿಂದ ?10 ಸಾವಿರ ಕೋಟಿ ಮೌಲ್ಯದ ಅರಣ್ಯ ಭೂಮಿ ಇಲಾಖೆಯ ಸುಪರ್ದಿಗೆ ಬಂದಂತಾಗಿದೆ ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಮಾಹಿತಿ ತಂತ್ರಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ರಾಜ್ಯದ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಹಾಗೂ ಆಳಂದ್ ಶಾಸಕ ಬಿ.ಆರ್. ಪಾಟೀಲ್, ಜಿಲ್ಲಾ ಪಂಚಾಯಿತಿ ವಿರೋಧ ಪಕ್ಷದ ಮಾಜಿ ನಾಯಕ ಶಿವಾನಂದ್ ಪಾಟೀಲ್ ಮರತೂರ್ ಮುಂತಾದವರು ಉಪಸ್ಥಿತರಿದ್ದರು.

# ಜೀವನಕ್ಕೆ ಆಧಾರ:ಡಾ.ಮಲ್ಲಿಕಾರ್ಜುನ ಖರ್ಗೆ

ಪಥ" ಹಾಗೂ "ಕಲಬುರಗಿಯ ಹಸಿರು ಹೆಜ್ಜೆ" ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮತ್ತು ಮಕ್ಕಳಿಗೆ ಸಾಂಕೇತಿಕವಾಗಿ ಗಿಡಗಳನ್ನು ವಿತರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಪರಿಸರ ಸಮತೋಲನ ಕಾಪಾಡಬೇಕಾದರೆ ಶೇ.33ರಷ್ಟು ಅರಣ್ಯ ಹೊಂದುವುದು ಅವಶ್ಯಕ. ಇಂದು ದೇಶದಲ್ಲಿ ಶೇ.25.15 ಮಾತ್ರ ಅರಣ್ಯ ಪ್ರದೇಶ ಇದೆ. ಇನ್ನು ಕರ್ನಾಟಕದಲ್ಲಿ ಇದರ ಪ್ರಮಾಣ ಶೇ.21 ಮಾತ್ರ. ದೇಶದಲ್ಲಿ ಅರಣ್ಯ ಪ್ರದೇಶ ಹೆಚ್ಚಾಗಬೇಕು. ಮುನುಷ್ಯನ ದುರಾಸೆಯಿಂದ ಶೇ.20 ಲಕ್ಷ ಹೆಕ್ಟೇರ್ ಅರಣ್ಯ ಪ್ರದೇಶ ನಾವು ಕಳೆದುಕೊಂಡಿದ್ದೇವೆ. ರಸ್ತೆ ಬದಿಯಲ್ಲಿ ಸಸಿ ನೆಡುವುದಷ್ಟೇ ಅಲ್ಲದೇ ಅವುಗಳ ರಕ್ಷಣೆ ಮಾಡಬೇಕು. ಸಾರ್ವಜನಿಕರು ಕೂಡಾ ಸರ್ಕಾರದೊಂದಿಗೆ ಕೈ ಜೋಡಿಸಬೇಕು ಎಂದು ಅವರು ಒತ್ತಿ ಹೇಳಿದರು.

ತಾವು ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಅರಣ್ಯ ಪ್ರದೇಶ ವಿಸ್ತರಣೆಗೆ ಪ್ರಯತ್ನ ಪಟ್ಟಿರುವುದನ್ನು ನೆನಪಿಸಿಕೊಂಡ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಜನರು ಆಗೆಲ್ಲ ರಸ್ತೆ ಬಡಿಯ ಗಿಡಗಳನ್ನು ಕಡಿದುಕೊಂಡು ಹೋಗಿ ಕೃಷಿ ಪರಿಕರಗಳನ್ನು ಮಾಡಿಕೊಳ್ಳುತ್ತಿದ್ದರು. ಒಣಗಿದ ಅಥವಾ ಕೆಲಸಕ್ಕೆ ಅನುಕೂಲವಾಗುವ ಗಿಡ–ಮರ ಕಡಿದರೆ ಅದರಿಂದ ಸಮಸ್ಯೆಯಾಗುವುದಿಲ್ಲ. ಆದರೆ ಬೆಳೆದು ನಿಂತ ಮರ ಕಡಿದರೆ ಅದು ಅಪಾಯವಾಗುತ್ತದೆ ಎಂದರು.

ಇತ್ತೀಚಿಗೆ ಹೃದಯಾಘಾತದಿಂದ ಜನರನ್ನು ಅದರಲ್ಲೂ ಯುವಕರು ಸಾವನ್ನಪ್ಪುತ್ತಿದ್ದಾರೆ, ಹಾಸನ ಜಿಲ್ಲೆಯಲ್ಲಿ ಹೃದಯಾಘಾತದಿಂದ ಹೆಚ್ಚು ಜನರು ಮೃತರಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ ಖರ್ಗೆ ಅವರು ಜನರು ಜೀವನ ನಡೆಸಲು ಸ್ವಚ್ಛ ಗಾಳಿ, ಬೆಳಕು, ನೀರು ಬೇಕೆ ಬೇಕು. ಇವೆಲ್ಲ ದೊರಕಬೇಕೆಂದರೆ ಪರಿಸರ ಉತ್ತಮವಾಗಿರಬೇಕು. ಜನರ ಒಳಿತಿಗಾಗಿ ಈ ಪ್ರದೇಶಕ್ಕೆ 371ಜೆ ವಿಶೇಷ ಮೀಸಲಾತಿ ಕಲ್ಪಿಸಿದ್ದೇವೆ. ಪರಿಸರ ಸಂರಕ್ಷಣೆ ಸಹ ನಿಮ್ಮ ಭವಿಷ್ಯದ ಬದುಕಿಗೆ, ಯುವ ಪೀಳಿಗೆಗೆ ನೆರವಾಗಲಿದೆ. ರಾಜ್ಯ ಸರ್ಕಾರ ಈ ವರ್ಷ 3 ಕೋಟಿ ಸಸಿಗಳನ್ನು ನೆಡಲು ಉದ್ದೇಶಿಸಲಾಗಿದೆ. ಅವುಗಳಲ್ಲಿ 2.50 ಕೋಟಿ ಸಸಿಗಳು ಬದುಕಿದರೆ ಅದೆಷ್ಟೋ ಅನುಕೂಲವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಮಾಜಿ ಪ್ರಧಾನಮಂತ್ರಿ ಇಂದಿರಾ ಗಾಂಧಿ ಅವರು ಅರಣ್ಯ ಸಂರಕ್ಷಣೆಗೆ 1980ರಲ್ಲಿ ಅರಣ್ಯ ಸಂರಕ್ಷಣೆ ಕಾಯ್ದೆ ಜಾರಿಗೆ ತಂದರು. ರಾಜ್ಯದಲ್ಲಿ ಬರಗಾಲ ಬಂದಾಗ ಇಲ್ಲಿಗೆ ಬಂದಿದ್ದ ಅವರು ಅರಣ್ಯ ಬೆಳೆಸುವ ಬಗ್ಗೆ ಸಲಹೆ ನೀಡಿದ್ದರು. ಮತ್ತೊಬ್ಬ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಕಾಲದಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿಗೆ ತಂದು ಅರಣ್ಯ ನಿವಾಸಿಗಳಿಗೆ ಅನುಕೂಲ ಮಾಡಿಕೊಡಲಾಗಿತ್ತು. ಆದರೆ, ಅರಣ್ಯಕ್ಕೆ ಸಂಬಂಧಿಸಿದಂತೆ ಜಾರಿಗೆ ಬಂದ ಕಾನೂನುಗಳನ್ನು ದೇಶದ ಯಾವ ರಾಜ್ಯಗಳು ಪಾಲನೆ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ಇತ್ತೀಚೆಗೆ ಕೇಂದ್ರ ಸರ್ಕಾರ ಈ ಕಾಯ್ದೆ ತಿದ್ದುಪಡಿ ತಂದಿದ್ದಾದರು ಯಾವುದೇ ಪರಿಣಾಮಕಾರಿ ಯೋಜನೆ ಹಾಕಿಕೊಂಡಿಲ್ಲ. ಪರಿಸ್ಥಿತಿ ಹೀಗೆ ಮುಂದುವರೆದರೆ ಜನರು ಸ್ವಚ್ಛ ಗಾಳಿ, ಬೆಳಕು, ಆಹಾರ ಸಿಗದೆ ಅಪಾಯಕ್ಕೆ ಸಿಲುಕುವಂತಾಗುತ್ತದೆ ಎಂದರು.

ಜಲಾಶಯ, ನದಿ ತೀರದಲ್ಲಿ ಅರಣ್ಯ ವಿಸ್ತರಿಸಿ: ದಕ್ಷಿಣ ಕರ್ನಾಟಕದ ಬಹುತೇಕ ಕಡೆ ರಸ್ತೆ ಬದಿ ಚೆನ್ನಾಗಿ ಮರಗಳನ್ನು ಬೆಳೆಸಿದ್ದಾರೆ. ನೋಡಲು ಸುಂದರವಾಗಿ ಕಾಣುತ್ತವೆ. ರಸ್ತೆ ಬದಿ ಬಿಟ್ಟು ಒಳಗಡೆ ಹೋದರೆ ಮರಗಳಿಲ್ಲ. ಮರ ಕತ್ತರಿಸಿ ಜಮೀನು ಮಾಡಿಕೊಂಡಿದ್ದಾರೆ. ಹೀಗಾದರೆ ಪರಿಸರ ಸಂರಕ್ಷನೆ ಹೇಗೆ ಸಾಧ್ಯ? ಆಲಮಟ್ಟಿ, ನಾರಾಯಣಪುರ, ಕಾರಂಜಾ ಜಲಾಶಯ, ಕೃಷ್ಣಾ–ಭೀಮಾ ನದಿ ಹಾಗೂ ಬ್ರಿಡ್ಜ್ ಕಂ ಬ್ಯಾರೇಜ್ ಬಳಿ ಹಿನ್ನಿರಿನ ನೆರವಿನಿಂದ ಗಿಡ–ಮರಗಳನ್ನು ಬೆಳೆಸಿ ಅರಣ್ಯ ಪ್ರದೇಶ ವಿಸ್ತರಿಸಬೇಕು. ಇನ್ನು ಶಾಲಾ–ಕಾಲೇಜು, ರಸ್ತೆ ಬದಿ, ಮನೆ ಮುಂದೆ ಅಲ್ಲದೇ ಜಮೀನುಗಳಲ್ಲೂ ಕೂಡಾ ಸಸಿ ನೆಡಬೇಕೆಂದು ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದರು.

ಸಸಿ ನೆಟ್ಟ ಗಣ್ಯರು: ವನ ಮಹೋತ್ಸವ ಕಾರ್ಯಕ್ರಮ ಅಂಗವಾಗಿ ಕಾರ್ಯಕ್ರಮ ನಡೆದ ಸ್ಥಳದಲ್ಲಿಯೆ ಡಾ.ಮಲ್ಲಿಕಾರ್ಜುನ ಖರ್ಗೆ, ಅರಣ್ಯ ಸಚಿವ ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಆದಿಯಾಗಿ ಚುನಾಯಿತ ಜನಪ್ರತಿನಿಧಿಗಳು ಸವಿನೆನಪಿಗೆ ಸಸಿ ನೆಟ್ಟು ನೀರು ಹಾಕಿದರು. ಹೆಚ್.ಕೆ.ಇ. ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿಯೂ ಅಭಿಯಾನದ ಅಂಗವಾಗಿ ಸುಮಾರು 1,000 ಗಿಡಗಳನ್ನು ನೆಡಲಾಗುತ್ತಿದೆ.

ಇದೇ ಸಂದರ್ಭದಲ್ಲಿ ಹಸಿರು ಪಥ ಲೋಗ ಬಿಡುಗಡೆ ಮತ್ತು ವನಮಹೋತ್ಸವ, ಹಸಿರು ಹೆಜ್ಜೆಗಳು ಹಾಗೂ ಹಸಿರು ಪಥದ ವಿಡಿಯೋ ಟೀಸರ್ ಸಹ ಬಿಡುಗಡೆಗೊಳಿಸಲಾಯಿತು

ಶಾಸಕ ಅಲ್ಲಮಪ್ರಭು ಪಾಟೀಲ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲಅಫಜಲಪುರ ಶಾಸಕ ಎಂ.ವೈ. ಪಾಟೀಲ, ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ, ಸಂಸದ ರಾಧಾಕೃಷ್ಣ ದೊಡ್ಡಮನಿ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ತಿಪ್ಪಣ್ಣಪ್ಪ ಕಮಕನೂರ, ಚಂದ್ರಶೇಖರ ಪಾಟೀಲ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಮಹಾನಗರ ಪಾಲಿಕೆ ಮಹಾಪೌರರಾದ ಯಲ್ಲಪ್ಪ ನಾಯ್ಕೋಡಿ, ಮಾಜಿ ಸಚಿವ ರೇವುನಾಯಕ ಬೆಳಮಗಿ, ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ, ಕಲಬುರಗಿ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸುನೀಲ್ ಪನ್ವಾರ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಎಫ್ ಸುಮಿತ್ ಪಾಟೀಲ ಸೇರಿದಂತೆ ಇತರೆ ಜನಪ್ರತಿನಿಧಿಗಳು, ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು, ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗಿಯಾಗಿದ್ದರು. ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಸರ್ವರನ್ನು ಸ್ವಾಗತಿಸಿದರು.

## ಸಾರ್ವಜನಿಕರು ಕುಡಿಯುವ ನೀರನ್ನು ಕಾಯಿಸಿ ಕುಡಿಯಲು ಮನವಿ

ಕಲಬುರಗಿ,ಜು.05:ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವಜಲಮೂಲನದಿಗಳಾದ ಭೀಮಾ ಹಾಗೂ ಬೆಣ್ಣೆತೆ–ೂರಾ ನದಿಯ ಜಲಾನಯನ ಪ್ರದೇಶಗಳಲ್ಲಿ ವಿಪರಿತ ಮಳೆಯಾಗುತ್ತಿರುವುದರಿಂದಮಣ್ಣು ಮಿಶ್ರಿತಕಲುಷಿತನೀರುಬರುತ್ತಿದೆ. ಕೋಟನೂರ,ಶೋರಗುಂಬಜ್ ಹಾಗೂ ಹಳೆ (ಫಿಲ್ಟರ್ ಬೆಡ್) ಜಲಶುದ್ಧೀಕರಣಕೇಂದ್ರಗಳಿಂದ ಕಲಬುರಗಿ ನಗರದ ಎಲ್ಲಾ ಬಡವಾಣೆಗಳಿಗೆ ನೀರು ಸರಬರಾಜುಮಾಡಲಾಗುತ್ತಿದ್ದು, ನದಿಗಳಿಂದ ಬರುತ್ತಿರುವ ನೀರನ್ನು ಶುದ್ಧೀಕರಿಸಿ, ಸೂಪರ್ ಕ್ಲೋರಿನೇಶನ್ ಮಾಡಿ ನೀರು ಸರಬರಾಜು ಮಾಡಲಾಗುತ್ತಿದೆ. ಆದ್ಯಾಗೂ ಸಹ ಕಲಬುರಗಿ ನಗರದ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮವಾಗಿಕುಡಿಯುವನೀರನ್ನು ಕಾಯಿಸಿ ಆರಿಸಿ ಸೋಸಿ ಕುಡಿಯಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್ಎಂಪಿ–ಕೆಯುಐಡಿಎಫ್ಸಿಯೋಜನಾಅನುಷ್ಠಾನ ಘಟಕದಸಾರ್ವಜನಿಕಸಂಪರ್ಕ ಅಧಿಕಾರಿಗಳು ತಿಳಿಸಿದ್ದಾರೆ. ನಗರದ ಸಾರ್ವಜನಿಕರು ತಮ್ಮಮನೆಗಳಿಗೆತೆಗೆದುಕೊಂಡ ನಳದಜೋಡಣೆಗೆತೊಟ್ಟಿಯನ್ನು ಕಡ್ಡಾಯವಾಗಿಕೂಡಿಸಿಕೊಳ್ಳಬೇಕು. ನಳದತಗ್ಗುಗಳನ್ನುಮುಚ್ಚಬೇಕು. ಏಕೆಂದರೆತಗ್ಗುಗಳಲ್ಲಿಕಲುಷಿತನೀರು ಸಂಗ್ರಹಣೆಯಾಗಿ ಅದೇ ನೀರು ಮತ್ತೇನಳದತೊಟ್ಟಿಯಲ್ಲಿಸೇರುವ ಮೂಲಕಮುಂದಿನಗ್ರಾಹಕರಿಗೆ ತಲಪುತ್ತದೆ. ಇದರಿಂದ ಕೂಡಾ ಸಾಂಕ್ರಾಮಿಕರೋಗ ಹರಡುವ ಸಂಭವ ಇರುತ್ತದೆ. ಇದ–ರಿಂದ ನೀರು ಪೋಲಾಗದಂತೆ ನೋಡಿಕೊಳ್ಳಬಹುದಾಗಿದೆ.

# ಮತ್ತೇ ಸಿಎಂ: ನಿಖಿಲ್ ವಿಶ್ವಾಸ

ಸಸಿಗೆ ನೀರುಣಿಸುವ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಉದ್ದಗಲಕ್ಕೂ ಪ್ರವಾಸ ಕೈಗೊಳ್ಳುವ ಮೂಲಕ ಪಕ್ಷವನ್ನು ಬೇರುಮಟ್ಟದಿಂದ ಸಂಘಟಿಸಿ, ಆ ಮೂಲಕ ಮುಂದಿನ ಚುನಾವಣೆಯಲ್ಲಿ ಮಿತ್ರ ಪಕ್ಷ ಬಿಜೆಪಿಯೊಂದಿಗೆ ಅಧಿಕಾರಕ್ಕೆ ಬಂದು ರೈತರ, ಮಹಿಳೆಯರ ಮತ್ತು ಯುವಕರ ಆಶಾಕಿರಣವಾಗಿ ಕೆಲಸ ಮಾಡುವ ಇಚ್ಛೆ ದೇವೇಗೌಡ ಮತ್ತು ಕುಮಾರಸ್ವಾಮಿ ಅವರದ್ದು ಆಗಿದೆ ಎಂದರು.

ರಾಜ್ಯದ ಎಲ್ಲಡೆ ಸುಮಾರು 50 ಲಕ್ಷ. ಸದಸ್ಯತ್ವದ ಗುರಿ ಹೊಂದಲಾಗಿದ್ದು, ಇಲ್ಲಿ ಸೇರಿದಂತಹ ಎಲ್ಲರೂ ಮಿಸ್ ಕಾಲ್ ಕೊಡುವ ಸದಸ್ಯತ್ವ ಪಡೆ–ಯರಿ ಮತ್ತು ಬೂತಮಟ್ಟದಲ್ಲಿ ಕೂಡಾ ಸದಸ್ಯತ್ವ ಮಾಡಿಸಿರಿ ಎಂದರು.

ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಸತ್ತಿದೆ : ಆರೋಪ

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸತ್ತು ಹೋಗಿದೆ. ಪ್ರಮಾಣಿಕ ಅಧಿಕಾರಿಗಳಿಗೆ ಬೆಲೆ ಇಲ್ಲ ಎಂದು ನಿಖಿಲ್, ಕಾನೂನು ಬಾಹಿರ ಕೆಲಸಗಳನ್ನು ತಡೆಯುತ್ತಿರುವ ಮಂಡ್ಯದ ಮೂಲದ ಇಲ್ಲಿನ ಎಸ್ ಪಿ ಪ್ರಥ್ವಿಕ್ ಶಂಕರ್ ಅವರನ್ನು ಕಾಂಗ್ರೆಸ್ ನ ಕೆಲವು ಪ್ರಭಾವಿಗಳು ವರ್ಗ ಮಾಡಿಸಲು ಮುಂದಾಗಿರುವ ವಿಷಯವೇ ಸಾಕು. ಈ ಸರ್ಕಾರಕ್ಕೆ ಎಂತಹ ಅಧಿಕಾರಿಗಳು ಬೇಕು ಎಂಬುವುದು ತಿಳಿಯುತ್ತದೆ ಎಂದು ನಿಖಿಲ್ ಚಾಟಿ ಬೀಸಿದರು.

**ರಾಜ್ಯ ದಿವಾಳಿ : ಆರೋಪ**

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದೆ. ಜೆಡಿಎಸ್ ಕಥೆ ಮುಗಿದು ಮುಗಿದೋಯ್ತು ಅಂತಾರೆ. ಆದರೆ ನಿಮ್ಮ ಪಕ್ಷ ಎಷ್ಟು ರಾಜ್ಯದಲ್ಲಿ ಅಧಿಕಾರದಲ್ಲಿದೆ ಎಂದು ಅವರು ಪ್ರಶ್ನಿಸಿದರು. ನೂರು ವರ್ಷ ಇತಿಹಾಸ ಇರುವ ಕಾಂಗ್ರೆಸ್ ಮೂರು ರಾಜ್ಯಕ್ಕೆ ಸೀಮಿತವಾಗಿದೆ ಎಂದು ವಾಗ್ದಾಳಿ ನಡೆಸಿದರು.

**ದೇವೇಗೌಡರ ನೆರಳಾಗಿ ಕಂದಕೂರು ಕುಟುಂಬ.**

ಜೆಡಿಎಸ್ ಪಕ್ಷದ ಜೊತೆ ಗಟ್ಟಿಯಾಗಿ ನಿಂತಿದ್ದು ಕಂದಕೂರ ಕುಟುಂಬ.

ಮಾಜಿ ಪ್ರಧಾನಿಗಳು ದೇವೇಗೌಡರ ಜೊತೆ ಹೆಗಲಿಗೆ ಹೆಗಲು ಕೊಟ್ಟು ಎಷ್ಟೇ ತೊಂದರೆ, ಸಂಕಷ್ಟಗಳು ಎದುರಾದರು ಪಕ್ಷದ ಜೊತೆ ಗಟ್ಟಿಯಾಗಿ ನಿಂತಿದ್ದು ಕಂದಕೂರ ಕುಟುಂಬ. ದಿ. ಸದಾಶಿವ ರೆಡ್ಡಿ ಕಂದಕೂರು, ದಿ. ನಾಗನಗೌಡ ಕಂದಕೂರು ಅವರ ಪಕ್ಷ ನಿಷ್ಠೆ ನಮ್ಮೆಲ್ಲರಿಗೂ ಪ್ರೇರಣೆ–ಯಾಗಿದೆ ಎಂದು ಹೇಳಿದರು.

**ಶರಣಗೌಡ ಮಾನಸ ಪುತ್ರ**

ಕುಮಾರಣ್ಣನಿಗೆ ನಾನೊಬ್ಬನೇ ಮಗ ನಿಜ. ಆದರೆ ಶರಣಗೌಡ ಕಂದಕೂರ ಮಾನಸಪುತ್ರ, ಮಗನ ಸಮಾನ. ಬೇರೆ ಬೇರೆ ಪಕ್ಷದಲ್ಲಿ ಅಧಿಕಾರ ಅನುಭವಿಸುತ್ತಿರುವ 50ಕ್ಕೂ ಹೆಚ್ಚು ಶಾಸಕರು, ಸಚಿವರು ಜೆಡಿಎಸ್ ಪಕ್ಷದ ಪಳೆಯುಳಿಕೆಗಳೆ. ನಮ್ಮ ಪಕ್ಷದಲ್ಲಿ ಅಧಿಕಾರ ಅನುಭವಿಸಿ. ಈಗ ಬೇರೆ ಪಕ್ಷಕ್ಕೆ ಹೋಗಿ ನಮ್ಮ ಪಕ್ಷದ ಬಗ್ಗೆನೇ ಮಾತನಾಡುತ್ತಿದ್ದಾರೆ ಎಂದು ಹೇಳಿದರು.

**ಕಾರ್ಯಕರ್ತರ ಕಷ್ಟ, ನೋವು ಕೇಳಲು ರಾಜ್ಯ ಪ್ರವಾಸ.**

ಜೆಡಿಎಸ್ ಪಕ್ಷದಿಂದ ಸಾಕಷ್ಟು ಜನ ಶಾಸಕರಾಗಿದ್ರು. ಎರಡು ರಾಷ್ಟ್ರೀಯ ಪಕ್ಷಗಳ ಬಹುತೇಕ ಶಾಸಕರು, ಸಚಿವರಾದವರು ಜನತಾದಳದ ಔಟ್ ಪುಟ್ ಗಳು. ಹಿಂದಿನ ರಾಜಕೀಯ, ಈಗಿನ ರಾಜಕೀಯಕ್ಕೆ ಅಧಿಕಾರ, ಹಣದ ಆಸೆಗೆ ಪಕ್ಷವನ್ನು ತ್ಯಜಿಸಿರಬಹುದು ಆದರೆ ದೇವೇಗೌಡರಿಗೆ ಹಾಗೂ ಕುಮಾರಸ್ವಾಮಿಗೆ ಬೆಂಬಲವಾಗಿ ನಿಂತಿರುವುದು ಕಂದಕೂರು ಕುಟುಂಬ ಎಂದು ಹೇಳಿದರು.

ರಾಜ್ಯ ಪ್ರವಾಸದ ಹಿಂದೆ ರಾಜ್ಯಾಧ್ಯಕ್ಷ ಫ್ಲಾನ್ ಇದೆ ಅಂತ ಮಾಧ್ಯಮದಲ್ಲಿ ಚರ್ಚೆ ಆಗ್ತಿದೆ. ಇನ್ನು ಚುನಾವಣೆ ಮೂರು ವರ್ಷವಿದೆ. ನಾನು ಕಾರ್ಯಕರ್ತನಾಗಿ ರಾಜ್ಯದ ಉದ್ದಗಲ್ಲಕ್ಕೂ ಕಾರ್ಯಕರ್ತರ ಜೊತೆ ಬಾಂಧವ್ಯ, ಸಂಪರ್ಕ, ಸಂಬಂಧ ಇಟ್ಟುಕೊಳ್ಳಲು ಪ್ರವಾಸ ಮಾಡ್ತಿದ್ದೇನೆ ಎಂದು ತಿಳಿಸಿದರು.

**ಗುರುಮಠಕಲ್ ಕ್ಷೇತ್ರ ಬೀಡುವ ಪ್ರಶ್ನೆಯೇ ಇಲ್ಲ: ಶಾಸಕ ಶರಣಗೌಡ ಸ್ಪಷ್ಟನೆ**

ಯಾದಗಿರಿ: ಗುರುಮಠಕಲ್ ಕ್ಷೇತ್ರ ಬಿಡುವ ಪ್ರಶ್ನೆಯೇ ಇಲ್ಲ. ಇದ್ದರೂ ಅಲ್ಲಿಯೇ, ಸತ್ತರೂ ಅಲ್ಲಿಯೇ ಎಂದು ಶಾಸಕ ಶರಣಗೌಡ ಕಂದಕೂರು ಹೇಳಿದರು.

ಜನರೊಂದಿಗೆ ಜನತಾದಳ ಮತ್ತು ಸದಸ್ಯತ್ವನೊಂದಣಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುರುಮಠಕಲ್ ಕ್ಷೇತ್ರ ತೊರೆಯುತ್ತಾರೆಂಬ ಮಾತುಗಳು ಅಲ್ಲಲ್ಲಿ ಕೇಳಿ ಬರುತ್ತಿರುವ ಹಿನ್ನಲೆಯಲ್ಲಿ ಸ್ಪಷ್ಟನೆ ನೀಡಿದ ಅವರು, ನಮ್ಮ ತಂದೆ ಮತ್ತು ನನಗೂ ರಾಜಕೀಯ ನೆಲೆ ಒದಗಿಸಿ ಶಾಸಕರನ್ನಾಗಿ ಮಾಡಿದ ಗುರುಮಠಕಲ್ ಕ್ಷೇತ್ರದ ಜನತೆ ಋಣ ಸಾಕಷ್ಟಿದೆ. ಕಾರಣ ಈ ಬಗ್ಗೆ ಯಾರು ತಲೆ ಕೆಡಿಸಿಕೊಳ್ಳಬಾರದೆಂದರು.

ಮುಂದೇ ರಾಜ್ಯದಲ್ಲಿ ನಮ್ಮಸರ್ಕಾರ ಬರುತ್ತೆ, ಕುಮಾರಣ್ಣ ಅವರು ಸಿಎಂ ಆಗುತ್ತಾರೆ. ನಮಗೆ ಮಂತ್ರಿ ಮಾಡುವ ಬದಲು ನಮ್ಮ ಗೆಲುವಿಗೆ ಹಗಲಿರುಳು ದುಡಿದು ಏನೊಂದು ಆಶೆ ಪಡದ ಕಾರ್ಯಕರ್ತರ ಒಳಿತಿಗಾಗಿ ಸರ್ಕಾರದಿಂದ ಸಹಾಯ ಮಾಡಬೇಕು. ಸ್ಥಳಿಯವಾಗಿ ಅಧಿಕಾರ ನೀಡಬೇಕೆಂಬ ಮನವಿ ಶಾಸಕ ಶರಣಗೌಡ ಮಾಡಿದರು.

ಕೆರೆಗಳಿಗೇ ನೀರು ತುಂಬಿಸಲು 165 ಕೋಟಿ ರೂ. ನೀಡಿದ್ದರು. ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ಗುರುಮಠಕಲ್ ಮತಕ್ಷೇತ್ರದ 18 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ 165 ಕೋಟಿ ರೂ. ಮಂಜೂರು ಮಾಡಿದ್ದರು. ಮುಂದೆ ಸರ್ಕಾರ ಬದಲಾದಾಗ ಹಣ ವಾಪಸ್ ಹೊಗಿತ್ತು. ಈ ವಿಷಯ ಕುಮಾರಸ್ವಾಮಿ ಅವರ ಗಮನಕ್ಕೆ ತಂದಾಗ ನನ್ನನ್ನು ನೇರವಾಗಿ ಆಗಿನ ಸಿಎಂ ಬಸವರಾಜ ಬೊಮ್ಮಾಯಿ ಅವರ ಮನೆಗೆ ಕರೆದುಕೊಂಡು ಹೋಗಿ ತಾವು ಶಾಸಕರಾಗಿದ್ದ ಚನ್ನಪಟ್ಟಣಕ್ಕೆ ಅನುದಾನ ಬೇಡ. ಗುರುಮಠಕಲ್ ಕ್ಷೇತ್ರಗಳಿಗೆ ನೀಡಿ ಎಂದು ಅನುದಾನ ಕೊಡಿಸಿದ ಪುಣ್ಯಾತ್ಮ ಎಂದು ಶಾಸಕರು ಹೇಳಿದರು.ಪಕ್ಷದ ಸಂಘಟನೆಗೆ ಹೆಚ್ಚಿನ ಸಮಯ ನೀಡಿ ಜಿಲ್ಲೆಯಲ್ಲಿ ಹೆಚ್ಚಿನ ಸದಸ್ಯತ್ವ ಮಾಡಿಲಾಗುವುದೆಂದರು.ಮಾಜಿ ಸಚಿವ ವೆಂಕಟರಾವ ನಾಡಗೌಡ ಮಾತನಾಡಿ, ದೇವೇಗೌಡರಿಂದಾಗಿಯೇ ಈ ಭಾಗ ನೀರಾವರಿ ಕಂಡಿದೆ ಮತ್ತು ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ 25 ಸಾವಿರ ಕೋಟಿ ರೂ. ರೈತರ ಸಾಲ ಮನ್ನಾ ಮಾಡಿದ್ದರು. ಈ ಕುಟುಂಬ ಜನರ ಪರ ಇದೆ. ಮತ್ತೇ ಕುಮಾರಣ್ಣ ಸಿಎಂ ಆಗಬೇಕು.ನಂತರ ರಾಜ್ಯದ ಅಭಿವೃದ್ಧಿ ದಿಕ್ಕನ್ನೇ ಬದಲಿಸುತ್ತಾರೆಂದರು.

ಮಾಜಿ ಶಾಸಕರಾದ ದೊಡ್ಡಪ್ಪಗೌಡ ಪಾಟೀಲ್ ನರಿಬೋಳ್,ರಾಜಾ ವೆಂಕಟಪ್ಪ ನಾಯಕ್, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ರಶ್ಮಿ ರಾಮೇಗೌಡ ಮಾತನಾಡಿದರು.

**ಜಿಲ್ಲಾಧ್ಯಕ್ಷ ಸುಭಾಷ್ ಕಟಕಟಿ ಸ್ವಾಗತಿಸಿದರು.**

ವೇದಿಕೆಯಲ್ಲಿ ತಾಲೂಕು ಅಧ್ಯಕ್ಷ ಪ್ರಕಾಶ ನಿರೆಟಿ, ಹಿರಿಯ ಮುಖಂಡರಾದ ಎಸ್.ಬಿ.ಪಾಟೀಲ್, ಅನ್ಸಾರಿ ಪಟೇಲ್, ಚನ್ನಪ್ಪಗೌಡ ಮೊಸಂಬಿ, ವಿಶ್ವನಾಥ ಸಿರವಾಳ, ಮಹಿಳಾ ಅಧ್ಯಕ್ಷೆ ನಾಗರತ್ನ ಅನಪುರ, ಕಲಬುರಗಿ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ, ವಕ್ತಾರ ಮಲ್ಲಣ್ಣಗೌಡ ಕೌಳೂರು ಸೇರಿದಂತೆಯೇ ಅನೇಕರು ಇದ್ದರು. ಆರಂಭದಲ್ಲಿ ಕುಂಭ ಹೊತ್ತ ನೂರಾರು ಮಹಿಳೆಯರು ನಿಖಿಲ್ ಕುಮಾರಸ್ವಾಮಿ ಅವರನ್ನು ಸ್ವಾಗತಿಸಿದರು. ಸಭಾಂಗಣ್ಣದಲ್ಲಿ ಕಿಕ್ಕಿರಿದು ಜನರು ಸೇರಿದ್ದರು.

# ಜು. 10 ರಂದು ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಆಚರಣೆ

ಕಲಬುರಗಿ,ಜು.05:ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಅಚರಣೆ ಕಾರ್ಯಕ್ರಮವನ್ನು ಇದೇ ಜುಲೈ 10 ರಂದು ಮಧ್ಯಾಹ್ನ 12.30 ಗಂ–ಟೆಗೆ ಕಲಬುರಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

# ಕೆಯುಡಬ್ಲ್ಯೂಜೆ ನೂತನ ಜಿಲ್ಲಾ ಗೌರವ ಸಲಹೆಗಾರ ಬಾಬುವಾಲಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು.05 : ಇತ್ತಿಚೀಗೆ ಬೆಂಗಳೂರಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದರಾಜ್ಯಾದ್ಯಕ್ಷಶಿವಾನಂದ ತಗಡೂರು ಅವರ ಮೌಖಿಕ ಅನುಮತಿ ಮೆರೆಗೆ ಹಿರಿಯ ಪತ್ರಕರ್ತರುಹಾಗೂಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಬಾಬುವಾಲಿಅವರನ್ನುಬೀದರ್ ಜಿಲ್ಲಾಕಾರ್ಯನಿರತಪತ್ರಕರ್ತರ ಸಂಘದನೂತನಜಿಲ್ಲಾಗೌರವ ಕಾರ್ಯದರ್ಶಿಯಾಗಿನೇಮಕ ಮಾಡಲಾಗಿದೆ.

ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಅವರ ನೇತೃತ್ವದಲ್ಲಿ ಬಾಬುವಾಲಿ ಅವರನ್ನು ಸನ್ಮಾನಿಸುವ ಮೂಲಕ ಶುಭ ಕೋರಲಾಯಿತು.

ವಾಲಿ ಅವರನ್ನು ಸನ್ಮಾನಿಸಿದ ಡಿ.ಕೆ ಗಣಪತಿ ಅವರುಮಾತನಾಡಿ,ಹಿರಿಯರು ಹಾಗೂ ಅನುಭವಿಗಳು ಆದ ಬಾಬುವಾಲಿ ಅವರು, ಜಿಲ್ಲೆಯ ಪತ್ರಕರ್ತರಪಾಲಿಗೆಒಂದುದೊಡ್ಡ ಶಕ್ತಿಯಾಗಿದ್ದಾರೆ.ಪತ್ರಿಕಾ ಭವನ ಸುಸೂತ್ರವಾಗಿ ನಡೆಯುವಲ್ಲಿ ಇವರ ಪಾತ್ರಬಹಳಷ್ಟಿದೆ. ಇವರ ಹಿರಿತನಕ್ಕೆ ಮನ್ನಣೆ ನೀಡಿ ಗೌರವ ಸಲಹೆಗಾರರನ್ನಾಗಿ ನೇಮಕ ಮಾಡಲು ಅನುಮತಿ ನೀಡಿದ ನಮ್ಮ ರಾಜ್ಯಾಧ್ಯಕ್ಷರಾದ ತಗಡೂರು ಹಾಗೂ ರಾಜ್ಯ ಸಂಘದ ಪದಾಧಿಕಾರಿಗಳಿಗೆ ಜಿಲ್ಲಾ ಸಂಘ ಅಭಿನಂದಿಸುತ್ತದೆ ಎಂದರು.

ಸನ್ಮಾನ ಸ್ವೀಕರಿಸಿದ ಬಾಬು ವಾಲಿ ಮಾತನಾಡಿ, ಕೆಯುಡಬ್ಲು ??ಜೆರಾಜ್ಯಾಧ್ಯಕ್ಷರಾದ ತಗಡೂರುಅವರುನನ್ನನ್ನುಜಿಲ್ಲಾ ಗೌರವ ಸಲಹೆಗಾರರ ಸ್ಥಾನಕ್ಕೆ ಗುರುತಿಸಲು ಅನುಮತಿಸಿದಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ.

ಜೊತೆಗೆ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ರಾಜ್ಯ ಪರಿಷತ್ ಸದಸ್ಯ ಬಸವರಾಜ ಕಾಮಶೆಟ್ಟಿ ಸೇರಿದಂತೆ ಜಿಲ್ಲೆಯ ಇತರೆ ಪದಾಧಿಕಾರಿಗಳಿಗೆ ಧನ್ಯವಾದ ತಿಳಿಸುವುದಾಗಿ ಹೇಳಿದರು.

ಮುಂಬರುವ ದಿನಗಳಲ್ಲಿ ನಾನು ಕೆಯುಡಬ್ಲು ಜೆ ಸಂಘದ ಅದ್ಯಕ್ಷ ಸ್ಥಾನದ ಅಕಾಂಕ್ಷಿ ಇಲ್ಲ. ರಾಜ್ಯ ಘಟಕದ ಸಲಹೆ ಮೆರೆಗೆ ಈ ಹುದ್ದೆ ಸ್ವೀಕರಿಸಿದ್ದೇನೆ. ಸಂಘದ ಅವಧಿ ಮುಗಿಯುವ ವರೆಗೆ ಸಂಘ ಕೊಡುವ ಗೌರವಕ್ಕೆ ಬದ್ದನಾಗಿರುವುದಾಗಿ ವಾಲಿ ತಿಳಿಸಿದರು.

ಈ ಸಂದರ್ಭದಲ್ಲಿ ವಾಲಿ ಅವರಿಗೆ ಕೆಯುಡಬ್ಲು ಜೆ ಪದಾಧಿಕಾರಿಗಳು ಸೇರಿದಂತೆ ಅನೇಕ ಪತ್ರಕರ್ತರು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಸಹಾಯಕನಿರ್ದೇಶಕ ಮಂಜುನಾಥಸುಳ್ಳೊಳ್ಳಿ,ಹಿರಿಯ ಪತ್ರಕರ್ತರಾದ ಶಿವಶರಣಪ್ಪ ವಾಲಿ, ಗಂಧರ್ವ ಸೇನಾ, ಮಲ್ಲಿಕಾರ್ಜುನ ಬಿರಾದಾರ, ದೀಪಕ ವಾಲಿ, ಮಾಳಪ್ಪ ಅಡಸಾರೆ,ಶಶಿಕುಮಾರಪಾಟೀಲ, ವಿಜಯಕುಮಾರ ಪಾಟೀಲ, ಆನಂದ ದೇವಪ್ಪ,ಬಸವರಾಜ ಪವಾರ, ಮಲ್ಲಿಕಾರ್ಜುನ ಮರಕಲೆ, ಕೆಯುಡಬ್ಲು ??ಜೆ ಜಿಲ್ಲಾ ಸಂಘದ ಅಧ್ಯಕ್ಷ ಡಿ.ಕೆ ಗಣಪತಿ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಉಪಾಧ್ಯಕ್ಷ ನಾಗಶೆಟ್ಟಿ ಧರಂಪುರ,ಕಾರ್ಯದರ್ಶಿಗಳಾದ ಪ್ರಥ್ವಿರಾಜ, ಸುನಿಲಕುಮಾರ ಕುಲಕರ್ಣಿ,ಜಿಲ್ಲಾ ಕಾರ್ಯಕಾರಿ ಸದಸ್ಯ ಸಂತೋಷ ಚಟ್ಟಿ, ಪತ್ರಕರ್ತರಾದ ಮಹಾರುದ್ರ ಡಾಕುಳಗಿ, ವಿಜಯಕುಮಾರ ಅಷ್ಟುರೆ, ಸುನಿಲ ಭಾವಿಕಟ್ಟಿ, ವಿಜಯಕುಮಾರ ಸೋನಾರೆ, ಶ್ರೀಕಾಂತ ಪಾಟೀಲ ಸೇರಿದಂತೆ ಇನ್ನುಅನೇಕರುಉಪಸ್ಥಿತರಿದ್ದರು.

# ಪತ್ರಿಕಾ ದಿನಾಚರಣೆ ಸಾಮೂಹಿಕವಾಗಿ ಆಚರಿಸಲು ನಿರ್ಧಾರ

## ಸಂಘಟನೆಗಳು ಹೆಚ್ಚಾದಂತೆ ಸೌಹಾರ್ದತೆ ಹೆಚ್ಚಾಗಬೇಕು: ಶಿವಶರಣಪ್ಪ ವಾಲಿ




ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು. 05 : ಈ ತಿಂಗಳಲ್ಲಿ ಆಚರಿಸಲಾಗುವ ಪತ್ರಿಕಾ ದಿನಾಚರಣೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘ, ಜಿಲ್ಲಾ ಹಾಗೂ ಪ್ರಾದೇಸಿಕ ಪತ್ರಿಕೆಗಳ ಸಂಪಾದಕರ ಸಂಘ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ, ವಿದ್ಯುನ್ಮಾನ ಮಾಧ್ಯಮಗಳ ಸಂಘಗಳ ಸಹಯೋಗದಲ್ಲಿ ಆಯೋಜಿಸಲು ತಿರ್ಮಾನಿಸಲಾಯಿತು.

ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪತ್ರಿಕಾ ದಿನಾಚರಣೆ ಸಂಬಂಧ ಕರೆದ ಪೂರ್ವಭಾವಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ಈ ಸಂದರ್ಭದಲ್ಲಿ ಮಾತನಾಡಿ, ಸಂಘಟನೆಗಳು ಹೆಚ್ಚಾದರೆ ಸಾಲದು ಸೌಹಾರ್ದತೆ ಜಾಸ್ತಿಯಾಗಬೇಕು, ಪರಸ್ಪರ ದ್ವೇಷ, ವೈಮನಸ್ಸು, ಮುನಿಸು, ಕುರ್ಚಿ ಆಸೆಗಾಗಿ ಕಿತ್ತಾಟ ಇವುಗಳಿಂದ ದೂರ ಇರಬೇಕು. ನಮ್ಮ ಬರವಣಿಗೆ ಮೂಲಕ ಘನತೆ, ಗೌರವ ಹೆಚ್ಚಿಸಿಕೊಳ್ಳಬೇಕು. ಗುಲಾಮಗಿರಿ ಸ್ವಭಾವದಿಂದ ಮೇಲೆದ್ದು ಸ್ವಾಭಿಮಾನ ಬೆಳೆಸಿಕೊಳ್ಳಬೇಕು. ಪತ್ರಿಕಾ ದಿನಾಚರಣೆಯನ್ನು ನಾಡಿನ ಓರ್ವ ಹಿರಿಯ ಪತ್ರಕರ್ತ–ರಿಂದ ಉದ್ಘಾಟಿಸಬೇಕು. ಆ ದಿನ ಬರಿ ದಿನಾಚರಣೆಯಾಗಿ ಸೀಮಿತವಾಗದೇ ಆತ್ಮಾವಲೋಕನ ಮಾಡಿಕೊಳ್ಳುವ ದಿನವಾಗಬೇಕೆಂದು ಕರೆ ನೀಡಿದರು. ಕೆಯುಡಬ್ಲ್ಯೂಜೆ ನೂತನ ಜಿಲ್ಲಾ ಗೌರವ ಸಲಹೆಗಾರ ಬಾಬುವಾಲಿ ಮಾತನಾಡಿ, ಅಂದು ಪತ್ರಿಕಾ ದಿನಾಚರಣೆ ಜೊತೆಗೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಚಾರ ಗೋಷ್ಟಿಗಳು, ಸಂಜೆ ಪತ್ರಕರ್ತರ ಕುಟುಂಬದವರಿಗೆ ಸಂಗೀತ ಸಂಜೆ, ಬೆಳದಿಂಗಳೂಟ ಏರ್ಪಡಿಸೋಣ ಎಂದರು.

ಕೆಯುಡಬ್ಲ್ಯೂಜೆ ಜಿಲ್ಲಾಧ್ಯಕ್ಷ ಡಿ.ಕೆ ಗಣಪತಿ ಮಾತನಾಡಿ, ಪತ್ರಿಕಾ ದಿನಾಚರಣೆ ನಿಮಿತ್ಯ ಆರೋಗ್ಯ ಶಿಬಿರ, ರಕ್ತದಾನ ಶಿಬಿರ, ಕ್ರೀಡಾ ಸ್ಪರ್ಧೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳೊಣ ಎಂದರು. ಹಿರಿಯ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಸಲಹೆ ನೀಡಿ ಈ ವರ್ಷದ ಪತ್ರಿಕಾ ದಿನಾಚರಣೆ ಅದ್ದೂರಿಯಾಗಿ ಆಚರಿಸದೆ ಅರ್ಥಪೂರ್ಣವಾಗಿ ಆಯೋಜಿಸಬೇಕು. ಹಾರ, ತುರಾಯಿಗಳಿಂದ ವಿಮುಖರಾಗಿ ಪುಸ್ತಕ ಸಂಸ್ಕೃತಿ ಬೆಳೆಸಬೇಕಿದೆ ಎಂದರು. ಹಿರಿಯ ಪತ್ರಕರ್ತ ಗಂಧರ್ವ ಸೇನಾ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಅಧ್ಯಕ್ಷ ವಿಜಯಕುಮಾರ ಪಾಟೀಲ, ವಿದ್ಯುನ್ಮಾನ ಮಾಧ್ಯಮಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಮರಕಲೆ ಮಾತನಾಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಪ್ರಾಸ್ತಾವಿಕ ಮಾತನಾಡಿದರು. ಈ ವೇಳೆ ಪತ್ರಕರ್ತರಾದ ಮಲ್ಲಿಕಾರ್ಜುನ ಬಿರಾದಾರ, ಮಾಳಪ್ಪ ಅಡಸಾರೆ, ಆನಂದ ದೇವಪ್ಪ, ಅಶೋಕಕುಮಾರ ಕರಂಜಿ, ಬಸವರಾಜ ಪವಾರ, ಶ್ರೀನಿವಾಸ ಚೌಧರಿ, ಪ್ರಥ್ವಿ–ರಾಜ.ಎಸ್, ಆಧೀಶ ವಾಲಿ, ಪ್ರವಿಣಕುಮಾರ ಮೇತ್ರೆ, ವಿಜಯಕುಮಾರ ಸೋನಾರೆ ತಮ್ಮ ಸಲಹೆ ಮಂಡಿಸಿದರು. ಪತ್ರಕರ್ತರಾದ ದೀಪಕ ವಾಲಿ, ಡಾ.ರಜನೀಶ ವಾಲಿ, ಅಪ್ಪಾರಾವ ಸೌದಿ, ವಿಜಯಕುಮಾರ ಬೆಲ್ದೆ, ಶಶಿಕಾಂತ ಬಂಬುಳಗಿ, ಶಶಿಕುಮಾರ ಪಾಟೀಲ, ಖಾಜಿ ಅಲಿಯುದ್ದಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಆರಂಭದಲ್ಲಿ ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಉಪಾಧ್ಯಕ್ಷ ನಾಗಶೆಟ್ಟಿ ಧರಂಪುರ ವಂದಿಸಿದರು.

# ಪ್ರತಿಯೊಬ್ಬರು ನರೇಗಾ ಯೋಜನೆಯ ಲಾಭ ಪಡೆಯಿರಿ:ರಾಹುಲ್ ಕೈವಾರೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲ್ಲೂಕಿನ ಚಾಂಗಲೇರಾ ಗ್ರಾಮ ಪಂಚಾಯತ್ ಆವರಣದಲ್ಲಿ 2025–26ನೇ ಸಾಲಿನ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ ಕೈಗೊಳ್ಳಲಾಯಿತು. ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮದ ತಾಲೂಕ ವ್ಯವಸ್ಥಾಪಕ ರಾಹುಲ್ ಕೈವಾರೆ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಗಂಡು ಹೆಣ್ಣಿಗೂ ಸಮಾನ ಕೆಲಸ ಹಾಗೂ ಸಮಾನ ವೇತನ ನೀಡಲಾಗುತ್ತಿದೆ. ಪ್ರತಿಯೊಂದು ಕುಟುಂಬಕ್ಕೂ ವರ್ಷಕ್ಕೆ 100 ದಿನಗಳ ಕೆಲಸ ನೀಡಲಾಗುತ್ತಿದ್ದು, ಪ್ರತಿಯೋಬ್ಬರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 15ನೇ ಹಣಕಾಸು ಆಯೋಗದ ಅನುದಾನ ಮತ್ತು 2020–21ನೇ ಸಾಲಿನಿಂದ 2024–25ನೇ ಸಾಲಿನ ವರೆಗೆ ಜಿಲ್ಲಾ ಮತ್ತು ತಾಲೂಕು ಪಂಚಾಯತನ ರಾಜ್ಯ ಹಣಕಾಸು ಆಯೋಗದ ಅನುದಾನದಡಿ ಅನುಷ್ಠಾನ ಮಾಡಿರುವ ಕಾಮಗಾರಿಗಳ/ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು. ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಕಂಡು ಬಂದಿರುವ ಅಂಶಗಳ ಬಗ್ಗೆ ಮಾಹಿತಿ ನೀಡಿದರು. ಅದರಂತೆ ಸಭೆಯಲ್ಲಿ ತಿರ್ಮಾನಗಳು ಕೈಗೋಳ್ಳಲಾಯಿತು. ಸಾಮಾಜಿಕ ಲೆಕ್ಕ ಪರಿಶೋಧನೆ ಜಿಲ್ಲಾ ವ್ಯವಸ್ಥಾಪಕ ದೇವಿದಾಸ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಫಾಳೆಮ್ಮ, ಅಭಿವೃದ್ಧಿ ಅಧಿಕಾರಿ ರಾಮಚಂದ್ರ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಹಾಯಕ ಮಹೇಬೂಬ್, ಕಾರ್ಯದರ್ಶಿ ಶ್ಯಾಮುವೆಲ್, ಸಂಪನ್ಮೂಲ ವ್ಯಕ್ತಿ ತುಕರಾಮ, ಗುರು, ವಿನೋದ ಪಂಚಾಳ, ಗ್ರಾಮ ಪಂಚಾಯತ ಸಿಬ್ಬಂದಿ ವರ್ಗದವರು ಸೇರಿದಂತೆ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.



ಹುಮನಾಬಾದ: ಬೀದರ್ ಜಿಲ್ಲೆಯ ಸಂಸದರಾದ ಸಾಗರ್ ಈಶ್ವರ್ ಖಂಡ್ರೆ ರವರಿಗೆ ಇತ್ತಿಚೇಗೆ ನಿಷ್ಠಾವಂತ ಕಾರ್ಯಕರ್ತ ಮಿಥುನ್ ಡಿಕೆರವರು ಭೇಟಿ ನೀಡಿ ಸನ್ಮಾನಿಸಿದರು.(ಮಲ್ಲಮ್ಮ ನುಡಿ ಚಿತ್ರ.)

# ಬೆನ್ನೂರು ಗ್ರಾಮದ 31ನೇ ವಿತರಣಾ ಕಾಲುವೆಯ ದಾರಿ ತೆರವು ಕಾರ್ಯ: ಕಾಲುವೆ ಮುಚ್ಚುವ ಹುನ್ನಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಕಾರಟಗಿ ತಾಲ್ಲೂಕಿನ ಬೆನ್ನೂರು ಗ್ರಾಮದ 31ನೇ ವಿತರಣಾ ಕಾಲುವೆ ದಾ–ರಿಯ ತೆರವು ಕಾರ್ಯ ನಡೆ–ಯುತ್ತಿದ್ದು, ಇದರಿಂದ ಕಾಲುವೆ ಮುಚ್ಚುವ ಹುನ್ನಾರ ನಡೆದಿದೆ ಎಂದು ಬೆನ್ನೂರು ಗ್ರಾಮ ಮತ್ತು ಬೆನ್ನೂರು ತಾಂಡಾದ ನಿವಾಸಿಗಳು ಆರೋಪಿಸಿದ್ದಾರೆ.

ಬೆನ್ನೂರು ಗ್ರಾಮದ 31ನೇ ವಿತರಣಾ ಕಾಲುವೆಯ ದಾರಿಯನ್ನು ಕಿತ್ತು ಹಾಕುತ್ತಿರುವುದರಿಂದ ಗ್ರಾಮಸ್ತರ ಹೊಲಗಳಿಗೆ ಹಾಗೂ ತಾಂಡಾದ ಸಾರ್ವಜನಿಕರಿಗೆ ಮತ್ತು ಶಾಲಾ ಮಕ್ಕಳಿಗೆ ತುಂಬಾ ತೊಂದರೆ ಆಗುತ್ತಿದೆ. ತಾಂಡದ ಜನರಿಗೆ ಇರುವುದು ಇದು ಒಂದೇ ದಾರಿ. ಅದರಲ್ಲೂ ಅದು ಹದಿಗೆಟ್ಟಿದೆ. ಆದರೆ, ಈ ದಾರಿಯನ್ನು ಬೆನ್ನೂರ ನಿವಾಸಿ ಕುರಿ ಆಂಬಣ್ಣ ತಂದೆ ಯಂಕಪ್ಪ ಕುರಿ ಸಾ. ಬೆನ್ನೂರು ಎಂಬುವವರು ತಮ್ಮ ಹೊಲದ ಬದುವಿಗಾಗಿ ರಸ್ತೆಯ ಮಣ್ಣನ್ನು ತಿವಿದು ತಮ್ಮ ಹೊಲಗಳಿಗೆ ಹಾಕಿಕೊಳ್ಳುತ್ತಿದ್ದಾರೆ. ಅದಲ್ಲದೆ ತಮ್ಮ ಹೊಲವನ್ನು ಅಗಲ ಮಾಡಿಕೊಳ್ಳುತ್ತಿದ್ದಾರೆ. ಹಾಗೆ ದಾರಿಯನ್ನು ಅತಿಕ್ರಮಿಸಿ, ರಸ್ತೆ ಗಾತ್ರವನ್ನು ಚಿಕ್ಕದಾಗಿಸುತ್ತಿದ್ದಾರೆ. ಇದಕ್ಕೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಗಮನ ಹರಿಸಬೇಕು ಮತ್ತು ಆದಷ್ಟು ಬೇಗ ಈ ರಸ್ತೆಯನ್ನು ಅಭಿವೃದ್ಧಿ ಮಾಡಿಸಿಕೊಡಬೇಕೆಂದು ಬೆನ್ನೂರು ತಾಂಡಾದ ನಿವಾಸಿಗಳು ಆಗ್ರಹಿಸಿದ್ದಾರೆ.

# ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್, ಜಿಲ್ಲಾ ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೊಪ್ಪಳ ಇವರುಗಳ ಸಂಯುಕ್ತಾಶ್ರಯದಲ್ಲಿ ಜುಲೈ 05 ರಂದು ಸರಕಾರಿ ಪದವಿ ಪೂರ್ವ ಕಾಲೇಜು, ಯಲಬುರ್ಗಾದಲ್ಲಿ ಮಕ್ಕಳ ಹಕ್ಕುಗಳ ಮತ್ತು ಮಕ್ಕಳ ಪರವಾದ ಕಾನೂನುಗಳ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಲೀಗಲ್ ಕಂ. ಪ್ರೊಬೇಷನ್ ಅಧಿಕಾರಿ ಶಿವಲೀಲಾ ವನ್ನೂರು, ಅವರು ಮಕ್ಕಳ ಹಕ್ಕುಗಳ ಮತ್ತು ಮಕ್ಕಳ ಪರವಾದ ಕಾನೂನುಗಳ ಕುರಿತು, ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಶಾಲೆ ಬಿಟ್ಟ ಮಕ್ಕಳ ಬಗ್ಗೆ, ಲೈಂಗಿಕ ದೌರ್ಜನ್ಯ ಹೀಗೆ ಮಕ್ಕಳ ಮೇಲೆ ಆಗುವ ದೌರ್ಜನ್ಯ ಹಾಗೂ ಕಿರುಕುಳ ಅವುಗಳ ದುಷ್ಪರಿಣಾಮ ಹಾಗೂ ಅಂತಹ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ತುರ್ತು ಕ್ರಮಗಳು ಕುರಿತು ಮಾಹಿತಿ ನೀಡಿದರು. ನಂತರ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಮತ್ತು ಮಕ್ಕಳಿಗೆ ಸುರಕ್ಷಿತ ವಾತಾವರಣ ನಿರ್ಮಾಣ ಮಾಡುವುದು ಪ್ರತಿಯೊಬ್ಬರ ಆದ್ಯ ಜವಾಬ್ದಾರಿಯಾಗಿರುತ್ತದೆ. ಈ ಕುರಿತು ಕೇವಲ ಇಲಾಖೆಗಳು ಮಾತ್ರ ಕಾರ್ಯನಿರ್ವಹಿಸಿದರೆ ಸಾಲದು, ಸಾರ್ವಜನಿಕರ ಸಹಭಾಗಿತ್ವವು ಅತೀ ಪ್ರಮುಖವಾಗಿದೆ ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಯೋಜನೆಗಳ ಕುರಿತು ಆಪ್ತ ಸಮಾಲೋಚಕರಾದ ರವಿ ಬಡಿಗೇರ ಅವರು ಮಾತನಾಡಿದರು. ಮಕ್ಕಳ ಕ್ಷೇತ್ರದಲ್ಲಿ ರಕ್ಷಣಾತ್ಮಕ ಬೆಂಬಲ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸುವ ಇಲಾಖೆಗಳ ಕುರಿತು ಮಕ್ಕಳ ಸಹಾಯವಾಣಿ–1098/112 ನ ವಿಷಯ ನಿರ್ವಾಹಕರಾದ ಬಸವರಾಜ ಗುಳೇದ್ ಅವರು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಯಲಬುರ್ಗಾ ಸರಕಾರಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಈಶಪ್ಪ, ಕಾಲೇಜು ಉಪನ್ಯಾಸಕರು, ವಿದ್ಯಾರ್ಥಿಗಳು ಹಾಜರಿದ್ದರು.




ಹುಮನಾಬಾದ:ಐಎಂಎ ಹುಮನಾಬಾದ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ವೈದ್ಯಕೀಯ ದಿನಾಚರಣೆಯ ನಿಮಿತ್ತ ತಾಲ್ಲೂಕಿನ ಬ್ಯಾಲಹಳ್ಳಿಯಲ್ಲಿ ಹಿರಿಯ ಡಾ.ಪಾಪರೆಡ್ಡಿ ಮಂಡಾರವರಿಗೆ ಸಸಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಶಶಿಕಾಂತ ಹಾರಕೂಡೆ, ನಾಗೇಶ ಸಾಲಿಮಠ, ಶರಣಪ್ಪಾ ಹಳಿದೊಡ್ಡಿ, ಡಾ.ಚಂದ್ರಕಾಂತ ಇನ್ನಿತರರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

### ನಕಲಿ ದಾಖಲೆ ಸೃಷ್ಟಿಸಿ ತಗೆದುಕೊಂಡಿರುವ ಬೇಡ ಜಂಗಮ

# ಪ್ರಮಾಣ ಪತ್ರಗಳನ್ನೂ ರದ್ದು ಪಡಿಸಬೇಕೆಂದು ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಹುಣಸಗಿ ತಾಲೂಕು ಸಮಿತಿ ವತಿಯಿಂದ ಹುಣಸಗಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಲಿಂಗಾಯತ ಜಂಗಮರು ಅನಧಿಕೃತವಾಗಿ ಪರಿಶಿಷ್ಟ ಜಾತಿ ಬೇಡ ಜಂಗಮ ಪ್ರಮಾಣ ಪತ್ರ ಪಡೆಯುತ್ತಿದ್ದು ಇದರಿಂದ ಮೂಲ ಅಸ್ಪೃಶ್ಯತೆ ಜಾತಿ ಜನಾಂಗದವರಿಗೆ ಅನ್ಯಾಯ ಆಗುತ್ತದೆ

ಜಂಗಮ ಅನ್ನುವ ಪದವನ್ನೂ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಬೇಡ ಜಂಗಮ ಜನಾಂಗದ ಆಚಾರ, ವಿಚಾರಗಳೆ ಬೇರೆ ಲಿಂಗಾಯತ ಜಂಗಮ ಜನಾಂಗದ ಆಚಾರ ವಿಚಾರಗಳೆ ಬೇರೆ ಲಿಂಗಾಯತ ಜಂಗಮರೂ ಶುದ್ಧ ಸಸ್ಯಹಾರಿಗಳು ಬೇಡ ಜಂಗಮರೂ ಮೌಂಸ ಹಾರಿಗಳು. ಮನೆಯಲ್ಲಿಯೇ ಮಾಡಿಕೊಂಡು ಹುಣ್ಣುತ್ತಾರೆ ಮತ್ತು ಭಾಷೆ ಬೇರೆ ಇದೆ ಎಂದರೂ.

ಕೂಡಲೇ ತಹಸೀಲ್ದಾರರೂ ಅನಧಿಕೃತವಾಗಿ ನಕಲಿ ದಾಖಲೆ ಸೃಷ್ಟಿಸಿ ತಗೆದುಕೊಂಡಿರುವ ಬೇಡ ಜಂಗಮ ಪ್ರಮಾಣ ಪತ್ರಗಳನ್ನೂ ರದ್ದು ಪಡಿಸಬೇಕು ಮತ್ತು ದಾಖಲೆಗಳು ಪರಿಶೀಲನೆ ಮಾಡದೆ ಪ್ರಮಾಣ ಪತ್ರ ನೀಡಿರುವ ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ವೃತ್ತ ನಿರೀಕ್ಷಕರ ಮೇಲೆ ಕರ್ತವ್ಯ ಲೋಪದಡಿ ಕ್ರಮ ಕೈಗೊಳ್ಳುವಂತೆ. ಹುಣಸಗಿ ಉಪ ತಹಸೀಲ್ದಾರ್ ಮಲ್ಲಯ್ಯ ದಂಡು ಅವರಿಗೆ ಮನವಿಯನ್ನೂ ಸಲ್ಲಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಜುಮ್ಮಣ್ಣಗುಡಿಮನಿ ಹುಣಸಗಿ ತಾಲೂಕು ಅಧ್ಯಕ್ಷ ವಿರುಪಾಕ್ಷ ಕಚಕನೂರ, ರಾಜು ದೊಡ್ಡಮನಿ ಮಾಳನೂರ ಭೀಮರಾಯ್ ಕಚಕನೂರ, ಹಣಮಂತಗುಡಿಮನಿ, ಮಲ್ಲಿಕಾರ್ಜುನ ಚಲವಾದಿ, ನಾಗರಾಜ ಚಲವಾದಿ,

ಸಲೀಮ್ ನಧಾಫ್ ಸೇರಿದಂತೆ ಇನ್ನಿತರರೂ ಉಪಸ್ಥಿತರಿದ್ದರು.

### ನಿವೃತ್ತ ಯೋಧ ರಮೇಶ್ ಮರಪಳ್ಳಿಯವರ

# ಭವ್ಯ ಮೆರವಣಿಗೆ:ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:(ಗ್ರಾಮೀಣ) ತಾಲೂಕಿನ ಗಡವಂತಿ ವೀರ ಯೋಧ ರಮೇಶ್ ಎಮ್ ಮರಪಳ್ಳಿ ರವರು ಸುಮಾರು 40 ವರ್ಷಗಳ ಕಾಲ ಸುಧೀರ್ಘ ದೇಶದ ಸೇವೆ ಮಾಡಿ ವಯೋನಿವೃತ್ತಿ ಹೊಂದಿ ಗ್ರಾಮಕ್ಕೆ ಮರಳಿದ ಸಂದರ್ಭದಲ್ಲಿ ಗ್ರಾಮಸ್ಥರು ಕುಟುಂಬ ಸದಸ್ಯರಿಂದ ಆಯೋಜಿಸಿದ ಸನ್ಮಾನ ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಬಿ. ಪಾಟೀಲ್ ಭಾಗವಹಿಸಿ ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ದೇಶಕ್ಕಾಗಿ ತಮ್ಮ ಪ್ರಾಣವನ್ನಾದರೂ ತ್ಯಾಗ ಮಾಡಲು ಸಿದ್ಧವಿರುವ ಸೈನಿಕರು ದೇಶದ ಗಡಿಯನ್ನು ಅವರು ಕಾಯುತ್ತಾ–ರೆ, ಪ್ರಕೃತಿ ವಿಕೋಪದಂತಹ ಸಂದರ್ಭಗಳಲ್ಲಿ ಜನರನ್ನು ರಕ್ಷಿಸುತ್ತಾರೆ ಮತ್ತು ತಮ್ಮೆಲ್ಲಾ ಕಷ್ಟಗಳ ನಡುವೆಯೂ ಜನರ ಸುರಕ್ಷತೆಗಾಗಿ ಶ್ರಮಿಸುತ್ತಾರೆ. ಎಂದರು.

ಯೋಧ ರಮೇಶ್ ಮರ್ಪಳ್ಳಿ ಅವರು ಗ್ರಾಮಕ್ಕೆ ಆಗಮಿಸಿದಾಗ ಗ್ರಾಮಸ್ಥರು ಕುಟುಂಬದ ಸದಸ್ಯರು ಭವ್ಯವಾಗಿ ಸ್ವಾಗತಿಸಿಕೊಂಡು ಮೆರವಣಿಗೆ ಮುಖಾಂತರ ಸನ್ಮಾನ ಕಾರ್ಯಕ್ರಮಕ್ಕೆ ಕರೆ ತರಲಾಯಿತು.

ಈ ಸಂದರ್ಭದಲ್ಲಿ ಭಾಗ್ಯ ಜ್ಯೋತಿ ಮರಪಳ್ಳಿ, ಚೇತನ್ ಗೋಖಲೆ, ಜೈಕುಮಾರ್ ಶಿಂಧೆ, ಬಸವಂತರಾವ ವಿಭೂತಿ, ಪಂಚಶೀಲ ಹೆಗ್ಗಣಿ, ಓಂಕಾರ್ ತುಂಬಾ, ಶಶಿಕಾಂತ್ ಗಂಗಸಿರಿ, ಪ್ರಕಾಶ್ ರೋಗನ್, ದಿಲೀಪ್ ಮರಪಳ್ಳಿ, ಮಾವವರ್ಧನ್ ಮರಪಳ್ಳಿ, ಗಜೇಂದ್ರ ಕನಕಟಕರ್, ಸುರೇಶ ಫಾಂಗ್ರೆ, ದೇವೇಂದ್ರ ಪೋಲಾ, ರವಿ ಹೊಸಳ್ಳಿ ಉಪಸ್ಥಿತರಿದ್ದರು. ವಿಷ್ಣುವರ್ಧನ್ ಮರಪಳ್ಳಿ ಸ್ವಾಗತಿಸಿದರು, ದಯಾನಂದ ನವಲೆ ವಂದಿಸಿದರು,

# ಸಾರ್ವಜನಿಕ ಮೆರವಣಿಗೆ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 05– ಜಿಲ್ಲೆಯ ದೇವದುರ್ಗ ತಾಲೂಕಿನ ರಾಮದುರ್ಗ ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವದೃಷ್ಟಿಯಿಂದ ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರನ್ವಯ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪುಗುಂಪಾಗಿ ಆಚರಿಸುವುದನ್ನು ಮತ್ತು ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ನಿಷೇಧಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

### ಗುರುಮಠಕಲ್ ಕ್ಷೇತ್ರ ಬೀಡುವ ಪ್ರಶ್ನೆಯೇ ಇಲ್ಲ: ಶಾಸಕ ಶರಣಗೌಡ ಸ್ವಷ್ಟನೆ.

# 2028 ಕ್ಕೆ ರಾಜ್ಯದಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಸರ್ಕಾರ ಕುಮಾರಣ್ಣ ಮತ್ತೇ ಸಿಎಂ: ನಿಖಿಲ್ ವಿಶ್ವಾಸ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ರಾಜ್ಯದಲ್ಲಿ ಮುಂಬರುವ 2028ರಲ್ಲಿ ಜೆಡಿಎಸ್,ಬಿಜೆಪಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ, ಪೂರ್ಣ ಪ್ರಮಾಣದ ಸರ್ಕಾರ ರಚನೆಗೊಂಡು ಕುಮಾರಣ್ಣ ಮುಖ್ಯಮಂತ್ರಿಯಾಗುವುದು ಶತಸಿದ್ಧ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವಿಶ್ವಾಸದಿಂದ ನುಡಿದರು.

ಇಲ್ಲಿನ ಯರಗೋಳ್ ರಸ್ತೆಯಲ್ಲಿನ ಸಪ್ತಪದಿ ಕಲ್ಯಾಣ ಮಂಟಪದಲ್ಲಿ ಶನಿವಾರ ಜಿಲ್ಲಾ ಜೆಡಿಎಸ್ ಆಯೋಜಿಸಿದ್ದ ಜನರೊಂದಿಗೆ ಜನತಾದಳ ಮತ್ತು ಸದಸ್ಯತ್ವ ನೊಂದಣಿ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಉದ್ದಗಲಕ್ಕೂ ಪ್ರವಾಸ ಕೈಗೊಳ್ಳುವ ಮೂಲಕ ಪಕ್ಷವನ್ನು ಬೇರುಮಟ್ಟದಿಂದ ಸಂಘಟಿಸಿ, ಆ ಮೂಲಕ ಮುಂದಿನ ಚುನಾವಣೆಯಲ್ಲಿ ಮಿತ್ರ ಪಕ್ಷ ಬಿಜೆಪಿಯೊಂದಿಗೆ ಅಧಿಕಾರಕ್ಕೆ ಬಂದು ರೈತರ, ಮಹಿಳೆಯರ ಮತ್ತು ಯುವಕರ ಆಶಾಕಿರಣವಾಗಿ ಕೆಲಸ ಮಾಡುವ ಇಚ್ಛೆ ದೇವೇಗೌಡ ಮತ್ತು ಕುಮಾರಸ್ವಾಮಿ ಅವರದ್ದು ಆಗಿದೆ ಎಂದರು.

ರಾಜ್ಯದ ಎಲ್ಲಡೆ ಸುಮಾರು 50 ಲಕ್ಷ. ಸದಸ್ಯತ್ವದ ಗುರಿ ಹೊಂದಲಾಗಿದ್ದು, ಇಲ್ಲಿ ಸೇರಿದಂತಹ ಎಲ್ಲರೂ ಮಿಸ್ ಕಾಲ್ ಕೊಡುವ ಸದಸ್ಯತ್ವ ಪಡೆ–ಯರಿ ಮತ್ತು ಬೂತಮಟ್ಟದಲ್ಲಿ ಕೂಡಾ ಸದಸ್ಯತ್ವ ಮಾಡಿಸಿರಿ ಎಂದರು.

**ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಸತ್ತಿದೆ : ಆರೋಪ**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸತ್ತು ಹೋಗಿದೆ. ಪ್ರಮಾಣಿಕ ಅಧಿಕಾರಿಗಳಿಗೆ ಬೆಲೆ ಇಲ್ಲ ಎಂದು ನಿಖಿಲ್, ಕಾನೂನು ಬಾಹಿರ ಕೆಲಸಗಳನ್ನು ತಡೆಯುತ್ತಿರುವ ಮಂಡ್ಯದ ಮೂಲದ ಇಲ್ಲಿನ ಎಸ್ ಪಿ ಪ್ರಥ್ವಿಕ್ ಶಂಕರ್ ಅವರನ್ನು ಕಾಂಗ್ರೆಸ್ ನ ಕೆಲವು ಪ್ರಭಾವಿಗಳು ವರ್ಗ ಮಾಡಿಸಲು ಮುಂದಾಗಿರುವ ವಿಷಯವೇ ಸಾಕು. ಈ ಸರ್ಕಾರಕ್ಕೆ ಎಂತಹ ಅಧಿಕಾರಿಗಳು ಬೇಕು ಎಂಬುವುದು ತಿಳಿಯುತ್ತದೆ ಎಂದು ನಿಖಿಲ್ ಚಾಟಿ ಬೀಸಿದರು.**ರಾಜ್ಯ ದಿವಾಳಿ** : ಆರೋಪ

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದೆ. ಜೆಡಿಎಸ್ ಕಥೆ ಮುಗಿದು ಮುಗಿದೋಯ್ತು ಅಂತಾರೆ. ಆದರೆ ನಿಮ್ಮ ಪಕ್ಷ ಎಷ್ಟು ರಾಜ್ಯದಲ್ಲಿ ಅಧಿಕಾರದಲ್ಲಿದೆ ಎಂದು ಅವರು ಪ್ರಶ್ನಿಸಿದರು. ನೂರು ವರ್ಷ ಇತಿಹಾಸ ಇರುವ ಕಾಂಗ್ರೆಸ್ ಮೂರು ರಾಜ್ಯಕ್ಕೆ ಸೀಮಿತವಾಗಿದೆ ಎಂದು ವಾಗ್ದಾಳಿ ನಡೆಸಿದರು.

ದೇವೇಗೌಡರ ನೆರಳಾಗಿ **ಕಂದಕೂರು ಕುಟುಂಬ.**

**ಜೆಡಿಎಸ್ ಪಕ್ಷದ ಜೊತೆ ಗಟ್ಟಿಯಾಗಿ ನಿಂತಿದ್ದು ಕಂದಕೂರ ಕುಟುಂಬ.**

ಮಾಜಿ ಪ್ರಧಾನಿಗಳು ದೇವೇಗೌಡರ ಜೊತೆ ಹೆಗಲಿಗೆ ಹೆಗಲು ಕೊಟ್ಟು ಎಷ್ಟೇ ತೊಂದರೆ, ಸಂಕಷ್ಟಗಳು ಎದುರಾದರು ಪಕ್ಷದ ಜೊತೆ ಗಟ್ಟಿಯಾಗಿ ನಿಂತಿದ್ದು ಕಂದಕೂರ ಕುಟುಂಬ. ದಿ. ಸದಾಶಿವ ರೆಡ್ಡಿ ಕಂದಕೂರು, ದಿ. ನಾಗನಗೌಡ ಕಂದಕೂರು ಅವರ ಪಕ್ಷ ನಿಷ್ಠೆ ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ ಎಂದು ಹೇಳಿದರು.

ಶರಣಗೌಡ ಮಾನಸ ಪುತ್ರ.

ಕುಮಾರಣ್ಣನಿಗೆ ನಾನೊಬ್ಬನೇ ಮಗ ನಿಜ. ಆದರೆ ಶರಣಗೌಡ ಕಂದಕೂರ ಮಾನಸಪುತ್ರ, ಮಗನ ಸಮಾನ. ಬೇರೆ ಬೇರೆ ಪಕ್ಷದಲ್ಲಿ ಅಧಿಕಾರ ಅನುಭವಿಸುತ್ತಿರುವ 50ಕ್ಕೂ ಹೆಚ್ಚು ಶಾಸಕರು, ಸಚಿವರು ಜೆಡಿಎಸ್ ಪಕ್ಷದ ಪಳೆಯುಳಿಕೆಗಳೆ. ನಮ್ಮ ಪಕ್ಷದಲ್ಲಿ ಅಧಿಕಾರ ಅನುಭವಿಸಿ. ಈಗ ಬೇರೆ ಪಕ್ಷಕ್ಕೆ ಹೋಗಿ ನಮ್ಮ ಪಕ್ಷದ ಬಗ್ಗನೇ ಮಾತನಾಡುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕರ್ತರ ಕಷ್ಟ, ನೋವು ಕೇಳಲು ರಾಜ್ಯ ಪ್ರವಾಸ.

ಜೆಡಿಎಸ್ ಪಕ್ಷದಿಂದ ಸಾಕಷ್ಟು ಜನ ಶಾಸಕರಾಗಿದ್ರು. ಎರಡು ರಾಷ್ಟ್ರೀಯ ಪಕ್ಷಗಳ ಬಹುತೇಕ ಶಾಸಕರು, ಸಚಿವರಾದವರು ಜನತಾದಳದ ಔಟ್ ಪುಟ್ ಗಳು. ಹಿಂದಿನ ರಾಜಕೀಯ, ಈಗಿನ ರಾಜಕೀಯಕ್ಕೆ ಅಧಿಕಾರ, ಹಣದ ಆಸೆಗೆ ಪಕ್ಷವನ್ನು ತ್ಯಜಿಸಿರಬಹುದು ಆದರೆ ದೇವೇಗೌಡರಿಗೆ ಹಾಗೂ ಕುಮಾರಸ್ವಾಮಿಗೆ ಬೆಂಬಲವಾಗಿ ನಿಂತಿರುವುದು ಕಂದಕೂರು ಕುಟುಂಬ ಎಂದು ಹೇಳಿದರು.

ರಾಜ್ಯ ಪ್ರವಾಸದ ಹಿಂದೆ ರಾಜ್ಯಾಧ್ಯಕ್ಷ ಫ್ಲಾನ್ ಇದೆ ಅಂತ ಮಾಧ್ಯಮದಲ್ಲಿ ಚರ್ಚೆ ಆಗ್ತಿದೆ. ಇನ್ನು ಚುನಾವಣೆ ಮೂರು ವರ್ಷವಿದೆ. ನಾನು ಕಾರ್ಯಕರ್ತನಾಗಿ ರಾಜ್ಯದ ಉದ್ದಗಲ್ಲಕ್ಕೂ ಕಾರ್ಯಕರ್ತರ ಜೊತೆ ಬಾಂಧವ್ಯ, ಸಂಪರ್ಕ, ಸಂಬಂಧ ಇಟ್ಟುಕೊಳ್ಳಲು ಪ್ರವಾಸ ಮಾಡ್ತಿದ್ದೇನೆ ಎಂದು ತಿಳಿಸಿದರು.

**ಗುರುಮಠಕಲ್ ಕ್ಷೇತ್ರ ಬೀಡುವ ಪ್ರಶ್ನೆಯೇ ಇಲ್ಲ: ಶಾಸಕ ಶರಣಗೌಡ ಸ್ವಷ್ಟನೆ**ಯಾದಗಿರಿ:ಗುರುಮಠಕಲ್ ಕ್ಷೇತ್ರ ಬಿಡುವ ಪ್ರಶ್ನೆಯೇ ಇಲ್ಲ. ಇದ್ದರೂ ಅಲ್ಲಿಯೇ, ಸತ್ತರೂ ಅಲ್ಲಿಯೇ ಎಂದು ಶಾಸಕ ಶರ–ಣಗೌಡ ಕಂದಕೂರು ಹೇಳಿದರು.

ಜನರೊಂದಿಗೆ ಜನತಾದಳ ಮತ್ತು ಸದಸ್ಯತ್ವ ನೊಂದಣಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುರುಮಠಕಲ್ ಕ್ಷೇತ್ರ ತೊರೆಯುತ್ತಾರೆಂಬ ಮಾತುಗಳು ಅಲ್ಲಲ್ಲಿ ಕೇಳಿ ಬರುತ್ತಿರುವ ಹಿನ್ನಲೆಯಲ್ಲಿ ಸ್ಪಷ್ಟನೆ ನೀಡಿದ ಅವರು, ನಮ್ಮ ತಂದೆ ಮತ್ತು ನನಗೂ ರಾಜಕೀಯ ನೆಲೆ ಒದಗಿಸಿ ಶಾಸಕರನ್ನಾಗಿ ಮಾಡಿದ ಗುರುಮಠಕಲ್ ಕ್ಷೇತ್ರದ ಜನತೆ ಋಣ ಸಾಕಷ್ಟಿದೆ. ಕಾರಣ ಈ ಬಗ್ಗೆ ಯಾರು ತಲೆ ಕೆಡಿಸಿಕೊಳ್ಳಬಾರದೆಂದರು.

ಮುಂದೇ ರಾಜ್ಯದಲ್ಲಿ ನಮ್ಮ ಸರ್ಕಾರ ಬರುತ್ತೆ, ಕುಮಾರಣ್ಣ ಅವರು ಸಿಎಂ ಆಗುತ್ತಾರೆ. ನಮಗೆ ಮಂತ್ರಿ ಮಾಡುವ ಬದಲು ನಮ್ಮ ಗೆಲುವಿಗೆ ಹಗಲಿರುಳು ದುಡಿದು ಏನೊಂದು ಆಶೆ ಪಡದ ಕಾರ್ಯಕರ್ತರ ಒಳಿತಿಗಾಗಿ ಸರ್ಕಾರದಿಂದ ಸಹಾಯ ಮಾಡಬೇಕು. ಸ್ಥಳಿಯವಾಗಿ ಅಧಿಕಾರ ನೀಡಬೇಕೆಂಬ ಮನವಿ ಶಾಸಕ ಶರಣಗೌಡ ಮಾಡಿದರು.

ಕೆರೆಗಳಿಗೇ ನೀರು ತುಂಬಿಸಲು 165 ಕೋಟಿ ರೂ. ನೀಡಿದ್ದರು.

ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ಗುರುಮಠಕಲ್ ಮತಕ್ಷೇತ್ರದ 18 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ 165 ಕೋಟಿ ರೂ. ಮಂಜೂರು ಮಾಡಿದ್ದರು. ಮುಂದೆ ಸರ್ಕಾರ ಬದಲಾದಾಗ ಹಣ ವಾಪಸ್ ಹೊಗಿತ್ತು. ಈ ವಿಷಯ ಕುಮಾರಸ್ವಾಮಿ ಅವರ ಗಮನಕ್ಕೆ ತಂದಾಗ ನನ್ನನ್ನು ನೇರವಾಗಿ ಆಗಿನ ಸಿಎಂ ಬಸವರಾಜ ಬೊಮ್ಮಾಯಿ ಅವರ ಮನೆಗೆ ಕರೆದುಕೊಂಡು ಹೋಗಿ ತಾವು ಶಾಸಕರಾಗಿದ್ದ ಚನ್ನಪಟ್ಟಣಕ್ಕೆ ಅನುದಾನ ಬೇಡ. ಗುರುಮಠಕಲ್ ಕ್ಷೇತ್ರಗಳಿಗೆ ನೀಡಿ ಎಂದು ಅನುದಾನ ಕೊಡಿಸಿದ ಪುಣ್ಯಾತ್ಮ ಎಂದು ಶಾಸಕರು ಹೇಳಿದರು.

ಪಕ್ಷದ ಸಂಘಟನೆಗೆ ಹೆಚ್ಚಿನ ಸಮಯ ನೀಡಿ ಜಿಲ್ಲೆಯಲ್ಲಿ ಹೆಚ್ಚಿನ ಸದಸ್ಯತ್ವ ಮಾಡಿಲಾಗುವುದೆಂದರು.

ಮಾಜಿ ಸಚಿವ ವೆಂಕಟರಾವ ನಾಡಗೌಡ ಮಾತನಾಡಿ, ದೇವೇಗೌಡರಿಂದಾಗಿಯೇ ಈ ಭಾಗ ನೀರಾವರಿ ಕಂಡಿದೆ ಮತ್ತು ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ 25 ಸಾವಿರ ಕೋಟಿ ರೂ. ರೈತರ ಸಾಲ ಮನ್ನಾ ಮಾಡಿದ್ದರು. ಈ ಕುಟುಂಬ ಜನರ ಪರ ಇದೆ. ಮತ್ತೇ ಕುಮಾರಣ್ಣ ಸಿಎಂ ಆಗಬೇಕು.ನಂತರ ರಾಜ್ಯದ ಅಭಿವೃದ್ಧಿ ದಿಕ್ಕನ್ನೇ ಬದಲಿಸುತ್ತಾರೆಂದರು. ಮಾಜಿ ಶಾಸಕರಾದ ದೊಡ್ಡಪ್ಪಗೌಡ ಪಾಟೀಲ್ ನರಿಬೋಳ್, ರಾಜಾ ವೆಂಕಟಪ್ಪ ನಾಯಕ್, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ರಶ್ಮಿ ರಾಮೇಗೌಡ ಮಾತನಾಡಿದರು.

ಜಿಲ್ಲಾಧ್ಯಕ್ಷ ಸುಭಾಷ್ ಕಟಕಟಿ ಸ್ವಾಗತಿಸಿದರು. ವೇದಿಕೆಯಲ್ಲಿ ಇದ್ದ ಪ್ರಮುಖರು ವೇದಿಕೆಯಲ್ಲಿ ತಾಲೂಕು ಅಧ್ಯಕ್ಷ ಪ್ರಕಾಶ ನಿರೆಟಿ, ಹಿರಿಯ ಮುಖಂಡರಾದ ಎಸ್. ಬಿ.ಪಾಟೀಲ್, ಅನ್ಸಾರಿ ಪಟೇಲ್, ಚನ್ನಪ್ಪಗೌಡ ಮೊಸಂಬಿ, ವಿಶ್ವನಾಥ ಸಿರವಾಳ, ಮಹಿಳಾ ಅಧ್ಯಕ್ಷೆ ನಾಗರತ್ನ ಅನಪುರ, ಕಲಬುರಗಿ ಜಿಲ್ಲಾಧ್ಯಕ್ಷ ಬಾಲರಾಜ್ ಗುತೆ–ೇದಾರ, ವಕ್ತಾರ ಮಲ್ಲಣ್ಣಗೌಡ ಕೌಳೂರು ಸೇರಿದಂತೆಯೇ ಅನೇಕರು ಇದ್ದರು. ಆರಂಭದಲ್ಲಿ ಕುಂಭ ಹೊತ್ತ ನೂರಾರು ಮಹಿಳೆಯರು ನಿಖಿಲ್ ಕುಮಾರಸ್ವಾಮಿ ಅವರನ್ನು ಸ್ವಾಗತಿಸಿದರು. ಸಭಾಂಗಣ್ಣದಲ್ಲಿ ಕಿಕ್ಕಿರಿದು ಜನರು ಸೇರಿದ್ದರು.

# ಜು. 7 ರಂದು ಶಿಕ್ಷಣ ಸಚಿವರ ಕೊಪ್ಪಳ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್.ಮಧು ಬಂಗಾರಪ್ಪ ಅವರು ಜುಲೈ 7ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಅಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಹಿರೇವಂಕಲಕುಂಟ ಗ್ರಾಮದ ನೂತನ



ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12ಕ್ಕೆ ಹುಲೇಗುಡ್ಡ ಗ್ರಾಮದ ಮತ್ತು 2 ಗಂ–ಟೆಗೆ ದ್ಯಾಂಪುರ ಗ್ರಾಮದ ನೂತನ ಸರ್ಕಾರಿ ಪ್ರೌಢಶಾಲೆ ಉದ್ಘಾಟನೆ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಚಿವರು ಅಲ್ಲಿಂದ ಗದಗ ಜಿಲ್ಲೆಯ ಕಡೆಗೆ ಪ್ರಯಾಣ ಬೆಳಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಯವರು ತಿಳಿಸಿದ್ದಾರೆ.

# ಗಡಿಭಾಗದ ಮಕ್ಕಳ ಸಾಧನೆ ಮಾದರಿ:ಸಭಾಪತಿ ಬಸವರಾಜ ಹೊರಟ್ಟಿ



ಗ್ರಾಮೀಣ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಕಟ್ಟಿರುವ ವಿದ್ಯಾ ದೇಗುಲದಲ್ಲಿ ಗುಣಾತ್ಮಕ ಶಿಕ್ಷಣ, ಉತ್ತಮ ಸಂಸ್ಕಾರಕ್ಕೆ ಆದ್ಯತೆ ನೀಡುತ್ತಿರುವ ಪರಿಣಾಮ ಮಕ್ಕಳ ಓದು ಸಾಧನೆ ರೂಪ ಪಡೆದು ಕೊಳ್ಳುತ್ತಿದೆ.

**– ಬಸವರಾಜ ಹೊರಟ್ಟಿ ಸಭಾಪತಿಗಳು ವಿಧಾನ ಪರಿಷತ್ತು ಬೆಂಗಳೂರು**

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ರಾಷ್ಟ್ರ ಮಟ್ಟದ ನೀಟ್–ಐಐಟಿ ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತಮ ರ‍್ಯಾಂಕ್ ಪಡೆದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಕನಸು ಸಾಕಾರ ಮಾಡುತ್ತಿರುವುದು ಸಂತಸ ತರಿಸಿದೆ.

**– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.5:ಗಡಿಜಿಲ್ಲೆಬೀದರ್‌ನ ಮಕ್ಕಳು ನೀಟ್–ಐಐಟಿಯಲ್ಲಿ ಉತ್ತಮ ರ‍್ಯಾಂಕ್ ಪಡೆದು ರಾಜ್ಯದ ಕೀರ್ತಿ ಹೆಚ್ಚಿಸಿದ್ದಾರೆ ಎಂದು ವಿಧಾನ ಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ಮೆಚ್ಚುಗೆ ವ್ಯಕ್ತ ಪಡಿಸಿದರು.

ಬೆಂಗಳೂರಿನ ವಿಧಾನಸೌಧದ ವಿಧಾನಪರಿಷತ್‌ನ ಕಚೇರಿಯಲ್ಲಿ 2024–25ನೆಯ ಸಾಲಿನಲ್ಲಿ ನೀಟ್–ಐಐಟಿಯಲ್ಲಿ ರಾಷ್ಟ್ರ ಮಟ್ಟದಲ್ಲಿ ಉತ್ತಮ ರ‍್ಯಾಂಕ್ ಪಡೆದ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಕ್ಷೇತ್ರದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಲ್ಲಿಸುತ್ತಿರುವ ನಿಸ್ವಾರ್ಥ ಸೇವೆಯ ಪರಿಣಾಮ ಗಡಿ ಜಿಲ್ಲೆ ಬೀದರ್ ಇಂದು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ತನ್ನ ಛಾಪು ಮೂಡಿಸುತ್ತಿದೆ.

ಗಡಿ ಭಾಗದಲ್ಲಿ ಹಲವು ಸೌಲಭ್ಯಗಳ ಕೊರತೆಯ ನಡುವೆಯು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿರುವುದು ಹೆಮ್ಮೆ ತರಿಸಿದೆ. ಈ ಮಕ್ಕಳ ಸಾಧನೆ ಮೆಟ್ರೋಪಾಲಿಟನ್ ಸಿಟಿ ಮಕ್ಕಳಿಗೆ ಮಾದರಿಯಾಗಬೇಕು ಎಂದರು.

ನೀಟ್–ಐಐಟಿ ನಲ್ಲಿ ಉತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳಾದ ವೇದಾಂತ, ಶಶಾಂಕ ಮುಂದಿನ ಉತ್ತಮ ಸಂಶೋಧಕರಾಗಿ ನಾಡಿಗೆ ಉತ್ತಮ ಕೊಡುಗೆ ನೀಡಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಚನ್ನಬಸವೇಶ್ವರ ಗುರುಕುಲದ ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು.

# ಮಹಿಳಾ ಪೊಲೀಸರ ಅಕ್ಕ ಪಡೆಯನ್ನು ರಾಜ್ಯಾದ್ಯಂತ ವಿಸ್ತರಿಸಲು ಕ್ರಮ:ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.05:ಮಹಿಳೆಯರ ಸುರಕ್ಷತೆ ಹಿನ್ನೆಲೆಯಲ್ಲಿ ಬೀದರ ಜಿಲ್ಲಾ ಪೊಲೀಸ್ ಇಲಾಖೆಯು ರಚಿಸಿದ ಮಹಿಳಾ ಪೊಲೀಸ್ ಅಕ್ಕಪಡೆಯನ್ನು ರಾಜ್ಯಾದ್ಯಂತ ವಿಸ್ತರಿಸಲು ಗೃಹಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ತಿಳಿಸಿದರು.



ಜಿಲ್ಲಾ ಪಂಚಾಯತ ಸಭಾಭವನದಲ್ಲಿಂದು ಕಲಬುರಗಿ ವಿಭಾಗ ಮಟ್ಟದಲ್ಲಿ ಐಸಿಡಿಎಸ್ ಶಾಖೆಯಲ್ಲಿ ಕೈಗೊಂಡಿರುವ ಪ್ರಗತಿ ಪರಿಶೀಲನೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದರು.

ಮಹಿಳೆಯರ ರಕ್ಷಣೆ ಹಾಗೂ ಸಮಸ್ಯೆ ಬಗೆಹರಿಸಲು ಮಹಿಳಾ ಪೊಲೀಸರ ತಂಡ ಅಕ್ಕಪಡೆ ಮಾದರಿ ಹಾಗೂ ಶ್ಲಾಘನೀಯವಾಗಿದೆ. ಇಂಥ ಪಡೆಯನ್ನು ಪ್ರತಿ ಜಿಲ್ಲೆಯಲ್ಲೂ ರಚಿಸುವಂತೆ ಗೃಹ ಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಸಚಿವೆ ಹೆಬ್ಬಾಳಕರ್ ತಿಳಿಸಿದರು.

ಕಳೆದೆರಡು ದಿನಗಳಿಂದ ಕಲಬುರಗಿ ವಿಭಾಗದ ಏಳು ಜಿಲ್ಲೆಗಳ ಅಧಿಕಾರಿಗಳ ಸಭೆಯಲ್ಲಿ ಹಲವಾರು ವಿಷಯಗಳನ್ನು ಸುಧೀರ್ಘವಾಗಿ ಚರ್ಚಿಸಲಾಗಿದೆ.

ಮಕ್ಕಳ, ಮಹಿಳೆಯರ, ಗರ್ಭಿಣಿಯರ, ಅಂಗವಿಕಲರ ಹಾಗೂ ಹಿರಿಯ ನಾಗರಿಕರಿಗೆ ಸರಕಾರವು ಅನುಷ್ಠಾನಗೊಳಿಸಿದ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಧಿಕಾರಿಗಲಿಗೆ ನಿರ್ದೇಶನ ನೀಡಲಾಗಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳ ಕ್ಷೇತ್ರ ಮಟ್ಟದಲ್ಲಿ ಯೋಜನೆಗಲನ್ನು ಹೆಚ್ಚು ಪ್ರಚಾರ ಕೈಗೊಂಡು ಸಮಸ್ಯೆಗಳನ್ನು ಬಗೆಹರಿಸಿ ಕಾಲಕಾಲಕ್ಕೆ ನೀಡಲಾಗುವ ಗುರಿಯನ್ನು ತಲುಪಿಸಬೇಕೆಂದರು.

ಅಂಗನವಾಡಿ ಸಹಾಯಕಿಯರ ನೇಮಕಾತಿಯನ್ನು ಸರಳ ಹಾಗೂ ಪಾರದರ್ಶಕಗೊಳಿಸಲು 90 ದಿನಗಳಲ್ಲಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ. ಭಾಗ್ಯಲಕ್ಷ್ಮೀ ಯೋಜನೆಯಡಿ ರಾಜ್ಯಾದ್ಯಂತ 1.60 ಸಾವಿರ ಹೆಣ್ಣು ಮಕ್ಕಳಿಗೆ ಬಾಂಡ್ ವಿತರಿಸಲು ಕ್ರಮ ಕೈಗೊಳ್ಳುತ್ತಿದ್ದು ಈ ಪೈಕಿ 20 ಸಾವಿರ ಜನರ ವಿಳಾಸ ಸರಿಯಾಗಿ ಸಿಗುತ್ತಿಲ್ಲ. ಅವರ ಪಾಲಕರು ಸಂಪರ್ಕಿಸಿ ಪಡೆಯಬಹುದಾಗಿದೆಯೆಂದರು.

ಗೃಹಲಕ್ಷ್ಮೀ ಯೋಜನೆಯಡಿ ಕಲಬುರಗಿ ವಿಭಾಗದಲ್ಲಿ 10 ಸಾವಿರ ಕೋಟಿ ಅನುದಾನವನ್ನು ಮಹಿಳೆಯ ಆರ್ಥಿಕ ಸಬಲೀಕರಣಕ್ಕೆ ಸಂದಾಯವಾಗಿದೆ. ಈ ಕುರಿತು ಕಿರುಚಿತ್ರವೊಂದನ್ನು ನಿರ್ಮಿಸಲಾಗುವುದೆಂದರು. ಸ್ತ್ರೀಶಕ್ತಿ ಸಂಘಗಳ ಮಾದರಿಯಲ್ಲಿ ಗೃಹಲಕ್ಷ್ಮೀ ಸಂಘಗಳನ್ನು ಶೀಘ್ರವೇ ಆರಂಭಿಸಲಾಗುವುದು. ಈ ಸಂಘಗಳ ಮೂಲಕ ವಿವಿಧ ರೀತಿಯ ಸಹಾಯ ಸೌಲಭ್ಯಗಳನ್ನು ವಿತರಿಸಲಾಗುವದೆಂದರು.

ಅಂಗವಿಕಲರ ಯುಡಿಐ ಕಾರ್ಡ ವಿತರಣೆಯಲ್ಲಿರುವ ಸಮಸ್ಯೆಯನ್ನು ಶೀಘ್ರವೇ ಬಗೆಹರಿಸಲು ಕ್ರಮ ಕೈಗೊಳ್ಳಲಾಉವುದು. ಮಕ್ಕಳ ಹಾಗೂ ಮಹಿಳೆಯರ ಕಳ್ಳ ಸಾಗಾಣಿಕೆ, ಭಿಕ್ಷಟನೆ ಕುರಿತು ತೀವ್ರ ನಿಗಾ ವಹಿಸುವಂತೆ ಅದಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ. ಅಪೌಷ್ಠಿಕತೆ ನಿವಾರಣೆಗೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೆಂದರು. ಬೀದರ ಜಿಲ್ಲೆಯಲ್ಲಿ ಮೊಟ್ಟೆ ವಿತರಣೆ ಸಮಸ್ಯೆ ಕುರಿತು ಗಮನಕ್ಕೆ ಬಂದಿದ್ದು, ರಾಜ್ಯದ ಇತರೆ ಜಿಲ್ಲೆಗಳಂತೆ ಬಾಲವಿಕಾಸ ಸಮಿತಿಗೆ ಮೊಟ್ಟೆ ಅನುದಾನ ಸಂದಾಯವಾಗುವಂತೆ ಕ್ರವ ಂಕೈಗೊಳ್ಳಲಾಗುಗುದೆಂದರು.

# ವಿಶೇಷ ಚೇತನ ಫಲಾನುಭವಿಗಳಿಗೆ ವಿವಿಧ ಸವಲತ್ತು ವಿತರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೀದರ.ಜು.05:ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ವಿಶೇಷ ಚೇತನರಿಗೆ ವಿವಿಧ ಸವಲತ್ತುಗಳನ್ನು ವಿತರಿಸಿದರು.

ಅವರು ಶನಿವಾರ ಬೀದರ್ ಜಿಲ್ಲಾ ಪಂಚಾಯತ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ಸಚಿವರು 7 ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್, 5 ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್ ಕಿಟ್ ಮತ್ತು 7 ಮಂದಿಗೆ ಶ್ರವಣದೋಷ ಇರುವವರಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷಾ??ಧಿಕಾರಿ ಪ್ರದೀಪ್ ಗುಂಟಿ, ಇಲಾಖೆಯ ನಿರ್ದೇಶಕ ರಾಘವೇಂದ್ರ, ಜಂಟಿ ಕಾರ್ಯದರ್ಶಿ ಹಾಗೂ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ಸೇರಿದಂತೆ ಇಲಾಖೆಯ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು ಸೇರಿದಂತೆ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು.

# ಪಿಎಂಎವೈ(ನಗರ) 2.0 ಯೋಜನೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.5: ಬೀದರ್ ಲೋಕಸಭಾ ವ್ಯಾಪ್ತಿಯೊಳಗಿನ ನಗರಪ್ರದೇಶಗಳಲ್ಲಿ ವಾಸವಿರುವ ವಸತಿ ರಹಿತ ಅಥವಾ ನಿವೇಶನ ರಹಿತ ಕುಟುಂಬಗಳಿಂದ



ಪ್ರಧಾನಮಂತ್ರಿ ಆವಾಸ ಯೋಜನೆ (ನಗರ) 2.0 ಯಡಿಯಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹರು ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಸಂಸದ ಸಾಗರ ಖಂಡ್ರೆ ತಿಳಿಸಿದ್ದಾರೆ.

ಮನೆ ಎಂಬುದು ಪ್ರತಿಯೊಬ್ಬನೂ ಕನಸು ಕಾಣುವ ಮೂಲಭೂತ ಅಗತ್ಯ. ಪಿಎಂಎವೈ(ನಗರ) 2.0 ಯೋಜನೆಯ ಮೂಲಕ ವಸತಿ ರಹಿತ ಕುಟುಂಬಗಳಿಗೆ ಶಾಶ್ವತ ಮನೆ ನೀಡುವ ಗುರಿ ಹೊಂದಲಾಗಿದ್ದು, ನಮ್ಮ ಬೀದರ ಲೋಕಸಭಾ ಕ್ಷೇತ್ರದ ಅರ್ಹರು ಈ ಯೋಜನೆಯ ಲಾಭವನ್ನು ಪಡೆಯಬೇಕು ಎಂಬುದು ನನ್ನ ಆಶಯವಾಗಿದೆ ಎಂದಿರುವ ಯೋಜನೆಯ ಲಾಭ ಪಡೆಯಲು ಅರ್ಜಿದಾರರು ಈಗಾಗಲೇ ಯಾವುದೇ ರಾಜ್ಯ ಅಥವಾ ಕೇಂದ್ರ ಸರಕಾರದ ವಸತಿ ಯೋಜನೆಯಡಿ ಮನೆ ಸಹಾಯಧನ ಪಡೆದುಕೊಂಡಿರಬಾರದು.

ಕುಟುಂಬದ ವಾರ್ಷಿಕ ಆದಾಯ 3 ಲಕ್ಷಕ್ಕಿಂತ ಕಡಿಮೆ ಇರಬೇಕು. ಅರ್ಜಿ ಸಲ್ಲಿಕೆಗೆ ಜು.15 ಕೊನೆಯ ದಿನವಾಗಿದೆ. ಆಸಕ್ತರು ತಮ್ಮ ಸ್ಥಳೀಯ ನಗರ ಪಂಚಾಯಿತಿ/ ಮುನ್ಸಿಪಲ್ ಕಛೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಂತಿ-ಸೌಹಾರ್ದತೆಯಿಂದ ಮೊಹರಂ ಆಚರಿಸಿ: ಗುಂಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.5:ಮೊಹರಂ ಹಬ್ಬವನ್ನು ಹಿಂದೂ–ಮುಸ್ಲಿಮರು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ್ ಗುಂಟಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮೊಹರಂ ನಿಮಿತ್ತ ನಡೆದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಮಲನಗರ ಪಟ್ಟಣ ಸೌಹಾರ್ದತೆಗೆ ಹೆಸರಾವಾಸಿ. ಕೋಮು ಮನೋಭಾವನೆ ತೋರುವ ಮತ್ತು ವೈಯಕ್ತಿಕ ಜಗಳವನ್ನು ಮೊಹರಂ ಹಬ್ಬದಲ್ಲಿ ತಂದು ಗಲಭೆ ಸೃಷ್ಟಿಸುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಕೊಳ್ಳಲಾಗುವುದು. ಹಬ್ಬದ ಸಂದರ್ಭದಲ್ಲಿ ಧರ್ಮ ಮತ್ತು ಜಾತಿ ಜಾತಿಗಳ ಮಧ್ಯ ಕಂದಕ ಸೃಷ್ಟಿಸುವ ಪೋಸ್ಟ್‌ಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವವರ ಮೇಲೆ ಕಠಿಣಕ್ರಮ ಜರುಗಿಸಲಾಗುವುದು ಎಂದರು. ಭಾಲ್ಕಿ ಡಿವೈಎಸ್ಪಿ ಶಿವಾನಂದ್ ಪವಾಡಶೆಟ್ಟಿ ಮಾತನಾಡಿದರು. ಸಿಪಿಐ ಶಿವಾನಂದ್ ಗಾಣಿಗೇರ್, ಪಿಎಸ್‌ಐ ಚಂದ್ರಶೇಖರ ನಿರ್ಣೆ, ಬಾಲಾಜಿ ಬಳಕಟ್ಟೆ ಗ್ರಾಪಂ ಸದಸ್ಯ ಪ್ರವೀಣ್ ಕದಂ, ಬಾಲಾಜಿ ತೆಲಂಗ, ಸುಭಾಷ್ 2, ಶಾಂತಕುಮಾರ್ ಬಿರಾದಾರ್, ಡಿಎಸ್ ಎಸ್ ಅಧ್ಯಕ್ಷ ಗೋವಿಂದ ರಾವ್, ಪ್ರವೀಣ್ ಮಂಗಳೂರೆ, ಮಂಜುನಾಥ ಸ್ವಾಮಿ, ವಿಶ್ವನಾಥ್ ಮೋರೆ, ವೆಂಕಟರಾವ್ ಕಾಂಬಳೆ, ಅಜರ್ ಭಗವಾನ್, ಅಯೂಬ್ ಖುರೇಷಿ, ಹನಿದ್ ಸಾಬ್, ಜಂಗೀರ್ ಸಾಬ್, ನಜೀರ್ ಸಾಬ್ ಖುರೇಶಿ, ಸುರೇಶ್ ಚಾಗುಣಿ, ಶಾಲಿವನ್ ಡೊಂಗ್ರಿ, ಸುರೇಶ್ ಕಾಂಬಳೆ, ಅವಿನಾಶ ಸಿಂದೆ ಸೇರಿದಂತೆ ಅನೇಕರು ಇದ್ದರು.

# ಒಳ ಮೀಸಲಾತಿ ಜಾರಿಗೊಳಿಸಿ ಮುಖ್ಯಮಂತ್ರಿಗೆ ಮಾದಿಗ ಮುಖಂಡ ಜಾನಸನ್ ಘೋಡೆ ಮನವಿ

ಬೀದರ.ಜು.05:ರಾಜ್ಯದಲ್ಲಿ ಒಳ ಮೀಸಲಾತಿ ಕೂಡಲೇ ಜಾರಿಗೊಳಿಸಬೇಕು ಎಂದು ಮಾದಿಗ ಮುಖಂಡ ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.



ಮಾದಿಗ ಸಮುದಾಯದ ಮೂರು ದಶಕಗಳ ಹೋರಾಟದ ಫಲವಾಗಿ ಸರ್ವೋಚ್ಚನ್ಯಾಯಾಲಯ ಒಳ ಮೀಸಲಾತಿ ಜಾರಿಗೆ ಹಸಿರು ನಿಶಾನೆ ತೋರಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷಾ ವರದಿಯನ್ನು ಶೀಘ್ರ ಸರ್ಕಾರಕ್ಕೆ ಸಲ್ಲಿಸಲು ಸಂಬಂಧಪಟ್ಟವರಿಗೆ ಆದೇಶಿಸಬೇಕು. ಒಳ ಮೀಸಲಾತಿ ಜಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ.

# ಮೊಹರಂ ಹಬ್ಬ ಆಚರಣೆ ಪ್ರಯುಕ್ತ ಮದ್ಯ ಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಕಲಬುರಗಿ,ಜು.05:ಮೊಹರಂ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಕಲಬುರಗಿ ಜಿಲ್ಲೆಯಾದ್ಯಂತ (ಕಲಬುರಗಿ ನಗರ ಹೊರತುಪಡಿಸಿ) 2025ರ ಜುಲೈ 5ರ ರಾತ್ರಿ 11 ಗಂಟೆಯಿಂದ ಜುಲೈ 8ರ ಬೆಳಗಿನ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯ ಮಾರಾಟ, ಸಾಗಾಟ ಹಾಗೂ ಮದ್ಯಪಾನವನ್ನು ನಿಷೇಧಿಸಿ ಆದೇಶ ಹೊರಡಿಸಿದ್ದಾರೆ. ಕಲಬುರಗಿ ಜಿಲ್ಲೆಯಾದ್ಯಂತ (ಕಲಬುರಗಿ ನಗರ ಹೊರತುಪಡಿಸಿ) ಎಲ್ಲಾ ತರಹದ ಮದ್ಯಪಾನ, ಸರಾಯಿ, ಶೇಂಧಿ, ಸ್ವದೇಶಿ ಹಾಗೂ ವಿದೇಶಿ ಮದ್ಯಪಾನ ಮತ್ತು ಮಾದಕ ವಸ್ತುಗಳ ಮಾರಾಟ, ಸಾಗಾಟ ಹಾಗೂ ಮದ್ಯಮಾನವನ್ನು ನಿಷೇಧಿಸಿ, ಮದ್ಯದ ಅಂಗಡಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಅವರು ಆದೇಶ ಹೊರಡಿಸಿದ್ದಾರೆ. ಈ ಮೊಹರಂ ಹಬ್ಬದ ಆಚರಣೆ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಭಾಲ್ಕಿಯ ಹಿರೇಮಠದಲ್ಲಿ ಹಳಕಟ್ಟಿ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.5: ವಚನ ಸಾಹಿತ್ಯ ಸಂಗ್ರಹದಲ್ಲಿ ಡಾ.ಫ.ಗು. ಹಳಕಟ್ಟಿ ಅವರ ಕೊಡುಗೆ ಅಪಾರ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಆಯೋಜಿಸಿದ್ದ ಡಾ.ಫ.ಗು.ಹಳಕಟ್ಟಿ ಜಯಂತಿ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಾದಿ ಶರಣರ ವಚನಗಳನ್ನು ಆಧುನಿಕ ಕಾಲದಲ್ಲಿ ಜನಮನಕ್ಕೆ ತಲುಪಿಸದಿದ್ದರೆ ಮಾನವೀಯ ಮೌಲ್ಯ ಉಳಿಯುತ್ತಿರಲಿಲ್ಲ. ಅವರು ಸಮರ್ಪಣಾ ಭಾವದಿಂದ ವಚನ ಸಾಹಿತ್ಯ, ಸಂಶೋಧನೆ, ಸಂಪಾದನೆ ಕೈಗೊಂಡಿದ್ದರಿಂದಲೇ ವಚನ ಸಾಹಿತ್ಯ ನಮಗೆ ದೊರೆತಿದೆ. ಹಳಕಟ್ಟಿ ಅವರ ಬದುಕು, ಸಾಧನೆ ಕುರಿತು ಮಕ್ಕಳಿಗೆ ತಿಳಿಸುವ ಕಾರ್ಯ ಆಗಬೇಕು ಎಂದು ತಿಳಿಸಿದರು.

ಗುರುಬಸವ ಪಟ್ಟದ್ದೇವರು, ಪ್ರಭುದೇವರು, ಶಿವಬಸವದೇವರು ಸಮ್ಮುಖವಹಿಸಿದ್ದರು. ಬಸವರಾಜ ಬ್ಯಾಂಬ್ರಿ ಸೇರಿದಂತೆ ಹಲವರು ಇದ್ದರು. ಶ್ರೀಮಠದ ಶಿಕ್ಷಕ ಸಿಬ್ಬಂದಿವರ್ಗದವರು ಹಾಗೂ ಶ್ರೀಮಠದ ಪ್ರಸಾದ ನಿಲಯದ ಮಕ್ಕಳು ಸಮಾರಂಭದಲ್ಲಿ ಭಾಗವಹಿಸಿದ್ದರು. ಬಾಬು ಬೆಲ್ದಾಳ ನಿರೂಪಿಸಿ, ವಂದಿಸಿದರು.

## ವಿವಿಧ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 05 : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2025-26ನೇ ಶೈಕ್ಷಣಿಕ ಸಾಲಿನ (ಜುಲೈ ಅವೃತಿ) ಪ್ರಥಮ ವರ್ಷದA B.A , B.COM, B.SC, B.Lib.I.Sc, B.C.A, B.B.A, B.S.W, M.A, M.Com,M.A.-M.C.J.,M.Lib.I.Sc,M.B.A,M.Sc,M.C.A.M.S.W.ಸ್ನಾತಕ, ಸ್ನಾತಕೋತ್ತರ ಪದವಿಗಳಿಗೆ ಮತ್ತು PG-Diploma, Diploma, Certificate ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಪ್ರಾದೇಶಿಕ ಕೇಂದ್ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಪ್ರಾದೇಶಿಕ ನಿರ್ದೇಶಕರು ಶ್ರೀ ಹಣಮಂತ ಕಾಳನೂರು ಅವರು ತಿಳಿಸಿದ್ದಾರೆ. ಪ್ರಕ್ರಿಯೆ 2025ರ ಜುಲೈ 1 ರಿಂದ ಪ್ರಾರಂಭ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವಿದ್ಯಾರ್ಥಿಗಳು ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ವಿವಿಧ ಪದವೀಧರ ಕೋರ್ಸ್‌ಗಳಿಗೆ ಆನ್‌ಲೈನ್ ಪ್ರವೇಶಕ್ಕೆ (ಅಡ್ಮಿಶನ್) ಪೋರ್ಟಲ್ ಮೂಲಕ ಅರ್ಜಿಯನ್ನು ಭರ್ತಿಮಾಡಿ, ಯಾದಗಿರಿ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕವನ್ನು ಪಾವತಿಸಿ ಪ್ರವೇಶಾತಿಯನ್ನು ಪಡೆಯಬಹುದಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ್, ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ ಮತ್ತು ಆಟೋ, ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು. ಕೋವಿಡ್-19 ರಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಟಿಹೀನ ವಿದ್ಯಾರ್ಥಿಗಳಿಗೆ (ಬಿ.ಇಡಿ, ಎಂ.ಬಿ.ಎ ಕೋರ್ಸ್‌ಗಳನ್ನು ಹೊರತುಪಡಿಸಿ) ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಅಲ್ಲದೆ ಎರಡು ಶೈಕ್ಷಣಿಕ ಕೋರ್ಸ್‌ಗಳನ್ನು ಏಕಕಾಲದಲ್ಲಿ ಒಂದು ಭೌತಿಕ ಕ್ರಮದಲ್ಲಿ ಮತ್ತೊಂದು ದೂರ ಶಿಕ್ಷಣ ಕ್ರಮದಲ್ಲಿ ಓದಲು ಅವಕಾಶವಿರುತ್ತದೆ. ಹಾಗೂ ವಿವಿಧ ವಿಶೇಷ ಮಾನದಂಡಗಳೊಂದಿಗೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶಾತಿ ಪಡೆಯಬಹುದು. ವಿದ್ಯಾರ್ಥಿಗಳು ಪ್ರವೇಶಾತಿಯ ಅದಷ್ಟು ಅಧಷ್ಟು ಬೇಗನೆ ಹೆಚ್ಚಿನ ಸಂಖ್ಯೆಯಲ್ಲಿ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ ತಿತಿತಿ. ಞsouಥಿsuru.ಚಿಛಿ.iಟಿಭೇಟಿ ನೀಡಬಹುದು, ಸಹಾಯವಾಣಿ ಸಂ.8690544544, 8800335638 ಮೊ.ನಂ. 9880061361, 9611750578, 9972679885, 9740700383, 9538608384, 9632543443ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 10 ರಂದು ಶ್ರೀ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 05-ಯಾದಗಿರಿ ಜಿಲ್ಲೆಯಲ್ಲಿ ಇದೇ 2025ರ ಜುಲೈ 10 ರಂದು ಶ್ರೀ ಹಡಪದ ಅಪ್ಪಣ್ಣ ಜಯಂತ್ಯೋತ್ಸವ ಆಚರಣೆ-ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ. ಶ್ರೀ ಹಡಪದ ಅಪ್ಪಣ್ಣ ಜಯಂತ್ಯೋತ್ಸವವನ್ನು ಯಾದಗಿರಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಚರಣೆ ಹಿನ್ನೆಲೆ ಶ್ರೀ ಹಡಪದ ಅಪ್ಪಣ್ಣ ಜಯಂತಿ ಜಿಲ್ಲಾ, ತಾಲ್ಲೂಕು ಮಟ್ಟದ ಎಲ್ಲಾ ಕಚೇರಿಗಳಲ್ಲಿ, ತಾಲ್ಲೂಕು, ಗ್ರಾಮ ಪಂಚಾಯತಗಳಲ್ಲಿ, ಎಲ್ಲಾ ಅನುದಾನಿತ, ಅರೆ ಅನುದಾನಿತ ಹಾಗೂ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ಮತ್ತು ತಮ್ಮ ಅಧೀನ ಕಾರ್ಯಾಲಯದಲ್ಲಿ ಈ ಜಯಂತಿಯನ್ನು ಅರ್ಥಪೂರ್ಣವಾಗಿ ಗೌರವಯುತವಾಗಿ ಆಚರಿಸುವಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರ ಶಿಷ್ಯವೇತನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 05 : 2025-26ನೇ ಸಾಲಿನ ಎಸ್‌ಎಸ್‌ಪಿ ತಂತ್ರಾಂಶದಲ್ಲಿ ಪೋಸ್ಟ್ ಮೆಟ್ರಿಕ್, ಹಾಗೂ ಪ್ರಿಮೆಟ್ರಿಕ್ ವ್ಯಾಸಂಗ ಮಾಡುತ್ತಿರುವ ವಿಕಲಚೇತನರ ಶಿಷ್ಯವೇತನ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ತಿಳಿಸಿದ್ದಾರೆ.

ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಪ್ರಿಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಅರ್ಜಿದಾರರು ವೆಬ್‌ಸೈಟ್ sspHomepageURL:https://ssp.postmatric.karnataka.gov.in/homepage.aspxPrematricapplicationsubmissionURL:https://ssp.postmatric.karnataka.gov.in/ssp-pre/postmatricapplicationsubmissionURL:https://ssp.postmatric.katnataka.gov.in/postsa/signin.aspx ಲಿಂಕ್ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ ದೂ.ಸಂ.08473253740, ವಿಕಲಚೇತನರ ಸಹಾಯವಾಣಿ ಕೇಂದ್ರ ದೂ.ಸಂ.08473253531, ತಾಲೂಕ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತ ಯಾದಗಿರಿ ಭೀಮರಾಯ ಮೊ.ನಂ. 9742865853, ಸುರಪುರ ಮಾಳಪ್ಪ ಮೊ.ನಂ.9945373847, ಶಹಾಪೂರ ನಾಗರಾಜ ಮೊ.ನಂ. 8296107462ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕ ಮೆರವಣಿಗೆ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 05-ಜಿಲ್ಲೆಯ ದೇವದುರ್ಗ ತಾಲೂಕಿನ ರಾಮದುರ್ಗ ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರನ್ವಯ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪುಗುಂಪಾಗಿ ಆಚರಿಸುವುದನ್ನು ಮತ್ತು ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ನಿಷೇಧಿಸಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

# ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜುಲೈ05-ದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ 2025ರ ಜುಲೈ 8 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಹ್ವಾನಿಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ. ಬಿ.ಎಸ್.ಎಸ್. ಮೈಕ್ರೋ ಫೈನಾನ್ಸ್.ಲಿ. (ಅ) ಟ್ರೈನಿಂಗ್ ಸೆಂಟ-ರ್ 65 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ ಪಾಸ್ ಅಥವಾ ಮೇಲ್ಪಟ್ಟು, ಬೈಕ್ ಮತ್ತು ಡಿ.ಎಲ್. ಕಡ್ಡಾಯ ಯಾದಗಿರಿ, ಶಹಾಪೂರು, ರಾಯಚೂರು, ಮಾನ್ವಿ, ಶಹಾಪೂರ, ಜೇವರ್ಗಿ, ಸೇಡಂ, ಚಿತ್ತಾಪೂರ ಉದ್ಯೋಗ ಸ್ಥಳವಾಗಿದೆ. ಬ್ರಾಂಚ್ ಮ್ಯಾನೇಜರ್ 5 ಹುದ್ದೆಗಳು ಖಾಲಿ ಇದ್ದು, ಅರ್ಹತೆ ಯಾವುದೇ ಪದವಿ. ಯಾದಗಿರಿ, ಶಹಾಪೂರು, ಜೇವರ್ಗಿ, ದೇವದುರ್ಗ, ಸೇಡಂ ಉದ್ಯೋಗ ಸ್ಥಳವಾಗಿದೆ. 18 ರಿಂದ 35 ವರ್ಷ ಒಳಗಿರಬೇಕು, ಪುರುಷ ಅಭ್ಯರ್ಥಿಗಳು ಮಾತ್ರ ಭಾಗಹಿಸಬಹುದಾಗಿದೆ. ಬೈಕ್ ಮತ್ತು ಡಿ.ಎಲ್. ಕಡ್ಡಾಯ, 2 ವರ್ಷ ಅನುಭವ ಹೊಂದಿದವರಿಗೆ ಆಧ್ಯತೆ ನೀಡಲಾಗುವುದು. ಯಾದಗಿರಿ, ಗುರುಮಠಕಲ್, ಶಹಾಪೂರು, ಜೇವರ್ಗಿ, ಚಿತ್ತಾಪೂರು, ಕಲಬುರಗಿ, ಸೇಡಂ ಉದ್ಯೋಗ ಸ್ಥಳವಾಗಿದೆ.

ಶ್ರೀರಾಮ್ ಲೈಫ್ ಇನ್ಸೂರೆನ್ಸ್ ಯುನಿಟ್ ಮ್ಯಾನೇಜರ್ 5 ಹುದ್ದೆಗಳು ಖಾಲಿ ಇದ್ದು ಅರ್ಹತೆ ಯಾವುದೇ ಪದವಿ ಡೆವಲಪ್‌ಮೆಂಟ್ ಆಫೀಸರ್ 25 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ ಮೇಲ್ಪಟ್ಟು, ಯಾದಗಿರಿ ಉದ್ಯೋಗ ಸ್ಥಳವಾಗಿದೆ. 18 ರಿಂದ 45 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಿದೆ. ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬೇಕು, ಹಾಗೂ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಚಿತ್ತಾಪೂರು ರೋಡ್ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ ಬ್ಲಾಕ್ ರೂ.ನಂ.ಬಿ1, ಬಿ2, 2ನೇ ಮಹಡಿ ಯಾದಗಿರಿ ದೂ.ಸಂ. 08473253718, ಮೊ.ನಂ.9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಕನೂರು ನವೋದಯ ವಿದ್ಯಾಲಯ: 6ನೇ ತರಗತಿಗಾಗಿ ಪ್ರವೇಶ ಪರೀಕ್ಷೆಯ ಅರ್ಜಿ ಆಹ್ವಾನ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ಜವಾಹರ ನವೋದಯ ವಿದ್ಯಾಲಯ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ವಿದ್ಯಾಲಯದ 6ನೇ ತರಗತಿಗಾಗಿ 2026-27ರ ಶೈಕ್ಷಣಿಕ ವರ್ಷಕ್ಕಾಗಿ ಪ್ರವೇಶ ಪರೀಕ್ಷೆಯ ಅರ್ಜಿ ಆಹ್ವಾನಿಸಲಾಗಿದೆ.

ಈ ವರ್ಷವೂ ಆನ್‌ಲೈನ್ ವೆಬ್‌ಸೈಟ್ www.navodaya.gov.in ನಲ್ಲಿ ಅರ್ಜಿಗಳನ್ನು ನೀಡಲಾಗಿದ್ದು, ಸುಲಭ ಮತ್ತು ಸರಳ ರೀತಿಯಲ್ಲಿ ವಿದ್ಯಾರ್ಥಿಗಳಿಗೆ ಪೋಷಕರಿಗೆ ಸಹಾಯವಾಗುವಂತೆ ಇಂಟರ್ನೆಟ್ ಕೇಂದ್ರಗಳಲ್ಲಿ (ಇಂಟರ್ನೆಟ್ ಸೆಂಟರ್) ಅರ್ಜಿಯನ್ನು ಭರ್ತಿ ಮಾಡಬಹುದು.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಯು 2025-26ರ ಶೈಕ್ಷಣಿಕ ವರ್ಷದಲ್ಲಿ 5ನೇ ತರಗತಿಯಲ್ಲಿ ಸರ್ಕಾರಿ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಯಲ್ಲಿ ಓದುತ್ತಿರಬೇಕು. ಅರ್ಜಿ ಸಲ್ಲಿಸಲು ಜುಲೈ 29 ಕೊನೆಯ ದಿನವಗಿದ್ದು, 2025ರ ಡಿಸೆಂಬರ್ 13ಕ್ಕೆ ಪ್ರವೇಶ ಪರೀ-ಕ್ಷೆಯ ನಡೆಯಲಿದೆ ಎಂದು ಕುಕನೂರ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದಿನಾಟಕ, ಜಾನಪದ ಸಂಗೀತ: ಕಲಾ ತಂಡಗಳಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಯೋಜನೆಗಳು, ಸಾಧನೆಗಳ ಕುರಿತು ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಬೀದಿನಾಟಕ, ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 21 ಕೊನೆಯ ದಿನವಾಗಿದೆ.

ಜಿಲ್ಲೆಯಿಂದ 3 ಬೀದಿನಾಟಕ ಹಾಗೂ 3 ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಪ್ರತಿ ಬೀದಿನಾಟಕ ತಂಡದಲ್ಲಿ 8 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು.

ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು. ಈ ಹಿಂದೆ ವಿವಿಧ ಇಲಾಖೆಗಳ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿರುವ ಅನುಭವ ಹೊಂದಿರಬೇಕು. ಬೀದಿನಾಟಕ ತಂಡವು ನೋಂದಾಯಿತ ತಂಡವಾಗಿರಬೇಕು.

ನಿಗದಿತ ಅರ್ಜಿ ನಮೂನೆಯನ್ನು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಹಳೆಯ ಕಚೇರಿ ಹಿಂಭಾಗ, ಬಳ್ಳಾರಿ ಇವರಿಂದ ಉಚಿತವಾಗಿ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಜುಲೈ 21ರ ಒಳಗಾಗಿ ಸಲ್ಲಿಸಬೇಕು ಎಂದು ಹಿರಿಯ ಸಹಾಯಕ ನಿರ್ದೇಶಕ ಬಿ.ವಿ.ತುಕಾರಾಂರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಯನ್ಸ್ ಕ್ಲಬ್ ಶಾಲೆಯಲ್ಲಿ ಡೆಂಗೆ ವಿರೋಧಿ ಮಾಸಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 05- ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕದ ಸಹಯೋಗದೊಂದಿಗೆ ಡೆಂಗೆ ವಿರೋಧಿ ಮಾಸಾಚರಣೆಯು ಲಯನ್ಸ್ ಕ್ಲಬ್ ಶಾಲೆಯಲ್ಲಿ ನಡೆಯಿತು. ಕೀಟ ಶಾಸ್ತ್ರಜ್ಞರಾದ ಗಂಗೋತ್ರಿ ಅವರು ಮಾತನಾಡಿ, ಜಗತ್ತಿನಲ್ಲಿ ಹಲವಾರು ಜಾತಿಯ ಸೊಳ್ಳೆಗಳಿವೆ. ಆದರೆ ಈಡೀಸ್ ಈಜಿಪ್ಟ್, ಅನಾಫಿಲಿಸ್, ಕ್ಯೂಲೆಕ್ಸ ಈ ಮೂರು ಸೊಳ್ಳೆಗಳು ಮನುಷ್ಯರನ್ನು ಹೆಚ್ಚಿಗೆ ಕಾಡುತ್ತವೆ. ಈಡೀಸ್ ಈಜಿಪ್ಟೈ ಎಂಬ ಹೆಣ್ಣು ಸೋಂಕಿತ ಸೊಳ್ಳೆ ಕಚ್ಚುವುದರಿಂದ ಡೆಂಗೆ ಜ್ವರ ಬರುತ್ತದೆ.

ನೀರಿನ ಪರಿಕರಗಳಲ್ಲಿ, ಘನ ತ್ಯಾಜ್ಯ ವಸ್ತುಗಳಲ್ಲಿ, ಮಳೆ ನೀರು ನಿಂತು ಸೊಳ್ಳೆ ಉತ್ಪತ್ತಿಯಾಗುತ್ತವೆ. ನಿಂತ ನೀರು ಸೊಳ್ಳೆ ಉತ್ಪತ್ತಿ ತಾಣಗಳಾಗಿವೆ ಎಂದು ತಿಳಿಸಿದರು. ಈ ವೇಳೆ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ. ಕೆ ಅವರು ಮಾತನಾಡಿ, ಡೆಂಗೆ ಜ್ವರಕ್ಕೆ ಚಿಕಿತ್ಸೆ ಇರುವುದಿಲ್ಲ. ರೋಗದ ಲಕ್ಷಣಗಳ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ. ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದರು.

ಸ್ವಯಂರಕ್ಷಣಾ ವಿಧಾನ ಅನುಸರಿಸಬೇಕು. ಮೈ ತುಂಬಾ ಬಟ್ಟೆ ಧರಿಸಬೇಕು. ಸೊಳ್ಳೆ ಪರದೆ ಉಪಯೋಗಿಸಬೇಕು. ಕಿಟಕಿಗಳಿಗೆ ಜಾಲರಿ ಅಳವಡಿಸಬೇಕು, ಗುಡ್ ನೈಟ್, ಸೊಳ್ಳೆ ಹೊಡೆಯುವ ಬ್ಯಾಟ್ ಉಪಯೋಗಿಸಬೇಕು. ಮನೆಯಲ್ಲಿರುವ ನೀರಿನ ಪರಿಕರಗಳು ವಾರಕ್ಕೊಮ್ಮೆ ತೊಳೆದು ಒಣಗಿಸಬೇಕು. ಯಾವುದೇ ಜ್ವರ ಇರಲಿ ಹತ್ತಿರದ ಆಸ್ಪತ್ರೆಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕೆಂದರು.

ಈ ವೇಳೆ ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಸಂಧ್ಯಾ ನಾಯಕ ಅವರು ಮಾತನಾಡಿ, ಸಮುದಾಯದಲ್ಲಿ ಪ್ರತಿಯೊಬ್ಬರು ಮನೆಯ ಒಳಾಂಗಣ ಹಾಗೂ ಹೊರಾಂಗಣ ಸುತ್ತಲಿನ ಪರಿಸರದ ಸ್ವಚ್ಚತೆಗೆ ಆದ್ಯತೆ ಕೊಡಬೇಕು. ಉತ್ತಮ ಪರಿಸರವಿದ್ದಲ್ಲಿ ಆರೋಗ್ಯದಿಂದಿರಬಹುದು ಎಂದರು. ಇದೇ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರಾದ ದತ್ತಾತ್ರೇಯ, ದೈಹಿಕ ಶಿಕ್ಷಣ ಶಿಕ್ಷಕ ರಾಜರಾಮ, ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ ಸೇರಿದಂತೆ ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಮನೆಬಾಗಿಲಿಗೆ ಇ-ಪೌತಿ ಆಂದೋಲನ ಅಭಿಯಾನ: ಜಿಲ್ಲಾಧಿಕಾರಿ ಪ್ರಶಾಂತ್‌ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ರೈತರು ತಮ್ಮ ಜಮೀನುಗಳನ್ನು ಪೌತಿ ಮಾಡಿಸಿಕೊಳ್ಳಲು ಇನ್ಮುಂದೆ ಕಂದಾಯ ಇಲಾಖೆ ಕಚೇರಿವರೆಗೂ ಅಲೆಯಬೇಕಿಲ್ಲ. ಸರಕಾರವೇ ಇ-ಪೌತಿ ಆಂದೋಲನದ ಮೂಲಕ ನಿಮ್ಮ ಮನೆ ಬಾಗಿಲಿಗೆ ಬರಲಿದೆ ಇದರ ಸದುಪಯೋಗಪಡೆಸಿಕೊಳ್ಳುವಂತೆ ಜಿಲ್ಲಾಧಿಕಾರಿ ಪ್ರಶಾಂತ್‌ಕುಮಾರ್ ಮಿಶ್ರಾ ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಮೃತಪಟ್ಟ ಜಮೀನು ಮಾಲೀಕರ ಹೆಸರಿನಲ್ಲಿರುವ ಪಹಣಿಗಳನ್ನು ವಾರಸುದಾರರ ಹೆಸರಿಗೆ ನೋಂದಣಿ ಮಾಡಿಕೊಡಲು ಈ ಹಿಂದಿನಿಂದಲೂ ಅಭಿಯಾನಗಳು ನಡೆದಿವೆ. ಹೋಬಳಿ, ಗ್ರಾಮ ಮಟ್ಟದಲ್ಲಿ ಅಭಿಯಾನ ನಡೆದಿವೆ. ಆದರೂ ಇನ್ನು ಕೆಲವು ಪ್ರಕರಣ ಬಾಕಿ ಇದ್ದು, ಕಂದಾಯ ಇಲಾಖೆ ಸಚಿವರ ನಿರ್ದೇಶನದ ಮೇರೆಗೆ ಮನೆ ಬಾಗಿಲಿಗೆ ಕಂದಾಯ ಸೇವೆಗಳ 'ಇ-ಪೌತಿ' ಆಂದೋಲನ ಆರಂಭಿಸಲಾಗಿದೆ.

ಈ ಯೋಜನೆಯಡಿ ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಅಭಿವೃದ್ಧಿ ಅಧಿಕಾರಿಗಳು ರೈತರ ಮನೆ ಬಾಗಿಲಿಗೆ ತೆರಳಿ, ವಾರಸುದಾರರಿಗೆ ಮೊಬೈಲ್ ಮೂಲಕ ಪೌತಿ ಖಾತೆಯನ್ನು ನೋಂದಾಯಿಸಲಿದ್ದಾರೆ. ಈ ಪ್ರಕ್ರಿಯೆಯಲ್ಲಿ ಆಧಾರ್ ಸೀಡಿಂಗ್‌ನ ಮೂಲಕ ಭೂಮಿ ಹಿಡುವಳಿಯ ನಿಖರ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ ಎಂದು ಹೇಳಿದ್ದಾರೆ.

ಜಿಲ್ಲೆಯಲ್ಲಿ ಮೃತಪಟ್ಟ 75,000 ಜಮೀನುಗಳ ಮಾಲೀಕರ ಪಹಣಿಗಳನ್ನು ವಾರಸುದಾರರ ಹೆಸರಿಗೆ ನೋಂದಣಿ ಮಾಡಿಕೊಡಲು ಇ-ಪೌತಿ ಆಂದೋಲನವನ್ನು ಆರಂಭಿಸಿದೆ. ಆಧಾರ್ ಜೋಡಣೆಯಿಂದ ಕೃಷಿ ಭೂಮಿಯ ಪ್ರಮಾಣ, ರೈತರ ಭೂ ಹಿಡುವಳಿ, ಮತ್ತು ಸಣ್ಣ ಹಾಗೂ ಅತಿ ಸಣ್ಣ ರೈತರ ಸಂಖ್ಯೆಯ ಬಗ್ಗೆ ನಿಖರ ಅಂಕಿ-ಅಂಶಗಳು ಲಭ್ಯವಾಗಲಿವೆ ಎಂದಿದ್ದಾರೆ.

ಮರಣ ಹೊಂದಿದ ವ್ಯಕ್ತಿಯ ಹೆಸರಿನಲ್ಲಿರುವ ಆಸ್ತಿಯನ್ನು ತಮ್ಮ ಕಾನೂನು ಬದ್ಧ ವಾರಸುದಾರರ ಹೆಸರಿಗೆ ಜಮೀನಿನ ಖಾತೆಯನ್ನು ವರ್ಗಾವಣೆ ಮಾಡುವುದನ್ನು ಪೌತಿ ಖಾತೆ ಎನ್ನಲಾಗುವುದು.

ಮನೆ ಬಾಗಿಲಿಗೆ ಹೋಗಿ ಪೌತಿ ಖಾತೆ ಅಭಿಯಾನ ನಡೆಸುತ್ತಿರುವುದರಿಂದ ಅರ್ಹರಿಗೆ ಸುಲಭವಾಗಿ ಪೌತಿ ಖಾತೆ ಲಭ್ಯವಾಗುತ್ತದೆ. ಜಮೀನಿನ ವಾರಸುದಾರಿಕೆಯ ಪಹಣಿ ಸಿಗುತ್ತದೆ. ಇ-ಪೌತಿ ಆಂದೋಲನಕ್ಕಾಗಿ ಕಂದಾಯ ಇಲಾಖೆಯು ಪ್ರತ್ಯೇಕ ತಂತ್ರಾಂಶ ಅಭಿವೃದ್ಧಿಪಡಿಸಿದೆ. ಈ ತಂತ್ರಾಂಶವು ವಂಶವೃಕ್ಷದ ಆಧಾರದ ಮೇಲೆ ವಾರಸುದಾರರ ಮಾಹಿತಿಯನ್ನು ಸಂಗ್ರಹಿಸಿ, ಆಧಾರ್ ಸಂಖ್ಯೆಯ ಮೂಲಕ ಒಟಿಪಿ ಪರಿಶೀಲನೆ ನಡೆಸುತ್ತದೆ.

ಈ ಪ್ರಕ್ರಿಯೆಯು ಪೌತಿ ಖಾತೆ ನೋಂದಣಿಯಲ್ಲಿ ಸಂಭವಿಸಬಹುದಾದ ಅಕ್ರಮ ಕಡಿವಾಣ ಹಾಕಲು ಮತ್ತು ರೈತರಿಗೆ ತಮ್ಮ ಆಸ್ತಿಯ ದಾಖಲೆಗಳನ್ನು ಸರಿಪಡಿಸಿಕೊಳ್ಳಲು ಈ ಯೋಜನೆಯು ಸರಳ ಮತ್ತು ಪಾರದರ್ಶಕ ವೇದಿಕೆಯಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಸರಕಾರಿ ಸೌಲಭ್ಯ ಸಿಗಲ್ಲ:

ಮೃತಪಟ್ಟ ರೈತರ ಹೆಸರಿನಲ್ಲಿರುವ ಜಮೀನು ಇ-ಪೌತಿ ಮಾಡಿಸಿಕೊಳ್ಳದೇ ಹಾಗೆಯೇ ಬಿಟ್ಟರೇ ಆ ಕುಟುಂಬ ಸರಕಾರದ ಸೌಲಭ್ಯಗಳಿಂದ ವಂಚಿತವಾಗಲಿದೆ. ಪಿಎಂ ಕಿಸಾನ್ ಸಮ್ಮಾನ, ಫಸಲ್ ವಿಮಾ ಯೋಜನೆ ಸೇರಿ ಹಲವು ಸರಕಾರಿ ಸೌಲಭ್ಯಗಳು ಕಳೆದುಕೊಳ್ಳಬೇಕಾಗುತ್ತದೆ. ಹೀಗಾಗಿ ಸಂಬಂಧಪಟ್ಟ ಕುಟುಂಬದ ವಾರಸುದಾರರು ಇ-ಪೌತಿ ಆಂದೋಲನದಲ್ಲಿ ಭಾಗವಹಿಸಿ ತಮ್ಮ ಜಮೀನನ್ನು ವರ್ಗಾಯಿಸಿಕೊಳ್ಳಲು ಅವಕಾಶವಿದೆ. ಹೀಗಾಗಿ ರೈತರು ಯಾವುದೇ ಕಾರಣಕ್ಕೂ ಇದನ್ನು ತಪ್ಪಿಸಿಕೊಳ್ಳಬೇಡಿ ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

## ರಾಜ್ಯದಲ್ಲಿ 11,910 ಕಿರು ಆಹಾರ ಸಂಸ್ಕರಣಾ ಉದ್ಯಮಗಳನ್ನು ಸ್ಥಾಪಿಸಲು 5 ವರ್ಷದೊಳಗೆ 493 ಕೋಟಿ ರೂ. ಬಿಡುಗಡೆ : ಎನ್.ಚಲುವರಾಯಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜುಲೈ 05-ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆಯಡಿ ರಾಜ್ಯದಲ್ಲಿ 11,910 ಕಿರು ಆಹಾರ ಸಂಸ್ಕರಣಾ ಉದ್ಯಮಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದು, 5 ವರ್ಷಗಳವರೆಗೆ ಇದಕ್ಕೆ ಒಟ್ಟು 493 ಕೋಟಿ ರೂ. ಬಿಡುಗಡೆಯಾಗಲಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ಇಂದು ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆಯ ಬಗ್ಗೆ ಮಾಹಿತಿ ಹಂಚಿಕೊಳ್ಳಲು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಕೆಪೆಕ್ ಕೃಷಿ ಇಲಾಖೆ ಅಧೀನದಲ್ಲಿರುವ ಒಂದು ಪ್ರತಿಷ್ಠಿತ ಅಂಗ ಸಂಸ್ಥೆಯಾಗಿದ್ದು, ಕೃಷಿಕರು, ಕೃಷಿಕರ ಮಕ್ಕಳನ್ನು, ಜನ ಸಾಮಾನ್ಯರನ್ನು ಕೃಷಿ ಉದ್ಯಮಿಗಳನ್ನಾಗಿ ಪರಿವರ್ತಿಸುವುದು ಇದರ ಗುರಿಯಾಗಿದೆ ಎಂದರು.

ಪಿ.ಎಂ.ಎಫ್.ಎಂ.ಇ. ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು ಅಸಂಘಟಿತ ವಲಯದಲ್ಲಿರುವ ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಪ್ರೋತ್ಸಾಹಿಸುವುದು ಇದರ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯು ವೈಯಕ್ತಿಕ ಆಹಾರ ಸಂಸ್ಕರಣಾ ಉದ್ಯಮಿಗಳು ಮತ್ತು ರೈತರ ಗುಂಪುಗಳು / ಎಫ್.ಪಿ.ಓ ಗಳಿಗೆ ಶೇ. 35 ರಷ್ಟು (60:40, ಅನುಪಾತ) ಸಬ್ಸಿಡಿಯನ್ನು ಒದಗಿಸುತ್ತದೆ. ಈ ಯೋಜನೆಯನ್ನು ರಾಜ್ಯದ ಫಲಾನುಭವಿಗಳಿಗೆ ಹೆಚ್ಚು ಆಕರ್ಷಕವಾಗಿಸಲು ಕರ್ನಾಟಕ ಸರ್ಕಾರವು ಶೇ.15 ರಷ್ಟು ಹೆಚ್ಚುವರಿ ಟಾಪ್ ಅಪ್ ಸಬ್ಸಿಡಿಯನ್ನು ಒದಗಿಸಿದೆ ಎಂದು ತಿಳಿಸಿದರು.

ಈ ಯೋಜನೆಯಡಿ ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ 20,051 ಅರ್ಜಿಗಳು ಸಲ್ಲಿಕೆಯಾಗಿದ್ದು, 6,698 ಅರ್ಜಿಗಳಿಗೆ ಸಾಲ ಮಂಜೂರಾಗಿರುತ್ತದೆ. ಇದ-ಕ್ಕೆ ಒಟ್ಟು ರೂ. 785.48 ಕೋಟಿಯಷ್ಟು ಬಂಡವಾಳ ಕಿರು ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಹೂಡಿಕೆಯಾಗಿರುತ್ತದೆ. 162.50 ಕೋಟಿ ರೂಪಾಯಿಗಳ ಸಹಾಯಧನವನ್ನು (60:40 ಅನುಪಾತದೊಂದಿಗೆ ಶೇ.35 ರಷ್ಟು) 4,489 ಫಲಾನುಭವಿಗಳಿಗೆ ಬಿಡುಗಡೆ ಮಾಡಲಾಗಿದೆ. ಮತ್ತು ಹೆಚ್ಚುವರಿ ಶೇ.15 ರಷ್ಟು ಟಾಪ್ ಅಪ್ ಸಬ್ಸಿಡಿಯನ್ನು 59.48 ರೂಪಾಯಿಗಳನ್ನು 3770 ಫಲಾನುಭವಿಗಳಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ ಎಂದರು.

ಈ ಯೋಜನೆಯಡಿಯಲ್ಲಿ ಪ್ರಮುಖವಾಗಿ ಸಿರಿಧಾನ್ಯ ಸಂಸ್ಕರಣೆ, ಬೆಲ್ಲ, ನಿಂಬೆ ಉತ್ಪನ್ನಗಳು, ಬೇಕರಿ ಉತ್ಪನ್ನಗಳು, ಕೋಲ್ಡ್ ಪ್ರಸ್ಡ್ ಆಯಿಲ್, ಮೆಣಸಿನಪುಡಿ, ಶುಂಠಿ ಸಂಸ್ಕರಣಾ ಘಟಕಗಳು, ಅನಾನಸ್ ಘಟಕಗಳು, ಮಸಾಲಾ ಉತ್ಪನ್ನಗಳ ಘಟಕಗಳು, ತೆಂಗಿನ ಉತ್ಪನ್ನಗಳು, ಕೋಳಿ ಮತ್ತು ಸಮುದ್ರ ಉತ್ಪನ್ನಗಳ ಸಂಸ್ಕರಣಾ ಘಟಕಗಳ ಸ್ಥಾಪನೆ, ರೊಟ್ಟಿ, ಉಪ್ಪಿನಕಾಯಿ, ಹಪ್ಪಳ ಘಟಕಗಳ ಸ್ಥಾಪನೆಗಾಗಿ ಸಾಲವನ್ನು ಮಂಜೂರು ಮಾಡಲಾಗಿದೆ.

ಆಹಾರ ಸಂಸ್ಕರಣೆಯಲ್ಲಿ ತೊಡಗಿರುವ ಸ್ವ-ಸಹಾಯ ಸಂಘದ 11825 ಸದಸ್ಯರಿಗೆ 46.58 ಕೋಟಿಯಷ್ಟು ಬೀಜ ಬಂಡವಾಳದ ಬೆಂಬಲವನ್ನು ಸಣ್ಣ ಉಪಕರಣಗಳನ್ನು ಖರೀದಿಸಲು ಮತ್ತು ಕಾರ್ಯನಿರತ ಬಂಡವಾಳಕ್ಕಾಗಿ ಬಿಡುಗಡೆ ಮಾಡಲಾಗಿದೆ. 5 ಬ್ರ್ಯಾಂಡಿಂಗ್ ಮಾರ್ಕೆಟಿಂಗ್ ಪ್ರಸ್ತಾವನೆಗಳಾದ ಕರ್ನಾಟಕ ರಾಜ್ಯ ದ್ವಿದಳ ಧಾನ್ಯಗಳ ಅಭಿವೃದ್ಧಿ ಮಂಡಳಿಯಿಂದ ಸಲ್ಲಿಸಲಾದ (ಬ್ರ್ಯಾಂಡ್-1) 'BHIMA' ಪಲ್ಸಸ್ ಬ್ರ್ಯಾಂಡ್, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳ ಸಾವಯವ ಕೃಷಿಕರ ಸಹಕಾರ ಒಕ್ಕೂಟದಿಂದ (ಬ್ರಾಂಡ್-2) 'ಖಇಇಓಖ' ಬ್ರಾಂಡ್, ಕಾಫಿ ಬೋರ್ಡನ (ಬ್ರಾಂಡ್-3) ಇಂಡಿಯಾಕಾಫಿ ಬ್ರಾಂಡ್, (ಬ್ರಾಂಡ್-4) K.O.F.C "ಸಫಲ್" ಬ್ರಾಂಡ್, ನೆಲಸಿರಿ ಫಾರ್ಮ ಪ್ರೊಡ್ಯೂಸ್ ಕಂಪನಿ ಸಲ್ಲಿಸಿದ (ಬ್ರಾಂಡ್-5) ನೆಲಸಿರಿ ಬ್ರ್ಯಾಂಡ್ ಗಳನ್ನು ಕರ್ನಾಟಕಕ್ಕೆ ಆಹಾರ ಸಂಸ್ಕರಣಾ ಕೈಗಾರಿಕೆಗಳ ಮಂತ್ರಾಲಯ ಅನುಮೋದಿಸಿದೆ.

ಪಿ.ಎಂ.ಎಫ್.ಎಂ.ಇ. ಯೋಜನೆಯಡಿಯಲ್ಲಿ ರೂ. 12.79 ಕೋಟಿ ಯೋಜನಾ ವೆಚ್ಚದೊಂದಿಗೆ ಮಂಡ್ಯ, ದಾವಣಗೆರೆ, ಬೆಳಗಾವಿ, ಉತ್ತರ ಕನ್ನಡದಲ್ಲಿ 4 ಸಾಮಾನ್ಯ ಮೂಲಭೂತ ಸೌಕರ್ಯಗಳ ಘಟಕಗಳನ್ನು ಸ್ಥಾಪಿಸಲಾಗಿದೆ. 14 ಇನ್ಕ್ಯುಬೇಶನ್ ಕೇಂದ್ರಗಳನ್ನು ಕೃಷಿ / ತೆ-ೂಟಗಾರಿಕೆ ವಿಶ್ವವಿದ್ಯಾಲಯಗಳು ಹಾಗೂ ಸರ್ಕಾರಿ ಸಂಸ್ಥೆಗಳಿಗೆ ಮಂಜೂರು ಮಾಡಲಾಗಿದೆ. ದೇಶದಲ್ಲೇ ಅತಿ ಹೆಚ್ಚು ಇನ್ಕ್ಯುಬೇಶನ್ ಕೇಂದ್ರಗಳನ್ನು ಆಹಾರ ಸಂಸ್ಕರಣಾ ಮಂತ್ರಾಲಯವು ಕರ್ನಾಟಕ ರಾಜ್ಯಕ್ಕೆ ಮಂಜೂರು ಮಾಡಿದೆ ಎಂದರು.

ರಾಜ್ಯದ ವಿಜಯಪುರ ಮತ್ತು ಕುಷ್ಟಗಿಯಲ್ಲಿ ಹಾಗೂ ಬೀದರನ ಹುಮನಾಬಾದ್ ನಲ್ಲಿ ದ್ರಾಕ್ಷಿ, ದಾಳಿಂಬೆ, ನಿಂಬೆ ತೋಟಗಾರಿಕೆ ಸಂಸ್ಕರಣೆ ಹಾಗೂ ರಫ್ತಿನ ಅನುಕೂಲಕ್ಕೋಸ್ಕರ ಸಮಗ್ರ ಶೀತಲ ಸರಪಳಿ ಘಟಕಗಳು ಕಾರ್ಯಾಚರಣೆಯಲ್ಲಿವೆ. ವಿಜಯಪುರದಲ್ಲಿ ರೈತರು ಸಂಸ್ಕರಿಸಿದ ಒಣ ದ್ರಾಕ್ಷಿ ಹಾಗೂ ಇತರೇ ಕೃಷಿ / ತೋಟಗಾರಿಕೆ ಉತ್ಪನ್ನಗಳ ಶೇಖರಣೆಗೆ ಸುಮಾರು 4000 ಮೆಟ್ರಿಕ್ ಟನ್ ಸಾರ್ಮಥ್ಯದ ಶೀತಲಗೃಹ ಕಾರ್ಯಾಚರಣೆಯಲ್ಲಿದ್ದು, ಹುಬ್ಬಳ್ಳಿಯ ಎ.ಪಿ.ಎಂ.ಸಿ ಆವರಣದಲ್ಲಿ ಸುಮಾರು 6,000 ಮೆಟ್ರಿಕ್ ಟನ್ ಸಾರ್ಮಥ್ಯದ ಗೋದಾಮು ಕಾರ್ಯಾಚರಣೆಗೆ ಸಿದ್ಧವಾಗಿದೆ ಎಂದು ತಿಳಿಸಿದರು.

## ಜುಲೈ 07ರಂದು ಜಿಲ್ಲಾ ನೀರು, ನೈರ್ಮಲ್ಯ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 05-ಜಲ್ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ಸಮಗ್ರ ಅನುಷ್ಠಾನಕ್ಕಾಗಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯನ್ನು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜುಲೈ 07ರ ಬೆಳಿಗ್ಗೆ 9 ಗಂ-ಟೆಗೆ ಹಮ್ಮಿಕೊಳ್ಳಲಾಗಿದ್ದು, ಸಮಿತಿಯ ಎಲ್ಲ ಸದಸ್ಯರು ಸಭೆಗೆ ಆಗಮಿಸಿ ಸಭೆಯನ್ನು ಯಶಸ್ವಿಗೊಳ್ಳಬೇಕೆಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

## ಬಳ್ಳಾರಿ: ವಿವಿಧ ವರ್ಗಗಳ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

# ಅಸಂಘಟಿತ ಕಾರ್ಮಿಕರಿಗೆ ಸುರಕ್ಷತೆ ಮತ್ತು ಸಾಮಾಜಿಕ ಭದ್ರತೆ ಒದಗಿಸುವುದು ಸರ್ಕಾರದ ಧ್ಯೇಯೋದ್ದೇಶವಾಗಿದೆ: ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ಅಸಂಘಟಿತ ವಿವಿಧವಲಯಗಳಡಿದುಡಿಯುವ ಕಾರ್ಮಿಕರನ್ನು ಗುರುತಿಸಿ ಅವರಿಗೆ ಸುರಕ್ಷತೆ ಮತ್ತು ವಿಶೇಷ ಸಾಮಾಜಿಕ ಭದ್ರತೆ ಒದಗಿಸುವುದು ರಾಜ್ಯಸರ್ಕಾರದ ಧ್ಯೇಯೋದ್ದೇಶವಾಗಿದೆ ಎಂದು ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್.ಲಾಡ್ ಅವರು ಹೇಳಿದರು.

ಕಾರ್ಮಿಕ ಇಲಾಖೆ,ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ಸ್ಟೇಡಿಯಂ ರಸ್ತೆಯ ವಾಲ್ಮೀಕಿ ಭವನದಲ್ಲಿ ಶನಿವಾರ ಏರ್ಪಡಿಸಿದ್ದ ಬಳ್ಳಾರಿ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಸುಮಾರು ಶೇ.90 ರಷ್ಟು ಕಾರ್ಮಿಕರು ಅಸಂಘಟಿತ ವಿವಿಧ ವಲಯಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಸುಮಾರು ಶೇ.85 ರಷ್ಟು ಕಾರ್ಮಿಕರು ಇದ್ದಾರೆ. ದೇಶದ ಶೇ.50 ರಷ್ಟು ಜಿಡಿಪಿಯು ಅಸಂಘಟಿತ ವಲಯಗಳ ಕಾರ್ಮಿಕರ ಆದಾಯದಿಂದ ಬರುತ್ತದೆ. ಹಾಗಾಗಿ ಅವರ ಸುರಕ್ಷತೆ ಮತ್ತು ಸಾಮಾಜಿಕ ಭದ್ರತೆಯು ನಮ್ಮ ಸರ್ಕಾರದ ಆದ್ಯತೆಯಾಗಿದೆ ಎಂದರು.

ರಾಜ್ಯದಲ್ಲಿ 91 ಅಸಂಘಟಿತ ವರ್ಗಗಳಡಿಯ ಇ-ಶ್ರಮ ಪೋರ್ಟಲ್‌ನಲ್ಲಿ ಸುಮಾರು 1.53 ಕೋಟಿ ಕಾರ್ಮಿಕರು ಕಂಡುಬಂದಿದ್ದಾರೆ. ನೋಂದಾಯಿಸಿಕೊಂಡ ಅಸಂಘಟಿತ ಕಾರ್ಮಿಕರಿಗೆ ಈ ಯೋಜನೆಯಡಿ ಅಪಘಾತ ಪರಿಹಾರ ಸೌಲಭ್ಯ ಅಪಘಾತದಿಂದ ಮರಣ ಹೊಂದಿದಲ್ಲಿ, ಸಂಪೂರ್ಣ ದುರ್ಬಲತೆ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ 1 ಲಕ್ಷ ರೂ.ಪರಿಹಾರ, ಶಾಶ್ವತ ದುರ್ಬಲತೆ ಹೊಂದಿದರೆ ಮತ್ತು ತಾತ್ಕಾಲಿಕ ದುರ್ಬಲತೆ ಹೊಂದಿದರೆ ಆಸ್ಪತ್ರೆ ಚಿಕಿತ್ಸೆ ವೆಚ್ಚಕ್ಕಾಗಿ 1 ಲಕ್ಷ ರೂ. ವರೆಗೆ ಪರಿಹಾರ ಧನ ಸಹಾಯ ನೀಡಲಾಗುತ್ತದೆ ಎಂದು ತಿಳಿಸಿದರು.

ಸಿಎಂ ಸಿದ್ದರಾಮಯ್ಯನವರಿಗೆ ರಾಜ್ಯ ಸರ್ಕಾರದ ಪೆಟ್ರೋಲ್ ಮತ್ತು ಡಿಸೇಲ್‌ನಿಂದ ರಾಜ್ಯಕ್ಕೆ ಬರುವ ತೆರಿಗೆ ಸಂಗ್ರಹದಲ್ಲಿ ಕನಿಷ್ಠ ಶೇ.1 ರಷ್ಟು ಹಣವನ್ನು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ನೀಡಬೇಕೆಂದು ಕೋರಲಾಗಿದೆ.



ಮುಖ್ಯಮಂತ್ರಿಗಳ ಒಪ್ಪಿಗೆ ದೊರೆತಲ್ಲಿ, 1,500 ಕೋಟಿ ರೂ. ಸಂಗ್ರಹವಾಗಲಿದೆ ಅದನ್ನು ನೇರವಾಗಿ ಸ್ಮಾರ್ಟ್ ಕಾರ್ಡ್ ಫಲಾನುಭವಿಗಳಿಗೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ ರೂಪಿಸಿ ಅಧಿನಿಯಮವನ್ನು ಜಾರಿಗೊಳಿಸಿ 20 ವರ್ಗಗಳನ್ನು ಗುರುತಿಸಿ ಸೌಲಭ್ಯಗಳನ್ನು ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಯೋಜನೆಯಡಿ ಅಪಘಾತದಿಂದ ಫಲಾನುಭವಿ ನಿಧನರಾದರೆ 5 ಲಕ್ಷ ರೂ ಪರಿಹಾರ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಹೆಲ್ಮೆಟ್ ಕಡ್ಡಾಯ ಎಂದು ಜಾರಿ ಮಾಡಿರುವುದು ಉತ್ತಮ ಕೆಲಸವಾಗಿದೆ ಎಂದು ಜಿಲ್ಲಾ ಪೊಲೀಸ್ ಇಲಾಖೆಗೆ ಅಭಿನಂದಿಸಿದರು.

ರಾಜ್ಯದ ಜನತೆಗೆ ವರ್ಷಕ್ಕೆ ನೇರವಾಗಿ 60 ಸಾವಿರ ಕೋಟಿ ರೂ. ನೀಡುತ್ತಿದ್ದು, ಐದು ವರ್ಷಕ್ಕೆ 3 ಲಕ್ಷ ಕೋಟಿ ನೀಡುವ ದೇಶದ ಏಕೈಕ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ, ನಮ್ಮ ಸರ್ಕಾರವಾಗಿದೆ. 'ಕೆರೆಯ ನೀರನ್ನು ಕೆರೆಗೆ ಚೆಲ್ಲಿ' ಎಂಬ ಗಾದೆಯಂತೆ ತೆರಿಗೆ ಹಣವನ್ನು ಜನರಿಗೆ ವಾಪಸ್ ನೀಡುತ್ತಿದ್ದೇವೆ ಎಂದು ಪ್ರತಿಪಾದಿಸಿದರು.

**ಗಿಗ್ ಕಾರ್ಮಿಕರ ವಿಮಾ ಯೋಜನೆ:**

ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿಗ್ ಕಾರ್ಮಿಕರಿಗೆ ತಲಾ 2 ಲಕ್ಷ ರೂ.ಗಳ ಅಪಘಾತ ಪರಿಹಾರ ಹಾಗೂ ಜೀವ ವಿಮಾ ಸೌಲಭ್ಯ ಸೇರಿದಂತೆ ಒಟ್ಟು 4 ಲಕ್ಷ ರೂ.ಗಳ ವಿಮಾ ಸೌಲಭ್ಯ ಒದಗಿಸುವ 'ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ' ಯನ್ನು ಜಾರಿಗೊಳಿಸಲಾಗಿದ್ದು, ಗಿಗ್ ಕಾರ್ಮಿಕರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

**ಆಶಾ ದೀಪ ಕಾರ್ಯಕ್ರಮ:**

ದೇಶದಲ್ಲಿಯೇ ಪ್ರಥಮ ಬಾರಿಗೆ ಬಳ್ಳಾರಿ ಜಿಲ್ಲೆಯಲ್ಲಿ ಆಶಾ ದೀಪ ಕಾರ್ಯಕ್ರಮ ಆರಂಭಿಸಲಾಗಿದ್ದು, ಇದರಲ್ಲಿ ಯಾವುದೇ ಉದ್ದಿಮೆದಾರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಉದ್ಯೋಗ ಅಥವಾ ಅಪ್ರೆಂಟಿಸ್ ತರಬೇತಿ ನೀಡಿದಲ್ಲಿ ಕಾರ್ಮಿಕ ಇಲಾಖೆ ವತಿಯಿಂದ 2 ವರ್ಷದವರೆಗೆ ತಿಂಗಳ 7 ಸಾವಿರ ರೂ.ನಂತೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನದಡಿ ಸಹಾಯಧನ ನೀಡಲಾಗುವುದು. ಈ ನಿಟ್ಟಿನಲ್ಲಿ ತೋರಣಗಲ್‌ನ ಜೆಎಸ್‌ಡಬ್ಲ್ಯೂ ಕಂಪನಿಗೆ 19 ಲಕ್ಷ ರೂ. ಚೆಕ್ ವಿತರಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೆ ವೇತನವನ್ನು ಸೊಸೈಟಿ ರಚಿಸಿ ಜಿಲ್ಲಾಧಿಕಾರಿಗಳ ಮೂಲಕ ಪಾವತಿಸುವ ಕಾರ್ಯ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಅವರು ಮಾತನಾಡಿ, ಬಡವರು ಮತ್ತು ಶೋಷಿತ ವರ್ಗದವರ ಪರ ಕಾಳಜಿ ಹೊಂದಿದ ಸರ್ಕಾರ ನಮ್ಮದು. ಈ ನಿಟ್ಟಿನಲ್ಲಿ ರಾಜ್ಯದ ಅಸಂಘಟಿತ ಕಾರ್ಮಿಕರ ಸುರಕ್ಷತೆ ಮತ್ತು ಭದ್ರತೆ ಒದಗಿಸುವ ಕಾರ್ಯವು ಸಚಿವ ಸಂತೋಷ್ ಲಾಡ್ ಅವರ ನೇತೃತ್ವದಲ್ಲಿ ಕಾರ್ಮಿಕ ಇಲಾಖೆಯು ಮಾಡುತ್ತಿದೆ ಎಂದು ಹೇಳಿದರು.

ಸಂಸದ ಈ.ತುಕಾರಾಂ ಅವರು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಸರ್ಕಾರವು ಕರ್ನಾಟಕ ರಾಜ್ಯದ 'ಕಾಯಕಯೋಗಿ' ಸರ್ಕಾರವಾಗಿದೆ. ವಿಧಾನಸೌಧದ ಮುಂಭಾಗ ಇರುವ 'ಸರ್ಕಾರಿ ಕೆಲಸ, ದೇವರ ಕೆಲಸ' ಎಂಬ ನಾಣ್ಣುಡಿಯಂತೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದೆ. ರಾಜ್ಯದ ಲಕ್ಷಾಂತರ ಕಾರ್ಮಿಕರ ಆರ್ಥಿಕವಾಗಿ ಸಬಲರನ್ನಾಗಿ ಮಾಡಲು ಮತ್ತು ಅವರ ಮಕ್ಕಳನ್ನು ಶೈಕ್ಷಣಿಕವಾಗಿ ಬೆಳೆಸಲು ಕಾರ್ಮಿಕ ಇಲಾಖೆಯು ಅಗತ್ಯ ಯೋಜನೆಗಳನ್ನು ರೂಪಿಸಿ ಜಾರಿಗೆ ತಂದು ಕಾರ್ಮಿಕರಿಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ಹೇಳಿದರು.

ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ರೂಪಿಸಲಾಗಿದೆ. ಬೈಪಾಸ್ ರಸ್ತೆ ಕಾಮಗಾರಿ, ರೈಲ್ವೆ ಸೇತುವೆ ನಿರ್ಮಾಣ ಕಾರ್ಯಗಳನ್ನು ಪುನರ್ ಆರಂಭಿಸಲಾಗಿದೆ. ಬಳ್ಳಾರಿ ಜಿಲ್ಲೆಯಲ್ಲಿ ರಿಂಗ್ ರೋಡ್ ಮಾಡುವ ಯೋಜನೆಯೂ ರೂಪಿಸಲಾಗಿದೆ ಎಂದು ತಿಳಿಸಿದರು.

ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್ ಅವರು ಮಾತನಾಡಿ, ಸಮಾಜದಲ್ಲಿ ವಂಚಿತರಾದ ವಿವಿಧ ಅಸಂಘಟಿತ ವಲಯಗಳ ಕಾರ್ಮಿಕರನ್ನು ಗುರುತಿಸಿ ಕಾನೂನಿನಾತ್ಮಕವಾಗಿರುವ ಹಲವು ಸೌಲಭ್ಯಗಳು ಮತ್ತು ಸಾಮಾಜಿಕ ಭದ್ರತೆಯನ್ನು ಅವರಿಗೆ ತಲುಪಿಸುವಲ್ಲಿ ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್ ಅವರ ಕಾರ್ಮಿಕ ಇಲಾಖೆಯು ಬಹಳ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು.

ದೇಶದ ಆರ್ಥಿಕ ಬೆಳವಣಿಗೆಗೆ ಅಸಂಘಟಿತ ವಿವಿಧ ವಲಯಗಳ ಕಾರ್ಮಿಕರ ಕೊಡುಗೆಯು ಒಳಗೊಂಡಿದೆ. ಸಮಾಜದಲ್ಲಿ ಅವರಿಗೆ ಖಾಯಂ ಉದ್ಯೋಗಾವಕಾಶ ಇಲ್ಲದಿದ್ದರೂ ದಿನಕ್ಕೆ 14 ರಿಂದ 16 ತಾಸುಗಳ ವರೆಗೆ ದುಡಿಯುವ ಶ್ರಮಿಕ ವರ್ಗದವರಾಗಿದ್ದಾರೆ. ಅಂತಹ ಕುಟುಂಬಗಳನ್ನು ಗುರುತಿಸಿ ಸಾಮಾಜಿಕ ಭದ್ರತೆ ರೂಪಿಸಿ ತಲುಪಿಸುವ ಕೆಲಸ ರಾಜ್ಯ ಸರ್ಕಾರ ಮಾಡುತ್ತಿದೆ. ಮುಖ್ಯವಾಗಿ ಕಾರ್ಮಿಕರಿಗಿರುವ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕಾರ್ಯವಾಗಬೇಕಿದೆ ಎಂದರು.

ಸಂಡೂರು ಶಾಸಕರಾದ ಈ.ಅನ್ನಪೂರ್ಣ ಅವರು ಮಾತನಾಡಿ, ಬೆವರು ಮತ್ತು ಶ್ರಮದಿಂದ ಸಮಾಜ ಮುನ್ನಡೆಸುತ್ತಿರುವ ಕಾರ್ಮಿಕರ ಕೈಗಳನ್ನು ಬಲಪಡಿಸುವ ಮತ್ತು ಕಾರ್ಮಿಕರ ಕಷ್ಟ-ಕಾರ್ಪಣ್ಯಗಳನ್ನು ಅರಿಯುವ ಕೆಲಸ ನಮ್ಮ ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಆರಂಭಕ್ಕೂ ಮುನ್ನ ಭಾರತ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಲಾಯಿತು. ಬಳಿಕ ಸಾಂಕೇತಿಕವಾಗಿ ವಿವಿಧ ವರ್ಗಗಳಡಿ ನೋಂದಾಯಿಸಿಕೊಂಡಿದ್ದ ಕಾರ್ಮಿಕರಿಗೆ ಸಚಿವರು ಮತ್ತು ಗಣ್ಯರು ಸ್ಮಾರ್ಟ್ ಕಾರ್ಡ್ ವಿತರಿಸಿದರು. ಇನ್ನುಳಿದಂತೆ ಬಳ್ಳಾರಿ ಜಿಲ್ಲೆಯಲ್ಲಿ ವಿವಿಧ ವರ್ಗಗಳಡಿ ನೋಂದಾಯಿಸಿಕೊಂಡಿದ್ದ 2,400 ಕ್ಕೂ ಹೆಚ್ಚು ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲು ವಾಲ್ಮೀಕಿ ಭವನದ ಆವರಣದಲ್ಲಿ 3 ಕೌಂಟರ್‌ಗಳನ್ನು ಹಾಕಲಾಗಿತ್ತು. ಕಾರ್ಮಿಕರು ಸಾಲಾಗಿ ಬಂದು ಸ್ಮಾರ್ಟ್ ಕಾರ್ಡ್ ಪಡೆದು-ಕೊಂಡರು.

ನಂತರ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ಅವರಿರುವ ಸ್ಥಳಕ್ಕೇ ತೆರಳಿ ಉಚಿತವಾಗಿ ಆರೋಗ್ಯ ತಪಾಸಣೆಗೆ ಒಳಪಡಿಸುವುದು, ಚಿಕಿತ್ಸೆ ಹಾಗೂ ಸಲಹೆ ನೀಡಲು ಮೊದಲಾದ ಸೇವೆ ಒದಗಿಸುವ 3 ಅತ್ಯಾಧುನಿಕ ಸಂಚಾರಿ ಆರೋಗ್ಯ ಘಟಕ ವಾಹನಗಳಿಗೆ ಕಾರ್ಮಿಕ ಸಚಿವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳ ಆಯುಕ್ತ ಡಾ.ಎಚ್.ಎನ್.ಗೋಪಾಲಕೃಷ್ಣ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಜಂಟಿ ಕಾರ್ಯದರ್ಶಿ ಡಾ.ಎಸ್.ಬಿ ರವಿಕುಮಾರ್, ದಾವಣಗೆರೆಯ ಬಳ್ಳಾರಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಡಾ.ಅವಿನಾಶ್ ನಾಯಕ್, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರು ಸೇರಿದಂತೆ ಜಿಲ್ಲೆಯ ಎಲ್ಲಾ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸದಸ್ಯರು, ಕಾರ್ಮಿಕ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

## ಬೆಳೆ ವಿಮೆ ಯೋಜನೆ: ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ತೋಟಗಾರಿಕೆ ಇಲಾಖೆ ವತಿಯಿಂದ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಬೆಳೆ ವಿಮೆ ಯೋಜನೆ (ಕೆಆರ್‌ಎಸ್-ಪಿಎಂಎಫ್‌ಬಿವೈ)ಗೆ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ರೈತರು ತಮ್ಮ ಬೆಳೆಗಳ ವಿಮೆಗೆ ನೋಂದಾಯಿಸಿಕೊಳ್ಳಬಹುದು ಎಂದು ಜಿಪಂ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು, ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ ಮತ್ತು ಸಿಡಿಲಿನಿಂದ ಉಂಟಾಗುವ ಬೆಂಕಿ ಅವಘಡ ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕ (ಹಳ್ಳಿ, ಗ್ರಾಮಪಂಚಾಯಿತಿ, ಹೋಬಳಿ) ವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡಲಾಗುವುದು.

ವಿಮಾ ಯೋಜನೆಯಡಿ ಒಳಪಡುವ ನೀರಾವರಿ ಬೆಳೆಗಳಾದ ಕೆಂಪು ಮೆಣಸಿನಕಾಯಿ ಮತ್ತು ಈರುಳ್ಳಿ ಬೆಳೆಗಳಾಗಿವೆ.

*ಕೆಂಪು ಮೆಣಸಿನಕಾಯಿ:*

ಬಳ್ಳಾರಿ, ಕಂಪ್ಲಿ, ಕುರುಗೋಡು, ಕೋಳೂರು, ಮೋಕಾ, ರೂಪನಗುಡಿ, ಸಿರುಗುಪ್ಪ, ಕರೂರು, ತೆಕ್ಕಲಕೋಟೆ, ಹಚ್ಚೊಳ್ಳಿ, ತೋರಣಗಲ್ಲು ವಿಮೆಗೆ ಒಳಪಡುವ ಪ್ರದೇಶಗಳಾಗಿದ್ದು, ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.1,07,500 ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.5,375 ಆಗಿರುತ್ತದೆ.

*ಈರುಳ್ಳಿ:*

ಸಂಡೂರು ತಾಲ್ಲೂಕಿನ ಚೋರನೂರು ಹಾಗೂ ತೋರಣಗಲ್ಲು ವಿಮೆಗೆ ಒಳಪಡುವ ಪ್ರದೇಶಗಳಾಗಿದ್ದು, ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.80,500 ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.4,025 ಆಗಿರುತ್ತದೆ.

ರೈತರು ಅಗತ್ಯ ದಾಖಲೆಗಳೊಂದಿಗೆ ಎರಡು ಬೆಳೆಗಳ ವಿಮೆಗೆ ನೋಂದಾಯಿಸಿಕೊಳ್ಳಲು ಜುಲೈ 31 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಮತ್ತು ಕುರುಗೋಡು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08392-278177 ಹಾಗೂ ಮೊ.9480257282, ಸಂಡೂರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08395-260389 ಹಾಗೂ ಮೊ.9740934208, ಕಂಪ್ಲಿ ಮತ್ತು ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08396-222066 ಹಾಗೂ ಮೊ.9448910277 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿರುಗುಪ್ಪ: ತಾಳೂರು ಗ್ರಾಮದಲ್ಲಿ ವಸತಿ ಗೃಹ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಬಿ.ಎಂ.ನಾಗರಾಜ

## ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಸರ್ಕಾರ ಬದ್ಧ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ಗ್ರಾಮೀಣ ಭಾಗದ ಜನತೆಯ ವೈಯಕ್ತಿಕ ಆರೋಗ್ಯಕ್ಕಾಗಿ ನಗರಗಳಿಗೆ ಆಗಮಿಸಿ ಹಣ ವೆಚ್ಚ ಮಾಡುವುದನ್ನು ತಪ್ಪಿಸಲು ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅಗತ್ಯ ಪರಿಕರಗಳ ಒದಗಿಸುವಿಕೆ, ಸಿಬ್ಬಂದಿಗಳಿಗೆ ವಸತಿ ಗೃಹ ನಿರ್ಮಾಣ ಮಾಡುವ ಮೂಲಕ ಜನತೆಗೆ ಸ್ಥಳೀಯ ಆಸ್ಪತ್ರೆಗಳಲ್ಲಿಯೇ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲು ಸರಕಾರ ಬದ್ಧವಾಗಿದೆ ಎಂದು ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎಂ.ನಾಗರಾಜ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 50 ಲಕ್ಷ ರೂ.ಗಳ ಅನುದಾನದಡಿ ಸಿರುಗುಪ್ಪ ತಾಲೂಕಿನ ತಾಳೂರು ಗ್ರಾಮದಲ್ಲಿ ಶುಶ್ರೂಷಣಾಧಿಕಾರಿ ಹಾಗೂ ಡಿ-ಗ್ರೂಪ್ ಸಿಬ್ಬಂದಿಯವರಿಗೆ ವಸತಿಗೃಹಗಳ ನಿರ್ಮಾಣಕ್ಕೆ ಗುರುವಾರ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಜನರ ಆರೋಗ್ಯದ ಕಾಳಜಿ ವಹಿಸುವ ಉನ್ನತ ಮಹಾತ್ವಾಕಾಂಕ್ಷಿಯನ್ನು ರಾಜ್ಯ ಸರಕಾರ ಹೊಂದಿದ್ದು, ಈಗಾಗಲೇ ಸಿರುಗುಪ್ಪ ಪಟ್ಟಣ-ಕ್ಕೆ 150 ಹಾಸಿಗೆಗಳ ಹೈಟೆಕ್ ಆಸ್ಪತ್ರೆಯ ನಿರ್ಮಾಣಕ್ಕೆ ಸರಕಾರದ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು. ಈಗಾಗಲೇ ಜಿಲ್ಲೆಯ ಕುರವಳ್ಳಿ ಹಾಗೂ ರಾವಿಹಾಳ ಗ್ರಾಮಗಳಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲಾಗಿದ್ದು, ವೈದ್ಯರು ಹಾಗೂ ಸಿಬ್ಬಂದಿಯವರು ಕೇಂದ್ರ ಸ್ಥಾನದಲ್ಲಿಯೇ ಲಭ್ಯವಾಗಲು ಸಹಾಯಕವಾಗಿ ವಸತಿಗೃಹಗಳ ನಿರ್ಮಾಣ ಮಾಡಲಾಗುತ್ತಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು, ಸಿರುಗುಪ್ಪ ತಾಲೂಕಿನ ಆರೋಗ್ಯ ಕೇಂದ್ರಗಳಲ್ಲಿ ರಾಜ್ಯ ಸರಕಾರದಿಂದ ರಕ್ತಪರೀಕ್ಷೆ ಮಾಡಲು ಸೆಲ್ ಕೌಂಟರ್‌ಗಳನ್ನು ಹಾಗೂ ಹೃದಯ ಸಮಸ್ಯೆಗಳ ಆರಂಭಿಕ ತೊಂದರೆಗಳನ್ನು ಗುರುತಿಸಲು ಇಸಿಜಿ ಯಂತ್ರಗಳನ್ನು ಕ್ಷೇತ್ರದ ಶಾಸಕರ ಮುತವರ್ಜಿಯಿಂದ ವ್ಯವಸ್ಥೆ ಮಾಡಲಾಗಿದ್ದು, ಅಗತ್ಯವಿರುವವರು ಹಣ ವೆಚ್ಚ ಮಾಡದೇ ಸ್ಥಳೀಯವಾಗಿ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ವಿನಂತಿಸಿದರು. ಈ ಸಂದರ್ಭದಲ್ಲಿ ತಾಳೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಬಲ್ಲೂರಪ್ಪ, ಆಡಳಿತ ವೈದ್ಯಾಧಿಕಾರಿ ಡಾ.ಸುನೀಲ್, ಗ್ರಾಮ ಪಂಚಾಯತ್ ಸದಸ್ಯರಾದ ಪುರುಷೋತ್ತಮರೆಡ್ಡಿ, ರಾಮಾಂಜನಿ, ಫಕೀರಪ್ಪ, ದೇವರೆಡ್ಡಿ, ತುರು ಮುಂದಪ್ಪ, ಊಳೂರು ಈರಣ್ಣ ನೇಣಿಕಪ್ಪ, ದಿಬ್ಬಲಿ ಗಾದಿಲಿಂಗಪ್ಪ, ಅಂಬ್ರೇಶ, ಮಾಳಮ್ಮ, ಅಭಿಯಂತರರಾದ ಚಂದನಗೌಡ, ರಾಜೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಪ್ಪ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

### ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ವಿಚಾರ ಸಂಕಿರಣ

## ಸಾಮರಸ್ಯ ಕಾವ್ಯಗಳು ರಚನೆಯಾಗಲಿ: ಕಾ.ತ.ಚಿಕ್ಕಣ್ಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.05-ಪ್ರಸ್ತುತ ಸಮಾಜದಲ್ಲಿ ಕೂಡಿ ಬಾಳುವ ಸಂದೇಶ ನೀಡುವ ಕಾವ್ಯಗಳು ರಚನೆಯಾಗಬೇಕು ಎಂದು ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಕಾ. ತ. ಚಿಕ್ಕಣ್ಣ ಹೇಳಿದರು.



ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಸಂತಕವಿ ಕನಕದಾಸ ಮತ್ತು ತತ್ವಪದಕಾರ ಅಧ್ಯಯನ ಕೇಂದ್ರ, ಬೆಂಗಳೂರು ಹಾಗೂ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಕನ್ನಡ ಅಧ್ಯಯನ ವಿಭಾಗದ ಸಂಯುಕ್ತ ಆಶ್ರಯದಲ್ಲಿ 'ಕನ್ನಡ ಕಾವ್ಯ ಪರಂಪರೆ ಮತ್ತು ಕನಕದಾಸ' ಎರಡು ದಿನಗಳ ವಿಚಾರ ಸಂಕಿರಣವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಕಾವ್ಯ ಪರಂಪರೆಯಲ್ಲಿ ಕನಕದಾಸರನ್ನು ಉನ್ನತ ಸ್ಥಾನದಲ್ಲಿರಿಸಿದ್ದೇವೆ. 15ನೇ ಶತಮಾನದಲ್ಲಿನ ಕನಕದಾಸರ ಕಾವ್ಯ ಹಾಗೂ ತತ್ವಪದಗಳು ಮಾನವಿ ಮೌಲ್ಯಗಳಿಂದ ಇಂದಿಗೂ ಪ್ರಸ್ತುತವಾಗಿವೆ. ಸಮಾಜದ ಸಂಕೀರ್ಣ ವ್ಯವಸ್ತೆಯನ್ನು ಬಿಡಿಸಿ ಹೇಳುತ್ತವೆ. ಸಮಾಜದ ಒಳಿತಿಗಾಗಿ ಹಲವಾರು ಕವಿಗಳು ದಾರ್ಶನಿಕರಾಗಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ. ಮುನಿರಾಜು ಮಾತನಾಡಿ, ಕನಕದಾಸರ ಕೀರ್ತನೆಗಳಲ್ಲಿ ಜನರ ಸಾಮಾಜಿಕ ಬದುಕಿನ ವಾಸ್ತವಾಂಶಗಳನ್ನು ಗುರುತಿಸಿದ್ದಾರೆ. ಸಾಮಾಜಿಕ ಬದುಕನ್ನು ತಿದ್ದುತ್ತಾ ಅಂತರಂಗದ ಅರಿವಿನ ಬೆಳಕನ್ನು ಹೊತ್ತಿಸಿದರು. ಕನಕದಾಸರು ತಮ್ಮ ಕಾಲದಲ್ಲಿನ ಸಂಕೀರ್ಣ ವ್ಯವಸ್ಥೆಯನ್ನು ಕಾವ್ಯಗಳ ಮುಖಾಂತರ ತಿಳಿಸಿದ್ದಾರೆ. ವಿದ್ಯಾರ್ಥಿಗಳು ಚರ್ಚಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಜ್ಞಾನವನ್ನು ವೃದ್ಧಿಸಿಕೊಳ್ಳಬಹುದು. ವಿವಿಯಲ್ಲಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ಜಿ.ಕೆ. ಸಂತೋಷ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿವಿದ ರಾಜ್ಯಗಳಿಂದ ಸಂಶೋಧನಾ ವಿದ್ಯಾರ್ಥಿಗಳು ಸೇರಿದಂತೆ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿಚಾರ ಸಂಕಿರಣದಲ್ಲಿ ಭಾಗವಹಿಸಿದ್ದರು. ನಂತರದಲ್ಲಿ ವಿಚಾರಗೋಷ್ಠಿಗಳು ಜರುಗಿದವು.

ಈ ಸಂದರ್ಭದಲ್ಲಿ ವಿವಿಯ ಪ್ರಭಾರಿ ಕುಲಸಚಿವ ಪ್ರೊ.ಜಿ.ಪಿ.ದಿನೇಶ್, ಕಲಾ ನಿಕಾಯದ ಡೀನರಾದ ಪ್ರೊ.ರಾಬರ್ಟ್ ಜೋಸ್, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸದಸ್ಯರಾದ ದಸ್ತಗಿರ ದಿನ್ನಿ, ಡಾ.ಅನುಪಮ.ಎಚ್.ಎಸ್., ಡಾ.ಎಚ್.ಶಶಿಕಲಾ ವೇದಿಕೆ ಮೇಲೆ ಉಪಸ್ಥಿತರಿದ್ದರು. ವಿವಿಯ ಕನ್ನಡ ಅಧ್ಯಯನ ವಿಭಾಗದ ಉಪನ್ಯಾಸಕ ಹಾಗೂ ಕಾರ್ಯಕ್ರಮ ಸಂಯೋಜಕರಾದ ಡಾ. ಶಿವಪ್ರಕಾಶ ಕೆ. ಎಸ್. ನಿರೂಪಿಸಿದರು. ಡಾ. ಶಕೀಲಾ ಕೆ ವಂದಿಸಿದರು. ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸರ್ವ ಸದಸ್ಯರು, ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ಆಗಸ್ಟ್‌ನಲ್ಲಿ ರಾಯಚೂರಲ್ಲಿ ಸೇನಾ ನೇಮಕಾತಿ ರ್‍ಯಾಲಿ: ಸಹಕಾರ ನೀಡಲು ಅಧಿಕಾರಿಗಳಿಗೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 05-ಭಾರತೀಯ ಸೇನೆಯಲ್ಲಿನ ವಿವಿಧ ಹುದ್ದೆಗಳ ಭರ್ತಿಗಾಗಿ ಆಗಸ್ಟ್ 08 ರಿಂದ ಆಗಸ್ಟ್ 22ರವರೆಗೆ ಜಿಲ್ಲೆಯಲ್ಲಿ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಗೆ ಜಿಲ್ಲೆಯ ಎಲ್ಲಾ ಇಲಾಖೆಗಳು ಅಗತ್ಯ ಸಹಕಾರ ನೀಡಬೇಕೆಂದು ರಾಯಚೂರು ವಿಭಾಗೀಯ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಹೇಳಿದರು.




ಜುಲೈ 03ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಜರುಗಿದ ಸೇನಾ ನೇಮಕಾತಿ ರ್‍ಯಾಲಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರದ ಕೃಷಿ ವಿಶ್ವವಿದ್ಯಾಲಯದ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಬೇರೆ, ಬೇರೆ ಜಿಲ್ಲೆಗಳಿಂದ ಸುಮಾರು 15 ರಿಂದ 16 ಸಾವಿರ ಅಭ್ಯರ್ಥಿಗಳು ಭಾಗವಹಿಸಲಿದ್ದಾರೆ. ಈ ರ್‍ಯಾಲಿಯ ಯಶಸ್ವಿ ನಿರ್ವಹಣೆಗಾಗಿ ವೇದಿಕೆ ಸಮಿತಿ, ಭದ್ರತಾ ಸಮಿತಿ, ಮೂಲಭೂತ ಸೌಕರ್ಯ ಸಮಿತಿ, ಸಾರಿಗೆ ಸಮಿತಿ, ಆಹಾರ ಸಮಿತಿ, ವಸತಿ ಸಮಿತಿ, ಆರೋಗ್ಯ ನೈರ್ಮಲ್ಯೀಕರಣ ಸಮಿತಿ, ಪ್ರಚಾರ ಮತ್ತು ಮಾಧ್ಯಮ ಸಮಿತಿ, ವಿದ್ಯುತ್ ಸರಬರಾಜು ಸಮಿತಿ ಹಾಗೂ ದಾಖಲೆಗಳ ಪರಿಶೀಲನೆ ಸಮಿತಿ ರಚಿಸಲಾಗಿದೆ.

ಎಲ್ಲಾ ಸಮಿತಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ರ್‍ಯಾಲಿಯಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳಿಗೆ ಹಾಗೂ ನಿಯೋಜಿತ ಸಿಬ್ಬಂದಿಗೆ ಕುಡಿಯುವ ನೀರು, ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಮತ್ತು ಬಳಕೆಗೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಹಾಗೂ ಕ್ರೀಡಾಂಗಣದಲ್ಲಿ ಸ್ವಚ್ಛತೆಗೆ ಕ್ರಮ ವಹಿಸಬೇಕು. ಅಭ್ಯರ್ಥಿಗಳಿಗೆ ತಂಗಲು ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಅಧಿಕಾರಿಗಳ ತಂಡ ಹಾಗೂ ಅಂಬುಲೆನ್ಸ್ ವ್ಯವಸ್ಥೆ, ಅಗ್ನಿಶಾಮಕ ತಂಡ, ವಿದ್ಯುತ್ ದೀಪದ ವ್ಯವಸ್ಥೆ ಸೇರಿದಂತೆ ಮುಂತಾದ ವ್ಯವಸ್ಥೆಗಳು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನೇಮಕಾತಿ ರ್‍ಯಾಲಿಗೆ ಆಗಮಿಸುವ ಎಲ್ಲಾ ಅಭ್ಯರ್ಥಿಗಳಿಗೆ ಹಾಗೂ ರ್‍ಯಾಲಿ ವೇಳೆ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸಲಾಗುವುದು. ಜನಸಂದಣಿ ನಿರ್ವಹಣೆಗಾಗಿ ಕ್ರೀಡಾಂಗಣದ ಹೊರಗಡೆ, ಮುಂಭಾಗದಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ ಸಾರ್ವಜನಿಕ ರಸ್ತೆ ಸಂಚಾರಕ್ಕೆ ತೊಂದರೆಯಾಗದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು ಎಂದು ಹೇಳಿದರು.

ಈ ವೇಳೆ ಸೇನಾ ನೇಮಕಾತಿ ಅಧಿಕಾರಿ ಎ.ಕೆ.ಉಪಾಧ್ಯಾಯ ಅವರು ಮಾತನಾಡಿ, ಜಿಲ್ಲೆಯಲ್ಲಿ ಆಗಸ್ಟ್ 08 ರಿಂದ ಆಗಸ್ಟ್ 22ರವರೆಗೆ ನಡೆಯಲಿರುವ ಸೇನಾ ನೇಮಕಾತಿ ರ್‍ಯಾಲಿಗೆ ರಾಯಚೂರು ಜಿಲ್ಲಾಡಳಿತದಿಂದ ನಮಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು. ನೇಮಕಾತಿ ಪಾರದರ್ಶಕವಾಗಿ ನಡೆಸುತ್ತಿರುವುದರಿಂದ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ಮತ್ತು ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಗಾಗಿ ಕಂದಾಯ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ನಿಯೋಜನೆ ಮಾಡಬೇಕು. ಸೇನಾ ನೇಮಕಾತಿ ರ್‍ಯಾಲಿಯು ಸುಸೂತ್ರವಾಗಿ ನಡೆದರೆ ರಾಯಚೂರು ಜಿಲ್ಲಾಡಳಿತಕ್ಕೆ ಮತ್ತು ನಮ್ಮ ಸೇನೆಗೂ ಒಳ್ಳೆಯ ಹೆಸರು ಬರುತ್ತದೆ. ಹಾಗಾಗಿ ರ್‍ಯಾಲಿಯನ್ನು ಸುವ್ಯವಸ್ಥಿತವಾಗಿ ನಡೆಸಲು ತಮ್ಮ ಸಹಕಾರ ನಮಗೆ ಅತ್ಯಗತ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಶ ಬಾಬು, ಜೆಸ್ಕಾಂ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ದೇಸಾಯಿ, ಪಶ್ಚಿಮ ವೃತ್ತದ ಸಿಪಿಐ ನಿಂಗಪ್ಪ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯವಸ್ಥಾಪಕ ಸಂತೋಷ, ಪಶ್ಚಿಮ ಪೊಲೀಸ್ ಠಾಣೆಯ ಪಿ.ಎಸ್.ಐ ಮಂಜುನಾಥ, ಅಗ್ನಿಶಾಮಕ ದಳದ ರವೀಂದ್ರ ಘಟಿಗಿ ಸೇರಿದಂತೆ ಇತರರು ಇದ್ದರು.

### ಬಾದಾಮಿ, ಮುಧೋಳ, ಸೂರಪಾಲಿಯಲ್ಲಿ ಪ್ರದರ್ಶನ

# ಪ್ರವಾಹ ರಕ್ಷಣಾ ಕಾರ್ಯಾಚರಣೆಯ ಅಣಕು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ಪ್ರವಾಹ ಸಂದರ್ಭದಲ್ಲಿ ಜನರ ರಕ್ಷಣೆಗಾಗಿ ಕೈಗೊಳ್ಳಬೇಕಾಗಿರುವ ಮುನ್ನಚ್ಚರಿಕೆ ಕ್ರಮಗಳು, ವಿಪತ್ತು ನಿರ್ವಹಣೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಶನಿವಾರ ಜಿಲ್ಲೆಯ ಮೂರು ಕಡೆಗಳಲ್ಲಿ ಅಣಕು ಪ್ರದರ್ಶನ ನಡೆಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಅಗ್ನಿಶಾಮಕದಳ, ಗೃಹರಕ್ಷಕದಳ ಹಾಗೂ ಪೊಲೀಸ್ ಇಲಾಖೆ ಸಹಯೋಗದಲ್ಲಿ ಜಿಲ್ಲೆಯ ಬಾದಾಮಿಯ ಅಗಸ್ತ್ಯ ತೀರ್ಥ ಹೊಂಡ, ಮುಧೋಳ ತಾಲೂಕಿನ ಯಾದವಾಡ ಸೇತುವೆ ಹಾಗೂ ಜಮಖಂಡಿ ತಾಲೂಕಿನ ಸೂರಪಾಲಿಯಲ್ಲಿ ನಡೆದ ಪ್ರವಾಹ ರಕ್ಷಣಾ ಕಾರ್ಯಾಚರಣೆಯ ಅಣಕು ಪ್ರದರ್ಶನದಲ್ಲಿ ಪ್ರವಾಹ ಸಂದರ್ಭದಲ್ಲಿ ಎದುರಾಗುವ ವಿಪತ್ತು, ಅಪಾಯಕ್ಕೆ ಸಿಲುಕಿರುವ ಜನರ ರಕ್ಷಣೆ ಮಾಡುವ ಕಾರ್ಯಾಚಾರಣೆಯ ಪ್ರಾತ್ಯಕ್ಷಿಕೆ ನಡೆಸಲಾಯಿತು.

ನದಿಯಲ್ಲಿ ಸಿಲುಕಿರುವ ಜನರನ್ನು ರಕ್ಷಿಸಿ ಹೊರ ತಂದು ಪ್ರಥಮ ಚಿಕಿತ್ಸೆ ನೀಡುವುದು ಮತ್ತು ಅಲ್ಲಿಂದ ಆಸ್ಪತ್ರೆಗೆ ಕಳುಹಿಸುವ ಸನ್ನಿವೇಶವನ್ನು ಪ್ರದರ್ಶಿಸಲಾಯಿತು. ಪ್ರವಾಹದಲ್ಲಿ ಕೊಚ್ಚಿಕೊಂಡು ಹೋಗಿ ವ್ಯಕ್ತಿ ಮುಳುಗುತ್ತಿರುವ ಸಮಯದಲ್ಲಿ ಅಗ್ನಿಶಾಮಕ ಸಿಬ್ಬಂದಿ ದೋಣಿಯಲ್ಲಿ ರಕ್ಷಣೆ ಮಾಡುವ ಪ್ರಾತ್ಯಕ್ಷಿಕೆ ಎಲ್ಲರ ಗಮನ ಸೆಳೆಯಿತು. ನಂತರ ಸಿದ್ದರಾಮೇಶ್ವರ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾದ ಕಾಳಜಿ ಕೇಂದ್ರಕ್ಕೆ ತೆರಳಿ ಅಲ್ಲಿ ಜನರಿಗೆ ವಾಸ್ತವ್ಯ, ಊಟದ ವ್ಯವಸ್ಥೆ, ಔಷಧ ವಿತರಣೆ ಹಾಗೂ ಬ್ಲಾಂಕೇಟ್ ಪೂರೈಸುತ್ತಿರುವ ಹಾಗೂ ಜಿಲ್ಲಾಡಳಿತ ಕೈಗೊಂಡ ಎಲ್ಲ ವ್ಯವಸ್ಥೆಯ ಬಗ್ಗೆ ತಿಳಿಸುವ ಅಣಕು ಪ್ರದರ್ಶನ ಮಾಡಲಾಯಿತು.

> “ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಪ್ರಕಾಶ ಪಮ್ಮಾರ, ನಗರಸಭೆ ಅಧ್ಯಕ್ಷೆ ಸುನಂದ ತೇಲಿ ಸೇರಿದಂತೆ ಇತರೆ ಅಧಿಕಾರಿಗಳು ಅನಗವಾಡಿ ಸೇತುವೆ ಬಳಿ ಬೋಟ್ ಏರಿ ನದಿಯನ್ನು ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ ಅವರು, ಪ್ರವಾಹ ಪರಿಸ್ಥಿತಿ ಉಂಟಾದಲ್ಲಿ ನಿರ್ವಹಣೆಗೆ ಜಿಲ್ಲಾಡಳಿತ ಎಲ್ಲ ರೀತಿಯಲ್ಲಿ ಸಿದ್ದತೆ ಮಾಡಿಕೊಂಡಿದೆ. ಪೊಲೀಸ್ ಹಾಗೂ ಅಗ್ನಿಶಾಮಕ ದಳ ಸಜ್ಜುಗೊಂಡಿದ್ದಾರೆ. ಜನರು ಪ್ರವಾಹ ಪರಿಸ್ಥಿತಿಯಲ್ಲಿ ನೀರಿಗೆ ಇಳಿಯುವುದು, ನೀರಿನ ಜೊತೆ ದುಸ್ಸಾಹಸಕ್ಕೆ ಕೈಹಾಕುವುದು ಮಾಡಬಾರದು. ಜಿಲ್ಲಾಡಳಿತಕ್ಕೆ ಸ್ಪಂದಿಸುವ ಕಾರ್ಯವಾಗಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಜಿಲ್ಲೆಯ ಕೃಷ್ಣಾ, ಘಟಪ್ರಭಾ ಹಾಗೂ ಮಲಪ್ರಭಾ ನದಿ ಪಾತ್ರದಲ್ಲಿ ಪ್ರವಾಹ ಉಂಟಾದಾಗ ರಕ್ಷಣೆ ಕಾರ್ಯಾಚಾರಣೆ ಅಣಕು ಪ್ರದರ್ಶನ ನಡೆಸಲಾಗುತ್ತಿದೆ. ಎಲ್ಲೆಲ್ಲಿ ಪ್ರವಾಹ ಉಂಟಾಗುತ್ತದೆ. ಎಷ್ಟು ಸೇತುವೆಗಳು ಮುಳುಗಡೆಯಾಗುತ್ತವೆ ಎಂಬುದನ್ನು ಗುರುತಿಸಿಕೊಂಡು ಆ ವ್ಯಾಪ್ತಿಯಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಲಾಗುತ್ತಿದೆ. ಪ್ರವಾಹ ನಿರ್ವಹಣೆಗೆ ಮುಂಜಾಗ್ರತವಾಗಿ ಜಿಲ್ಲಾಡಳಿತ ಜಾಗೃತಿ ಮೂಡಿಸುತ್ತಿದೆ ಎಂದರು.

ಅಣಕು ಪ್ರದರ್ಶನ ಕಾರ್ಯದಲ್ಲಿ ಮುಧೋಳ ನಗರಸಭೆ ಅಧ್ಯಕ್ಷೆ ಸುನಂದ ತೇಲಿ, ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿ–ಕರ, ತಹಶೀಲ್ದಾರ ಸನಮೋರೆ, ಜಮಖಂಡಿ ಡಿವಾಯ್‌ಎಸ್‌ಪಿ ಮಹಮ್ಮದ ರೋಷನ್, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ ಸಿದ್ನಾಳ, ನಗರಸಭೆ ಪೌರಾಯುಕ್ತ ಗೋಪಾಲ ಕಾಸೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇಂದು ಪ್ರತಿಭಾ ಪುರಸ್ಕಾರ–ಸಾಧಕರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ತಾಲೂಕಾ ಗಾಣಿಗ ಸಮಾಜ, ಜ್ಯೋತಿ ಕೋ ಆಪ್ ಕ್ರೆಡಿಟ್ ಸೊಸೈಟಿ ಸಹಯೋಗದಲ್ಲಿ 2024–25 ನೇ ಸಾಲಿನ ಗಾಣಿಗ ಸಮಾಜದ ಎಸ್.ಎಸ್.ಎಲ್‌ಸಿ. ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರು, ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಗಾಣಿಗ ಸಮಾಜದ ಜಿಲ್ಲಾಧ್ಯಕ್ಷ ಅಶೋಕ ಲಾಗಲೋಟಿ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಜುಲೈ 6 ಭಾನುವಾರ ಬೆಳಿಗ್ಗೆ 10.30 ಕ್ಕೆ ಚರಂತಿಮಠದ ಶಿವಾನುಭವ ಕಲ್ಯಾಣ ಮಂಟಪದಲ್ಲಿ ಕಾರ್ಯಕ್ರಮ ಜರುಗಲಿದ್ದು, ಸಮಾರಂಭದ ದಿವ್ಯ ಸಾನಿಧ್ಯವನ್ನು ಡಾ.ಜಯಬಸವ ಕುಮಾರ ಸ್ವಾಮೀಜಿ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಗಾಣಿಗ ಸಮಾಜದ ಜಿಲ್ಲಾಧ್ಯಕ್ಷ ಅಶೋಕ ಲಾಗಲೋಟಿ ವಹಿಸುವರು. ಮಾಜಿ ಡಿಸಿಎಂ, ಅಥಣಿ ಶಾಸಕ ಲಕ್ಷ್ಮಣ ಸವದಿ, ಸಂಸದ ಪಿ.ಸಿ.ಗದ್ದಿಗೌಡರ ಕಾರ್ಯಕ್ರಮ ಉದ್ಘಾಟಿಸುವರು ಎಂದರು.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಆನಂದ ನ್ಯಾಮಗೌಡ, ಅಖಿಲ ಭಾರತ ಗಾಣಿಗ ಸಂಘದ ರಾಜ್ಯಾಧ್ಯಕ್ಷ ಗುರಣ್ಣ ಗೋಡಿ, ರಾಜ್ಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಲೋಣಿ, ಗಾಣಿಗ ಸಮಾಜದ ನೌಕರರ ಸಂಘದ ರಾಜ್ಯಾಧ್ಯಕ್ಷ ಆರ್.ಜಿ.ಪಾಟೀಲ, ಕಾಂಗ್ರೆಸ್ ಮುಖಂಡ ಬಸವಪ್ರಭು ಸರನಾಡಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ಕುಮಾರ ಯಳ್ಳಿಗುತ್ತಿ, ಜ್ಯೋತಿ ಕೋ ಆಪ್ ಕ್ರೆಡಿಟ್ ಸೊಸೈಟಿ ಅಧ್ಯಕ್ಷ ಸಿದ್ದಣ್ಣ ಕಾಖಂಡಕಿ, ಯುವ ಮುಖಂಡ ಸಂತೋಷ ಹೊಕ್ರಾಣಿ, ಗಾಣಿಗ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಗಣ್ಣ ಗೋಡಿ, ಅಖಿಲ ಭಾರತ ಗಾಣಿಗ ಸಂಘದ ಯುವ ಘಟಕದ ರಾಜ್ಯಾಧ್ಯಕ್ಷ ದುಂಡಪ್ಪ ಏಳೆಮ್ಮಿ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಕವಿತಾ ಏಳೆಮ್ಮಿ, ಯುವ ಘಟಕದ ತಾಲೂಕಾ ಅಧ್ಯಕ್ಷ ವೀರೇಶ ಹೆರಕಣ್ಣವರ ಆಗಮಿಸಲಿದ್ದಾರೆಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ದುಂಡಪ್ಪ ಏಳೆಮ್ಮಿ, ಸಿದ್ದಣ್ಣ ಕಾಖಂಡಕಿ, ನಿಂಗಣ್ಣ ಗೋಡಿ, ಪರಶುರಾಮ ಛಬ್ಬಿ ಉಪಸ್ಥಿತರಿದ್ದರು.

# ನಾಳೆ ಫಿಜಿಯೊಥೆರಪಿ ಕಾಲೇಜಿನಲ್ಲಿ ಪದವಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ನಗರದ ಬಿವಿವಿ ಸಂಘದ ಫಿಜಿಯೊಥೆರಪಿ ಕಾಲೇಜಿನ ಎರಡನೇ ವರ್ಷದ ಪದವಿ ಪ್ರದಾನ ಸಮಾರಂಭ ಜೂನ್ 7 ಸೋಮವಾರ ಮುಂಜಾನೆ 11 ಗಂಟೆಗೆ ನಡೆಯಲಿದೆ.

ನವನಗರದ ಎಸ್. ನಿಜಲಿಂಗಪ್ಪ ಕಾಲೇಜಿನ ಆವರಣದಲ್ಲಿರುವ ಅತ್ರೇಯ ಹಾಲ್‌ನಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ದೆಹಲಿಯ ಫಿಜಿಯೊಥೆರಪಿ ಪ್ರೊಫೆಷನಲ್ ಕೌನ್ಸಿಲ್ ಸದಸ್ಯರು ಮತ್ತು ಬೆಳಗಾವಿಯ ಕಾಹೇರ ಫಿಜಿಯೊಥೆರಪಿ ಕಾಲೇಜಿನ ಡೀನ್ ಡಾ.ವಿಜಯ್ ಕಾಗೆ ಅಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ವಹಿಸಲಿದ್ದಾರೆ.

ಗೌರವ ಅತಿಥಿಗಳಾಗಿ ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ ಮತ್ತು ಎಸ್.ಎನ್.ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಆಗಮಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಜೆ.ಜೆ.ಎಂ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ

# ಕುಡಿಯುವ ನೀರಿನ ಕಾಮಗಾರಿಯಲ್ಲಿ ನಿರ್ಲಕ್ಷ್ಯ ಬೇಡ : ನಾಗೇಂದ್ರ ಪ್ರಸಾದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ಜಿಲ್ಲೆಯಲ್ಲಿ ಜಲಜೀವನ ಮಿಷನ್ ಹಾಗೂ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಮೂಲಕ ಜನರಿಗೆ ಸಮರ್ಪಕ ನೀರು ಪೂರೈಸುವ ಕಾರ್ಯವಾಗಬೇಕೆಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಿರ್ದೇಶಕರು ಹಾಗೂ ಪದನಿಮಿತ್ಯ ಸರಕಾರದ ಜಂಟಿ ಕಾರ್ಯದರ್ಶಿ ನಾಗೇಂದ್ರ ಪ್ರಸಾದ ಹೇಳಿದರು.

> “ ಜಿಲ್ಲೆಗೆ ಭೇಟಿ ನೀಡಿದ ಜಲಜೀವನ ಮಿಷನ್ ಯೋಜನೆಯ ತನಿಖಾ ತಂಡ ಪದನಿಮಿತ್ತ ಸರಕಾರದ ಜಂಟೀ ಕಾರ್ಯದರ್ಶಿ ನಾಗೇಂದ್ರ ಪ್ರಸಾದ ನೇತೃತ್ವದಲ್ಲಿ ಹೆಗ್ಗೂರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಮೆಚ್ಚುಗೆ ವ್ಯಕ್ತಪಡಿಸಿತು. ನಂತರ ಅನಗವಾಡಿಯಿಂದ ಬೀಳಗಿ ಕ್ರಾಸ್ ಸ್ಕೀಮ್–2 ಡಿಬಿಓಟಿ ಯೋಜನೆಯ ಪೈಪ್‌ಲೈನ್ ಕಾಮಗಾರಿ, ಮನ್ನಿಕೇರಿ ಗ್ರಾಮದಲ್ಲಿ ಸ್ಕೀಮ್–2 ಡಬ್ಲೂಟಿಪಿ ಕಾಮಗಾರಿ, ಅಮಲಝುರಿ, ಹಲಗಲಿಯ ಜಲ ಜೀವನ ಮೀಷನ್ ಕಾಮಗಾರಿಗಳನ್ನು ವೀಕ್ಷಣೆ ಮಾಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶನಿವಾರ ಜರುಗಿದ ಜಲಜೀವನ ಮಿಷನ್ ಹಾಗೂ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ ಗ್ರಾಮೀಣ ಕುಟುಂಬಗಳಿಗೆ ಕೃಷ್ಣಾ ನದಿಯಿಂದ ಶುದ್ದೀಕರಿಸಿದ ಶುದ್ದ ಕುಡಿಯುವ ನೀರನ್ನು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಮುಧೋಳ ತಾಲೂಕಿನ ಹಲಗಲಿ ಗ್ರಾಮ ಜಲ ಜೀವನ ಮೀಷನ್ ಯೋಜನೆಯನ್ನು ಯಶಸ್ವಿಯಾಗಿ ನಿರ್ವಹಿಸುತ್ತಿದೆ. ಈ ಮಾದರಿಯಲ್ಲಿ ಜಿಲ್ಲೆಯ ಆಯ್ದ 55 ಗ್ರಾಮಗಳನ್ನು ಗುರಿತಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಸರಕಾರ ಕುಡಿಯುವ ನೀರಿನ ಯೋಜನೆಗಳಿಗೆ ಸಾಕಷ್ಟು ಹಣ ಖರ್ಚು ಮಾಡುತ್ತಿದೆ. ಈ ಹಣವನ್ನು ನಿಗದಿತ ಅವಧಿಯಲ್ಲಿ ಖರ್ಚು ಮಾಡಿ ಜನರಿಗೆ ನೀರು ಪೂರೈಸುವಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಬಗ್ಗೆ ಪ್ರತಿ 15 ದಿನಗಳಿಗೊಮ್ಮೆ ವೀಕ್ಷಣೆ ಮಾಡಿ ಕಾಮಗಾರಿ ಗುಣಮಟ್ಟದಿಂದ ಕೂಡಿರುವ ಬಗ್ಗೆ ಗಮನಹರಿಸಬೇಕು. ಆ ಬಗ್ಗೆ ಛಾಯಾಚಿತ್ರದೊಂದಿಗೆ ಮಾಹಿತಿ ನೀಡಲು ತಿಳಿಸಿದರು. ಅರಣ್ಯ, ಲೋಕೋಪಯೋಗಿ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಂದ ಬೇಗನೆ ಎನ್.ಓ.ಸಿ ಪಡೆದುಕೊಂಡು ಕಾಮಗಾರಿ ಪೂರ್ಣಗೊಳಿಸಲು ತಿಳಿಸಿದರು.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳು ಜಲ ಜೀವನ ಮಿಷನ್ ಪೂರ್ಣಗೊಂಡ ಕಾಮಗಾರಿಗಳನ್ನು ಹಸ್ತಾಂತರಿಸಿ ಕಾರ್ಯಾಚರಣೆ ನಿರ್ವಹಣೆ ನೀತಿ ಅಳವಡಿಸಿಕೊಳ್ಳುವ ಮೂಲಕ ಮುಂದಿನ ರೂಪುರೇಷೆಗಳಲ್ಲಿ ಒಂದಾದ 24/7 ಅನುಷ್ಠಾನಕ್ಕೆ ಮುಂದಾಗಲು ನಾಗೇಂದ್ರಪ್ರಸಾದ ಕರೆ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮುಖ್ಯ ಅಭಿಯಂತರ ಏಜಾಜ್ ಹುಸೇನ್, ಉಪಕಾರ್ಯದರ್ಶಿ ಜಾಫರ್ ಶರೀಫ್ ಸುತಾರ, ಬೆಳಗಾವಿಯ ಅಧೀಕ್ಷಕ ಅಭಿಯಂತರ ಬಸವರಾಜ ಕುಂಬಾರ, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಸಹಾಯಕ ನಿರ್ದೇಶಕ ಕಾಂಬಳೆ, ಗ್ರಾಮೀಣ ಮತ್ತು ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಂಗನವಾಡಿ ಹುದ್ದೆಗಳ ಆಯ್ಕೆ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ಜಿಲ್ಲೆಯ ಬೀಳಗಿ, ಬಾದಾಮಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ 93 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 428 ಸಹಾಯಕಿಯರ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಜಿಲ್ಲೆಯಲ್ಲಿ 106 ಅಂಗನವಾಡಿ ಕಾರ್ಯಕರ್ತೆ ಹಾಗೂ 471 ಸಹಾಯಕಿಯರ ಹುದ್ದೆಗಳಿಗೆ 2024 ಅಕ್ಟೋಬರನಲ್ಲಿ ನೇಮಕಾತಿ ಅಧಿಸೂಚನೆ ಜಾರಿಗೊಂಡು, ಅರ್ಜಿ ಆಹ್ವಾನಿಸಲಾಗಿತ್ತು. 2025 ರ ಜೂನ್ 27 ರಂದು ನಡೆದ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ 93 ಕಾರ್ಯಕರ್ತೆಯರು ಮತ್ತು 428 ಸಹಾಯಕಿಯರನ್ನು ಅಂತಿಮವಾಗಿ ಆಯ್ಕೆ ಮಾಡಲಾಗಿದೆ. ಅಂತಿಮ ಆಯ್ಕೆ ಪಟ್ಟಿಯನ್ನು ಬಾಗಲಕೋಟೆ ಉಪನಿರ್ದೇಶಕರ ಕಛೇರಿ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ನೇಮಕಾತಿ ಆದೇಶಗಳನ್ನು ಅರ್ಜಿದಾರರ ವಿಳಾಸಕ್ಕೆ ಅಂಚೆ ಮೂಲಕ ಕಳುಹಿಸಲಾಗುತ್ತಿದ್ದು, ಅಭ್ಯರ್ಥಿಗಳು ಆದೇಶ ತಲುಪಿದ 10 ದಿನಗಳೊಳಗೆ ಮೂಲ ದಾಖಲೆಗಳೊಂದಿಗೆ ಹಾಜರಾಗಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಬಾಗಲಕೋಟೆಯಲ್ಲಿ ತಾಂಡಾ ಅಭಿವೃದ್ಧಿ ನಿಗಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ವಿಜಯಪುರದಲ್ಲಿ ಕಾರ್‍ಯನಿರ್ವಹಿಸುತ್ತಿದ್ದ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವಲಯ ಕಚೇರಿ ಈಗ ಬಾಗಲಕೋಟೆಯಲ್ಲಿ ಕಾರ್ಯನಿರ್ವಹಿಸುತ್ತಿದೆ.

2025–26ನೇ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಲಂಬಾಣಿ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ಕಾರ್ಯಗತಗೊಳಿಸಲು ಅಕ್ಟೋಬರ್ 13, 2023 ರಿಂದ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವಲಯ ಕಛೇರಿ ವಿಜಯಪುರ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿತ್ತು. ಈಗ ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರ ಈ ನಿಗಮವನ್ನು ಬಾಗಲಕೋಟೆ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸಲು ಆದೇಶಿಸಿರುತ್ತದೆ. ಬಾಗಲಕೋಟೆ ಜಿಲ್ಲೆಯ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಜೂನ್ 9 ರಿಂದ ಈ ನಿಗಮ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಕೊಠಡಿ ಸಂಖ್ಯೆ 201, ಜಿಲ್ಲಾ ಆಡಳಿತ ಭವನ, ನವನಗರ ಬಾಗಲಕೋಟೆಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸಿ ಮಂದಿರ ಕಾಮಗಾರಿಗೆ ಶಾಸಕ ಕಾಶಪ್ಪನವರ ಭೂಮಿಪೂಜ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–ಜಿಲ್ಲೆಯ ಇಳಕಲ್ ತಾಲೂಕಿನ ಗುಗ್ಗಲಮರಿ ಗ್ರಾಮದ ಹತ್ತಿರ ಕೈಗಾರಿಕೆ ಪ್ರದೇಶದ ಬಳಿ ನೂತನ ಪ್ರವಾಸಿ ಮಂದಿರ ನಿರ್ಮಾಣಕ್ಕೆ ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ಶನಿವಾರ ಭೂಮಿ ಪೂಜೆ ನೆರವೇರಿಸಿದರು.

3 ಕೋಟಿ ರೂ.ವೆಚ್ಚದಲ್ಲಿ ನಿರ್ಮಾಣವಾಗಲಿರುವ ಪ್ರವಾಸಿ ಮಂದಿರದ ಕಾಮಗಾರಿ ನಿಗದಿತ ಸಮಯಕ್ಕೆ ಪೂರ್ಣಗೊಳ್ಳಬೇಕು. ಗುಣಮಟ್ಟದ ಕಾಮಗಾರಿ ಮಾಡಬೇಕೆಂದು ಶಾಸಕ ಕಾಶಪ್ಪನವರ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಕಾಂಗ್ರೆಸ್ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತ ನರ್ಸಿಂಗ್ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.5–2025–26ನೇ ಸಾಲಿಗೆ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಬಿಎಸ್‌ಸಿ ನರ್ಸಿಂಗ್ ಮತ್ತು ಜಿಎನ್‌ಎಂ ಪ್ರೋತ್ಸಾಹಧನ ಹಾಗೂ ಪಿಯುಸಿ ಮತ್ತು ಡಿಪ್ಲೋಮಾ, ಐಟಿಐ ಪದವಿ ಮತ್ತು ಸ್ನಾತ–ಕೋತ್ತರ ಕೋರ್ಸ್‌ಗಳಿಗೆ ಶುಲ್ಕ ಮರುಪಾವತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ಸೆಪ್ಟಂಬರ್ 30 ಕೊನೆಯ ದಿನವಾಗಿದ್ದು, ಅಭ್ಯರ್ಥಿಗಳು ಕರ್ನಾಟಕದ ನಿವಾಸಿಯಾಗಿರಬೇಕು. ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಅಥವಾ ಪಾರ್ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ಆಯ್ಕೆ ಮೆರಿಟ್ ಆಧಾರಿತವಾಗಿರುತ್ತದೆ. ವಿಶ್ವದ ಟಾಪ್ 500 ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪಿಜಿ ವ್ಯಾಸಂಗಕ್ಕಾಗಿ ಹಣಕಾಸಿನ ನೆರವು ಕೂಡ ಲಭ್ಯವಿದ್ದು, ಈ ಯೋಜನೆಗೆ ಅರ್ಜಿ ಸಲ್ಲಿಸಲು ಅಭ್ಯರ್ಥಿಯ ಗರಿಷ್ಠ ವಯಸ್ಸು 38 ಮೀರಿರಬಾರದು ವಾರ್ಷಿಕ ಆದಾಯ ರೂ.15 ಲಕ್ಷ ಮೀರಿರಬಾರದು.

ಅರ್ಜಿಗಳನ್ನು https://sevasindhu.karnataka.gov.in ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ https://dom.karnataka.gov.in ಅಥವಾ ಬಾಗಲಕೋಟೆ ಹಾಗೂ ತಾಲೂಕುಗಳ ಅಲ್ಪಸಂಖ್ಯಾತರ ಇಲಾಖೆಯನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ನಗರಸಭೆ ನೂತನ ಆಯುಕ್ತರಾಗಿ ಸುರೇಶ ಬಬಲದ್ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರಸಭೆಯ ನೂತನ ಆಯುಕ್ತರಾಗಿ ಸುರೇಶ್ ಬಬಲಾದ (ಚಲವಾದಿ) ಅವರನ್ನು ಆಯ್ಕೆ ಮಾಡಿ ಆಡಿಸಲಾಗಿದೆ. ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಸಿದ್ದಣ್ಣ ಮ್ಯಾಗೇರಿ, ಪರಶುರಾಮ ನಗರಸಭೆ ಸದಸ್ಯರು, ಗವಿಸಿದ್ದಪ್ಪ ಬೆಲ್ಲದ, ಶ್ರೀಮತಿ ರಾಧ ಕನಕಮೂರ್ತಿ ಚಲವಾದಿ, ಕೊಪ್ಪಳ ಬಿಜೆಪಿ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅನಿಲ್ ಬ್ಯಾಗಾರ, ಸಮಾಜದ ಹಿರಿಯ ಮುಖಂಡರು ರಮೇಶ್ ಯಲಬುರ್ಗಾ, ಲಕ್ಷ್ಮಣಕಾಳಿ, ಹನುಮಂತ ತುಪ್ಪದ, ದೇವಪ್ಪ ಬೆಲ್ಲದ, ವಿಜಯ್ ಜಕಲಿ, ಕನಕಮೂರ್ತಿ ಚಲವಾದಿ, ಪಾಲ್ಗೊಂಡಿದ್ದರು.

### ಶಾಲಾ ಸಂಸತ್ತು ಉದ್ಘಾಟನಾ ಸಮಾರಂಭದಲ್ಲಿ ಪೂಜ್ಯ ಸಿದ್ದರಾಮ ಶ್ರೀ ಸಲಹೆ

# ಶಿಕ್ಷಣದ ಜೊತೆ ಉತ್ತಮ ಸಂಸ್ಕಾರ ಕಲಿಸಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಮಕ್ಕಳಿಗೆ ಕೇವಲ ಗುಣಮಟ್ಟದ ಶಿಕ್ಷಣ ಕೊಟ್ಟ–ರೆ ಸಾಲದು ಇದರ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಕಲಿಸುವ ಅಗತ್ಯವಿದೆ ಸಂಸ್ಕಾರವಿಲ್ಲದ ಶಿಕ್ಷಣದಿಂದ ಸಮಾಜಕ್ಕೆ ಯಾವ ಪ್ರಯೋಜನವೂ ಇಲ್ಲ ಎಂದು ರನ್ನ ಬೆಳಗಲಿಯ ಖ್ಯಾತ ಪ್ರವಚನಕಾರ ಪೂಜ್ಯ ಸಿದ್ದರಾಮ ಶಿವಯೋಗಿಗಳು ಹೇಳಿದರು. ಶನಿವಾರ ಪಟ್ಟಣದ ಬಾಲ ಭಾರತಿ ವಿದ್ಯಾ ಮಂದಿರ ಪ್ರಾಥಮಿಕ ಶಾಲೆ ಹಾಗೂ ಶ್ರೀ ಲಕ್ಷ್ಮಣಸಿಂಗ್ ಉಮರಸಿಂಗ್ ಹಜೇರಿ ವಿದ್ಯಾಭಾರತಿ ಪ್ರೌಢಶಾಲೆ ಇದರ 2025–26 ನೇ ಸಾಲಿನ ಶಾಲಾ ಸಂಸತ್ತು ಹಾಗೂ ವಾರ್ಷಿಕ ಕ್ರೀಡಾಕೂಟ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ವಿದ್ಯಾರ್ಥಿಗಳು ಬದುಕಿಗೆ ಶ್ರೇಷ್ಠ ಗುರಿಯನ್ನು ಇಟ್ಟುಕೊಂಡು ಅದಕ್ಕಾಗಿ ನಿರಂತರ ಪರಿಶ್ರಮ ಪಡಬೇಕು. ಒಳ್ಳೆಯ ಸಂಸ್ಕಾರಗಳನ್ನು ಪಡೆದುಕೊಂಡು ಹೆತ್ತವರ ಪಾಲಿಗೆ ಅನುಗ್ರಹವಾಗಬೇಕು, ನಿಮ್ಮ ಜೀವನದಲ್ಲಿ ತಾಯಿಯ ಸ್ಥಾನ ಅತ್ಯಂತ ಪವಿತ್ರವಾದದ್ದು ಅವಳ ಪಾದದಡಿಯಲ್ಲಿ ಸ್ವರ್ಗ ವಿದೆ. ಸದಾ ಅವಳ ಸಂಪ್ರೀತಿಗೆ ಪಾತ್ರರಾಗಿ, ಅವಳನ್ನು ಗೌರವ ಭಾವದಿಂದ ಕಾಣಿ ಜೀವನದಲ್ಲಿ ಒಳ್ಳೆಯ ಸಾಧನೆಯನ್ನು ಮಾಡಿ ಹೆತ್ತವರ ಗುರುಗಳ ಕಲಿತ ಶಿಕ್ಷಣ ಸಂಸ್ಥೆಯ ಕೀರ್ತಿಯನ್ನು ತರಲು ಪ್ರಯತ್ನಿಸಿ ಎಂದರು. ಸಮಾರಂಭವನ್ನು ಉದ್ಘಾಟಿಸಿ ಹಿರಿಯ ಪತ್ರಕರ್ತ ಜಿ.ಟಿ.ಘೋರ್ಪಡೆ ಮಾತನಾಡಿ ಬಾಲ ಭಾರತಿ ಶಿಕ್ಷಣ ಸಂಸ್ಥೆ ಮಕ್ಕಳಿಗೆ ಉತ್ತಮ ಸಂಸ್ಕಾರ, ಶಿಸ್ತು, ಭಾರತೀಯ ಸಂಸ್ಕೃತಿಯ ಪರಿಚಯ ಹಾಗೂ ದೇಶಾಭಿಮಾನವನ್ನು ಬೆಳೆಸುವ ಪಟ್ಟಣದ ಒಂದು ಒಳ್ಳೆಯ ಸಂಸ್ಥೆಯಾಗಿದೆ ಇಲ್ಲಿ ಶಿಕ್ಷಣ ಮುಗಿಸಿದ ಹಲವಾರು ವಿದ್ಯಾರ್ಥಿಗಳು ಇಂದು ಉನ್ನತ ಹುದ್ದೆಗಳಲ್ಲಿ ಇದ್ದಾರೆ. ಈ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯವರ ಸೇವಾ ಮನೋಭಾವ ಶ್ಲಾಘನೀಯವಾಗಿದೆ ಎಂದರು. ಸಿಆರ್‌ಸಿ ರಾಜು ವಿಜಾಪುರ ಮಾತನಾಡಿದರು. ಶಿಕ್ಷಕ ರಮೇಶ ಕುಲಕರ್ಣಿ ಪ್ರಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಚಿದಂಬರ ಕರಮರಕರ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಅಮರಸಿಂಗ್ (ಬಾಬು)ಹಜೇರಿ, ನಿವೃತ್ತ ಶಿಕ್ಷಕ ಸಿ.ಎಂ. ಹಿರೇಮಠ, ಪತ್ರಕರ್ತರಾದ ಅಬ್ದುಲಗನಿ ಮಕಾಂದಾರ, ಸಂಜಯ ಸಿಂಗ್ ರಜಪೂತ, ಸಂಗನಗೌಡ ಗಬಸಾವಳಗಿ ಸಂಭಾಜಿರಾವ್ ವಾಡ್ಕರ್, ಶ್ಯಾಮ್ ಹಂಚಾಟೆ, ತಮ್ಮಣ್ಣ ದೇಶಪಾಂಡೆ, ಮಲ್ಲಿಕಾರ್ಜುನ್ ಹಿಪ್ಪರಗಿ, ಪ್ರಕಾಶ ಕಟ್ಟಿಮನಿ, ನೌಕರ ಸಂಘದ ಅಧ್ಯಕ್ಷ ವೆಂಕೋಬ ನಾಯ್ಕೋಡಿ, ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ಮಹೇಶ್ ಓದಿ, ಪ್ರೌಢಶಾಲೆ ಮುಖ್ಯ ಶಿಕ್ಷಕ ಪ್ರದೀಪ ಆರ್. ಗೊಂಡ, ಆಡಳಿತಾಧಿಕಾರಿ ಪ್ರದೀಪ ಸಿರಸಿ, ಮುಖ್ಯ ಗುರುಮಾತೆ ಸುಮಂಗಲಾ ಯಾಳವಾರ, ಶಿಕ್ಷಕರಾದ ಈರಣ್ಣ ಶರಣರ, ರೂಪಾ ನಾಗಾವಿ, ಶಶಿಕಲಾ ಕುಂಟೋಜಿ (ಕಂಪ್ಯೂಟರ್ ಶಿಕ್ಷಕಿ) ಶಿಕ್ಷಕ ವೃಂದ, ಮಕ್ಕಳ ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಗೃಹಲಕ್ಷ್ಮಿ ಸಂಘಗಳ ಮೂಲಕ ಮಹಿಳೆಯರಿಗೆ ಆರ್ಥಿಕ ಬಲ ತುಂಬಲು ಯೋಜನೆ:ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.05: ರಾಜ್ಯದಲ್ಲಿ 30 ರಿಂದ 40 ಲಕ್ಷ ಗೃಹಲಕ್ಷ್ಮಿ ಸಂಘಗಳನ್ನು ರಚಿಸುವ ಯೋಜನೆಯಿದ್ದು, ಈ ಮೂಲಕ ಯಜಮಾನಿಯರಿಗೆ ಆರ್ಥಿಕವಾಗಿ ಬಲ ತುಂಬಲು ಕ್ರಮ ಕೈಗೊಳ್ಳಲಾಗುವುದು ಎಂದು ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಅವರು ಶನಿವಾರ ಬೀದರ್ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕಲಬುರಗಿ ವಿಭಾಗ ಮಟ್ಟದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎರಡನೇ ದಿನದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಈ ವರ್ಷ ಅಂಗನವಾಡಿ ಆರಂಭವಾಗಿ 50 ವರ್ಷ ತುಂಬುತ್ತಿದ್ದು, ಅಕ್ಟೋಬರನಲ್ಲಿ ಸುವರ್ಣ ಮಹೋತ್ಸವ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಗೃಹಲಕ್ಷ್ಮಿ ಸಂಘಗಳ ಘೋಷಣೆ ಮಾಡಿ ಇನ್ನಷ್ಟು ಬಲ ತುಂಬಲಾಗುವುದು. ಇಲಾಖೆಯಲ್ಲಿ ಸಾಕಷ್ಟು ಯೋಜನೆಗಳಿದ್ದು, ಜನರಿಗೆ ತಿಳಿವಳಿಕೆ ಮೂಡಿಸಲು ಇನ್ನೂ ಹೆಚ್ಚಿನ ಕ್ರಮ ಕೈಗೊಳ್ಳಬೇಕು. ನಮ್ಮ ಇಲಾಖೆ ಜನರಿಗೆ, ಜನರ ಬದುಕಿಗೆ ಹತ್ತಿರವಾದ ಇಲಾಖೆ, ಅಧಿಕಾರಿಗಳು ಹೆಚ್ಚು ಕಾಳಜಿಯಿಂದ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಬಾಲ್ಯ ವಿವಾಹವನ್ನು ತಡೆಯಲು ಅಧಿಕಾರಿಗಳು ವಿಶೇಷ ಕ್ರಮ ಕೈಗೊಳ್ಳಬೇಕು, ಸ್ವತಃ ಕರೆ ಮಾಡಿ ತನ್ನ ವಿವಾಹವನ್ನು ತಪ್ಪಿಸುವಂತೆ ಅಧಿಕಾರಿಗಳನ್ನು ಕೋರಿದ್ದ ಜಿಲ್ಲೆಯ ಬಾಲಕಿಯನ್ನು ಕರೆಸಿ ಸನ್ಮಾನಿಸಬೇಕು, ಜೊತೆಗೆ ಆರ್ಥಿಕ ಸಹಾಯ ಮಾಡಬೇಕು. ಇದರಿಂದ ಬೇರೆಯವರಿಗೂ ಕೂಡ ಸಹಾಯವಾಗುತ್ತದೆ ಎಂದ ಸಚಿವರು, ಎಲ್ಲಾ ಇಲಾಖೆಗಳು ಕೈಜೋಡಿಸಿದಾಗ ಅನಿಷ್ಟ ಪದ್ಧತಿಗಳನ್ನು ತಡೆಯಲು ಸಾಧ್ಯ. ಜಾಗೃತಿ ಮೂಡಿಸುವುದರ ಜೊತೆಗೆ ಕಠಿಣ ಕ್ರಮದ ಮೂಲಕ ಭಯ ಹುಟ್ಟಿಸಿದರೆ ಅನಿಷ್ಟ ಪದ್ಧತಿ ನಿಲ್ಲಲು ಸಾಧ್ಯ ಎಂದು ತಿಳಿಸಿದರು.

ಕೇಂದ್ರ ಹಾಗೂ ರಾಜ್ಯದಿಂದ ಕಾಲಕಾಲಕ್ಕೆ ನೀಡಲಾಗುವ ಗುರಿಯನ್ನು ತಲುಪಲೇಬೇಕು. ಇಲಾಖೆ ಯೋಜನೆ ಅನುಷಾ??ನದಲ್ಲಿ ಹಿಂದೆ ಬಿದ್ದಲ್ಲಿ ಅಧಿಕಾರಿ, ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಲಬುರಗಿ ವಿಭಾಗದಲ್ಲಿ ಗೃಹಲಕ್ಷ್ಮಿ ಯೋಜನೆಗೆ 10 ಸಾವಿರ ಕೋಟಿ: ಈ ಭಾಗಕ್ಕೆ ಗೃಹ ಲಕ್ಷ್ಮೀ ಯೋಜನೆ ಮೂಲಕ 10 ಸಾವಿರ ಕೋಟಿ ರೂಪಾಯಿ ನೀಡಲಾಗಿದೆ. ಯಾರಿಗೂ ಯೋಜನೆ ಕೈ ತಪ್ಪದಂತೆ ಕ್ರಮ ಕೈಗೊಳ್ಳಬೇಕು. ಗೃಹಲಕ್ಷ್ಮೀ ಹಣದಿಂದ ಮಹಿಳೆಯರು ಸಾಕಷ್ಟು ಕಾರ್ಯಕ್ರಮ ಮಾಡುತ್ತಿದ್ದಾರೆ. ಅವುಗಳನ್ನು ಪ್ರಚಾರ ಮಾಡುವುದರಿಂದ ಇತರರಿಗೂ ಲಾಭವಾಗುತ್ತದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅಧಿಕಾರಿಗಳಿಗೆ ಸೂಚಿಸಿದರು.

ಗೃಹ ಲಕ್ಷ್ಮೀ ಸಂಘಗಳ ಮೂಲಕ ಇನ್ನೂ ಹೆಚ್ಚಿನ ಪ್ರಯೋಜನವಾಗುವಂತೆ ಹೇಗೆ ಮಾಡಬಹುದು ಎನ್ನುವ ಚಿಂತನೆ ಮಾಡುತ್ತಿದ್ದೇವೆ ಎಂದರು.

ಅಕ್ಕ ಪಡೆಗೆ ಸಚಿವರ ಶ್ಲಾಘನೆ: ಬೀದರ್ ಜಿಲ್ಲೆಯಲ್ಲಿ 10 ಜನ ಮಹಿಳಾ ಪೊಲೀಸ್ ತಂಡದಿಂದ ಅಕ್ಕ ಪಡೆ ರಚಿಸಿ ಶಾಲಾ–ಕಾಲೇಜು, ಗಾರ್ಡನ್, ಹಾಸ್ಟೆಲ್ ಮೊದಲಾದ ಕಡೆ ನಿರಂತರ ನಿಗಾ ವಹಿಸುವ ಮೂಲಕ ಹೆಣ್ಣು ಮಕ್ಕಳಿಗೆ ವಿಶೇಷ ರಕ್ಷಣೆ ನೀಡುತ್ತಿರುವ ಬಗ್ಗೆ ಮಾಹಿತಿ ಪಡೆದ ಸಚಿವರು, ಇದೇ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅಂಗನವಾಡಿ ಕಟ್ಟಡಗಳ ದುರಸ್ತಿಗೆ ಹೆಚ್ಚಿನ ಆದ್ಯತೆ ನೀಡಬೇಕು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಅಂಗನವಾಡಿ ಕೇಂದ್ರಗಳಿಗೆ ಆಗಾಗ ಭೇಟಿ ನೀಡುತ್ತಿರಬೇಕು. ಎಲ್ಲಾ ಇಲಾಖೆಯ ಅಧಿಕಾರಿಗಳು ಸಾಮಾಜಿಕ ಜವಾಬ್ದಾರಿಯಿಂದ ಕೆಲಸ ಮಾಡಬೇಕು, ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು. ಆಗ ಮಾತ್ರ ಸರ್ಕಾರಕ್ಕೂ ಒಳ್ಳೆ ಹೆಸರು ಬರುತ್ತದೆ. ಸಮಾಜಕ್ಕೂ ಸಹಾಯವಾಗುತ್ತದೆ.

ಇಲಾಖೆಯಲ್ಲಿ ಸಾಕಷ್ಟು ಯೋಜನೆಗಳಿವೆ. ಅವುಗಳ ಕುರಿತು ಜನರಿಗೆ ಸರಿಯಾದ ಅರಿವಿಲ್ಲ. ಯೋಜನೆಗಳನ್ನು ಜನರಿಗೆ ತಲುಪಿಸಬೇಕು. ಮಹಿಳೆಯರಿಗೆ ಸಹಾಯ ಮಾಡಲು ಬೇಕಾದಷ್ಟು ಅವಕಾಶಗಳಿವೆ. ಈ ಮೂಲಕ ಹೆಚ್ಚು ಹೆಚ್ಚು ಜನರನ್ನು ತಲುಪಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಇಲಾಖೆಯ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮ, ಜಿಲ್ಲಾ ಪಂಚಾಯತ್ ಸಿಇಒ ಗಿರೀಶ್ ಬಡೋಲೆ, ಜಿಲ್ಲಾ ಪೊಲೀಸ್ ವರಿಷಾ??ಧಿಕಾರಿ ಪ್ರದೀಪ್ ಗುಂಟಿ, ಇಲಾಖೆಯ ನಿರ್ದೇಶಕ ರಾಘವೇಂದ್ರ, ಜಂಟಿ ಕಾರ್ಯದರ್ಶಿ ಹಾಗೂ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ಸೇರಿದಂತೆ ಇಲಾಖೆಯ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು, ಅಧಿಕಾರಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.




# ದೇಶದಲ್ಲಿ ಬಡವರ ಸಂಖ್ಯೆ ಹೆಚ್ಚಳ ಕಳವಳಕಾರಿ:ಗಡ್ಕರಿ

ನಾಗ್ಪುರ:ಜು.5:ದೇಶದಲ್ಲಿ ಬಡವರ ಸಂಖ್ಯೆ ಹೆಚ್ಚಾಗುತ್ತಿರುವ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಸಂಪತ್ತು ಕೆಲವೇ ಕೆಲವು ಶ್ರೀಮಂತರ ಕೈಯಲ್ಲಿ ಕೇಂದ್ರೀಕೃತವಾಗುತ್ತಿದೆ ಎಂದು ಶನಿವಾರ ಹೇಳಿದ್ದಾರೆ.

ಇಂದು ನಾಗ್ಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಸಂಪತ್ತಿನ ವಿಕೇಂದ್ರೀಕರಣದ ಅವಶ್ಯಕತೆಯಿದೆ ಎಂದು ಗಡ್ಕರಿ ಹೇಳಿದ್ದಾರೆ. ಇದೇ ವೇಳೆ ಅವರು ಕೃಷಿ, ಉತ್ಪಾದನೆ, ತೆರಿಗೆ ಮತ್ತು ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿದರು.

# ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿನ 5000 ಕೋಟಿ ರೂ.ಗಳ ಕ್ರಿಯಾ ಯೋಜನೆ: ರಾಜ್ಯಪಾಲರ ಅನುಮೋದನೆಗೆ ಸಲ್ಲಿಕೆ



ಕಲಬುರಗಿ:ಜು.5:ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಕಳೆದೊಂದು ವರ್ಷದಿಂದ ಕೈಗೆತ್ತಿಕೊಂಡಿರುವ ಶಿಕ್ಷಣ, ಆರೋಗ್ಯ, ಉದ್ಯೋಗ, ಕೌಶಲ್ಯ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಹಲವು ರಂಗದಲ್ಲಿ ಕೈಗೆತ್ತಕೊಂಡಿರುವ ವಿನೂತನ ಯೋಜನೆಗಳ ಕುರಿತಂತೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಹಾಗೂ ಕ್ಷೇತ್ರದ ಶಾಸಕ ಡಾ. ಅಜಯ್ ಧರ್ಮಸಿಂಗ್ ಅವರು ತಿಳಿಸಿದ್ದಾರೆ. ಮಂಡಳಿ 2025–2026ನೇ ಸಾಲಿನ 5 ಸಾವಿರ ಕೋಟಿ ರೂಗಳ ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ಕೋರಿ ರಾಜ್ಯ ಯೋಜನಾ ಖಾತೆ ಸಚಿವ ಡಿ. ಸುಧಾಕರ್ ಜೊತೆ–ಗೂಡಿಕೊಂಡು ಪ್ರಸ್ತಾವನೆ ಸಲ್ಲಿಸಿದ ಸಂದರ್ಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರಿಗೆ ಮಂಡಳಿ ಹಲವು ರಂಗಗಳಲ್ಲಿ ಕೈಗೆತ್ತಿಕೊಂಡಿರುವ ನೂತನ ಯೋಜನೆಗಳ ಬಗ್ಗೆ ವಿವರಿಸಲಾಗಿದೆ ಎಂದು ಅವರು ಹೇಳಿದ್ದಾರೆ. ರಾಜ್ಯಪಾಲರು ರಾಜ್ಯದ ವಿವಿಗಳ ಕುಲಾಧಿಪತಿಗಳು, ಹೀಗಾಗಿ ಕಲ್ಯಾಣ ಕರ್ಟಾಕದಲ್ಲಿ ಬರುವ ಉನ್ನತ ಶಿಕ್ಷಣ ಸಂಸ್ಥೆಗಳಾದ ವಿಶ್ವ ವಿದ್ಯಾಲಯಗಳಿಗೂ ಮಂಡಳಿಯ ಅನುದಾನದ ಹಂಚಿಕೆಯಲ್ಲಿ ಪರಿಗಣಿಸುವಂತೆ ಅಮೂಲ್ಯ ಸಲಹೆ ನೀಡಿದ್ದಾರೆ. ಕಲ್ಯಾಣ ನಾಡಿನ 7 ಜಿಲ್ಲೆಗಳಲ್ಲಿ ಶಿಕ್ಷಣ, ಆರೋಗ್ಯ ರಂಗದಲ್ಲಿನ ಯೋಜನೆಗಳನ್ನು ರಾಜ್ಯಪಾಲರು ಬಹುವಾಗಿ ಮೆಚ್ಚಿಕೊಂಡಿದ್ದಾರೆ. ಉನ್ನತ ಶಿಕ್ಷಣ ರಂಗದ ಕೇಂದ್ರವಾದ ವಿಶ್ವ ವಿದ್ಯಾಲಯಗಳಿಗೂ ಅನುದಾನ ನೀಡುವಲ್ಲಿ ಪರಿಗಣನೆಗೆ ತೆಗೆದುಕೊಳ್ಳುವಂತೆ ರಾಜ್ಯಪಾಲರು ಸಲಹೆ ನೀಡಿದ್ದಾರೆಂದು ಅವರು ತಿಳಿಸಿದ್ದಾರೆ. ಡಾ.ನಂಜುಂಡಪ್ಪ ವರದಿಯನ್ವಯವೇ ಸಿಡಿಐ ಸೂಚ್ಯಂಕ ಗುರುತಿಸಿ ಯೋಜನೆ ರೂಪಿಸಬೇಕಾಗಿದೆ. ಮೈಕ್ರೋ, ಮ್ಯಾಕ್ರೋ ಯೋಜನೆಯಡಿಯಲ್ಲಿನ ಅನುದಾನ ಹಂಚಿಕೆಯ ವಿವರಗಳಿರುವ ಕ್ರಿಯಾಯೋಜನೆ ಪ್ರಸ್ತಾವನೆ ಸಿದ್ಧಪಡಿಸಿ ರಾಜ್ಯಪಾಲರಿಗೆ ಸಲ್ಲಿಸಲಾಗಿದ್ದು ಅನುಮೋದನೆಗೆ ಕೋರಲಾಗಿದೆ. ಮಾತುಕತೆ ಸಂದರ್ಭದಲ್ಲಿ ರಾಜ್ಯಪಾಲರು ಮಂಡಳಿಯ ಕಾರ್ಯವೈಖರಿಯ ಬಗ್ಗೆ ಮೆಚ್ಚುಗೆ ಸೂಚಿಸಿದ್ದಾರೆ ಎಂದು ಅವರು ಸಂತೋಷ ಹೊರಹಾಕಿದ್ದಾರೆ. ಕಳೆದ ಮೇ 10ರಂದು ಜರುಗಿದ ಮಂಡಳಿಯ ಸಭೆಯಲ್ಲಿನ ಚರ್ಚೆಗಳು, ನಿರ್ಣಯಗಳಂತೆ ಹಾಗೂ ಮಂಡಳಿಯ ನಿಯಮಗಲಂತೆ, 20252026ರ ಮ್ಯಾಕ್ರೋ, ವಿವೇಚನೆ ಅನುದಾನ, ಆಡಳಿತಾತ್ಮಕ ವೆಚ್ಚ ಸೇರಿದಂತೆ ಎಲ್ಲ ಹಂತಗಳಲ್ಲಿಯೂ ಅನುದಾನ ಹಂಚಿಕೆ ಮಾಡುವ ಕ್ರಿಯಾ ಯೋಜನೆ ರೂಪಿಸಲಾಗಿದೆ. ಜನಸಂಖ್ಯೆಗೆ ಅನುಗುಣವಾಗಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಮುಖ್ಯಮಂತ್ರಿಗಳು ಮಂಡಿಸಿರುವ ಆಯವ್ಯವಯದಲ್ಲಿನ ಮಿತಿಯಂತೆಯೇ 5 ಸಾವಿರ ಕೋಟಿ ರೂ.ಗಳಿಗಾಗಿ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, ಆರ್ಥಿಕ ಇಲಾಖೆ 5 ಸಾವಿರ ಕೋಟಿ ರೂ.ಗಳಿಗೆ ಕ್ರಿಯಾ ಯೋಜನೆ ತಯ್ಯಾರಿಸಲು ಅನುಮತಿ ನೀಡಿದೆ. ಅದರಂತೆಯೇ ಮಂಡಳಿಯ ಕ್ರಿಯಾ ಯೋಜನೆ ರಾಜ್ಯಪಾಲರಿಗೆ ಸಲ್ಲಿಸಿ ಅನುಮದೋನೆಗೆ ಕೋರಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

**ರಾಯಚೂರು ಮಹಾನಗರ ಪಾಲಿಕೆ**

E-mail:itstaff_ulb_raichura@yahoo.com Website:-www.raichurcity.gov.in

Phone No:08532-226768 Fax No:08532-226316

ಸಂ.ರಾಮಪ/ತಾಂತ್ರಿಕ/ಕಾ/ಮ.ಪಾ.ನಿ/67,68,69,73,,120,121/2025–26 ದಿನಾಂಕ: 04–07–2025.

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ 2.0 ಪದ್ಧತಿ ಅಡಿಯಲ್ಲಿ).**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗಿನ ಅನುದಾನದಲ್ಲಿ ಈ ಕೆಳಗೆ ತೋರಿಸಿದ ಇಂಡೆಂಟ್ ನಂಬರ ಕಾಮಗಾರಿಗಳಿಗೆ ಕೆ.ಪಿ.ಪಿ.ಪಿ 2.0 ಪದ್ಧತಿ ಅಡಿಯಲ್ಲಿ ಅಲ್ಪಾವಧಿ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಸದರಿ ಟೆಂಡರ್‌ನಲ್ಲಿ ಭಾಗವಹಿಸಲು ಇಚ್ಛಿಸುವ ಅರ್ಹ ಗುತ್ತಿಗೆದಾರರು WWW.KPPP.Karnataka.gov.in ವೆಬ್‌ಸೈಟ್ ಮೂಲಕ ಭಾಗವಹಿಸತಕ್ಕದ್ದು, ಹಾಗೂ ಹೆಚ್ಚಿನ ವಿವರಗಳಿಗಾಗಿ ನಗರಸಭೆಯ ವೆಬ್‌ಸೈಟ್ WWW. raichurcity. mrc.gov.in ರಲ್ಲಿ ಹೆಚ್ಚಿನ ಮಾಹಿತಿ ಪಡೆಯ ಬಹುದಾಗಿದೆ.

| ಕ್ರ. ಸಂ | ಅನುದಾನದ ವಿವರ | ಕಾಮಗಾರಿಗಳ ವಿವರ | ಇಂಡೆಂಟ್ ನಂಬರ |
|---|---|---|---|
| 1 | 2024–25 15ನೇ ಹಣಕಾಸು ನಿರ್ಬಂಧಿತ ಅನುದಾನ | Providing and Laying of 600mm MS Pipe Line at Hyderabad Road Opposite of BSNL Office in Raichur City. **Estimate Cost Rs.: 12,50,000/-** | DMA/2025-26/ WS/ WORK_ INDENT44409 |
| 2 | 2024–25 ಎಸ್.ಎಫ್.ಸಿ (ಕು.ನೀ) ಅನುದಾನ | Drilling of borewell and supplying of water to Dandu Village in yeramaras at ward no 33 in Raichur City. **Estimate Cost Rs.2,36,000/-** | DMA/2025-26/ WS/ WORK_ INDENT44412 |
| 3 | 2024–25 15ನೇ ಹಣಕಾಸು ಮುಕ್ತ ಅನುದಾನ | Improvements of Garden at Chankaya Puri Layout by providing Chainlink fencing, Walking Track and Highmast light at Ward No-21 in Raichur City Improvements of Garden at Panchamukhi Colony by providing Chainlink fencing, Walking Track and Highmast light at Ward No 21 in Raichur City. **Packege Amount Rs.15,00,000/-** | DMA/2025-26/ OW/ WORK_ INDENT44414 |
| 4 | | Improvements of the Municipal Public Cemetery near Adi Basaveshwara Colony including construction of a compound wall, borewell and Cistern in Ward No. 33 in Raichur City. **Estimate Cost Rs.15,00,000/-** | DMA/2025-26/ WS/ WORK_ INDENT44413 |
| 5 | ಕೆ.ಕೆ.ಆರ್.ಡಿ.ಬಿ ಅನುದಾನ | Construction of Anganwadi Building in Ward no 19 in Harjanwada-04 in Raichur City Corporation **Estimate Cost Rs.22,50,000/-** | DMA/2025-26/ BD/WORK_ INDENT 44304/CALL-2 |
| 6 | 2021–22 15ನೇ ಹಣಕಾಸು ಮುಕ್ತ ಅನುದಾನ | Drilling of Borewell & Installation of a Cistern at Near New Anaganwadi Center in Siyatalab Area at Ward No 31 in Raichur City **Estimate Cost Rs.2,00,000/-** | DMA/2025-26/ WS/ WORK_ INDENT44512 |

DIP/RCR/229/KSMCA/230/2025-26

ಸಹಿ/– ಕಾರ್ಯಪಾಲಕ ಅಭಿಯಂತರರು,
ಮಹಾನಗರ ಪಾಲಿಕೆ, ರಾಯಚೂರು.

ಕರ್ನಾಟಕ ಸರ್ಕಾರ

**ಪುರಸಭೆ ಕಾರ್ಯಾಲಯ ಗುರುಮಠಕಲ್**

ತಾ:ಗುರುಮಠಕಲ್, ಜಿ:ಯಾದಗಿರಿ, ಕರ್ನಾಟಕ ರಾಜ್ಯ,

Website: www.gurumitkaltown.mrc.gov.in E-mail: ka.gurumatkal.tmc@gmail.com

ದೂರವಾಣಿ : 08473–225024

ಕ್ರ.ಸಂ/ಪುಸಗು/ಇ–ಟೆಂಡರ್/2025–26 ದಿನಾಂಕ:04.07.2025

**–:: ಇ–ಪ್ರಕ್ಯೂರ್‌ಮೆಂಟ್ ಅಲ್ಪಾವಧಿ ಟೆಂಡರ್ ಪ್ರಕಟಣೆ :: –**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಯಾದಗಿರಿ ಜಿಲ್ಲೆಯ ಗುರುಮಠಕಲ್ ಪುರಸಭೆ ಮುಖ್ಯಾಧಿಕಾರಿಗಳು ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದೇಶ 1999–2000 ಪ್ರಕಾರ ಪಾರದರ್ಶಕತೆ ಆ್ಯಕ್ಟ್ 2000 ನಿಯಮದಂತೆ. ಸನ್ 2025–26 ನೇ ಸಾಲಿನ 15ನೇ ಹಣಕಾಸು ನಿರ್ಬಂಧಿತ ಅನುದಾನ (Tied Grants), ಮುಕ್ತ ನಿಧಿ (Untied Grant), ಮತ್ತು 2025–26 ನೇ ಸಾಲಿನ ಎಸ್.ಎಫ್.ಸಿ., ಮುಕ್ತ ನಿಧಿ (Untied Grant) ಯೋಜನೆಯ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಯೋಜನೆ ಅನುದಾನದಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಟೆಂಡರ್‌ಗಳನ್ನು ಅರ್ಹ ಗುತ್ತಿಗೆದಾರರು ಕೆ.ಡಬ್ಲ್ಯೂ. 1 ನಿಬಂಧನೆಗೊಳಪಟ್ಟಂತೆ ಇ–ಪ್ರಕ್ಯೂಮೆಂಟ ಪೋರ್ಟಲ್ ಮೂಲಕ https://kppp.karnataka.gov.in ಆಧಾರದ ಮೇಲೆ ಐಟಂವಾರು ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

01) ಟೆಂಡರಗಳ ಅರ್ಜಿ ಅಂತರಜಾಲದಲ್ಲಿ ಡೌನ್ಲೋಡ ಮಾಡುವ ಪ್ರಾರಂಭ ದಿನಾಂಕ: 04–07–2025 ರಿಂದ. 02) ಟೆಂಡರಗಳನ್ನು ಸಲ್ಲಿಸಲು ಕೊನೆಯ ದಿನಾಂಕ:19–07–2025 ರಂದು 17:30 ಗಂಟೆಗೆ. 03) ತಾಂತ್ರಿಕ ಮತ್ತು ಆರ್ಥಿಕ ಬಿಡ್ ತೆರೆಯುವ ದಿನಾಂಕ:21–07–2025 ರಂದು 11.00 ಘಂಟೆಯ ನಂತರ

**1) Indent No:** DMA/2025-26/WS/WORK_INDENT44379. **Details of work:** Drilling of Borewells Installation of Cistern and Pipeline work in 2 BCM hostels, Tmc office, Near Inidra Canteen, ward 03 and ward 05 of Gurumatkal Town (RESERVED FOR CAT I). **Approx. Est.Cost:** 9.45. **E.M.D:** 11820. **Class of contractor & Time Period:** KPWD, Civil, Class-IV & Above, 3 Month. **2) Indent No:** DMA/2025-26/WS/WORK_INDENT44380. **Details of work:** Grill work to Well in Ward 07 and Drilling of Borewells Installation of Cistern Pipeline work in ward 09, 14, and 21 of Gurumatkal town. **Approx. Est.Cost:** 7.07. **E.M.D:** 17687. **Class of contractor & Time Period:** KPWD, Civil, Class-IV & Above, 3 Month.3**) Indent No:** DMA/2025-26/WS/WORK_INDENT44385. **Details of work:** Construction of CC Drain in ward 01, 02, 04, 15 and 19 of Gurumatkal Town (RESERVED FOR CAT II). **Approx. Est.Cost:** 7.02. **E.M.D:** 8778. **Class of contractor & Time Period:** KPWD, Civil, Class-IV & Above, 3 Month. 4**)Indent No:** DMA/2025-26/RD/WORK_INDENT44387. **Details of work:** Construction of CC Roads in Ward 17, 18, 22, 23 and 08 of Gurumatkal Town. **Approx. Est.Cost:** 8.43. **E.M.D:** 21,078. **Class of contractor & Time Period:** KPWD, Civil, Class-IV & Above, 3 Month. 5**) Indent No:** DMA/2025-26/RD/WORK_INDENT44388. **Details of work:** Construction of Compound wall in ward 11 and CC Road in ward 06, 15 and 16 of Gurumatkal Town. **Approx. Est.Cost:** 7.56. **E.M.D:** 18,910. **Class of contractor & Time Period:** KPWD, Civil, Class-IV & Above, 3 Month. 6**) Indent No:** DMA/2025-26/EL/WORK_INDENT44390. **Details of work:** Purchase of Electrical Materials to TMC Office in Gurumatkal Town. **Approx. Est.Cost:** 1.79. **E.M.D:** 4486. **Class of contractor & Time Period:** Electrical, Class-IV & Above, 3 Month.7**) Indent No:** DMA/2025-26/RD/WORK_ INDENT44394. **Details of work:** Construction of CC road and Culvert from Hyderabad Main Road to Ayyappa Swami Temple in Gurumatkal Town (RESERVED FOR SC). **Approx. Est.Cost:** 15.91. **E.M.D:** 19888. **Class of contractor & Time Period:** KPWD, Civil, Class-IV & Above, 3 Month 8**) Indent No:** DMA/2025-26/RD/ WORK_ INDENT44395. **Details of work:** Construction of CC Road in ward no 12 and CC Drain in ward no 13 of Gurumatkal Town (RESERVED FOR SC). **Approx. Est.Cost:** 2.89. **E.M.D:** 3621. **Class of contractor & Time Period:** KPWD, Civil, Class-IV & Above, 3 Month. 9**) Indent No:** DMA/2025-26/WSWORK_ INDENT44396. **Details of work:** Installation of Cistern and Pipeline work near public toilet in Indira nagar in ward no 10 of Gurumatkal Town (RESERVED FOR ST). **Approx. Est.Cost:** 1.33 **E.M.D:** 1669. **Class of contractor & Time Period:** KPWD, Civil, Class-IV & Above, 3 Month

ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದ ಕಛೇರಿವೇಳೆಯಲ್ಲಿ ಮಾಹಿತಿ ಪಡೆಯಬಹುದು.

ಸಹಿ/– ಮುಖ್ಯಾಧಿಕಾರಿ ಪುರಸಭೆ ಗುರುಮಠಕಲ್

ವಾ.ಸಾ.ಸಂ.ಇ/ಯಾದಗಿರಿ/139/ಕೆ.ಎಸ್.ಎಂ.ಸಿ.ಎ/2025–26

ಸಹಿ/– ಅಧ್ಯಕ್ಷರು ಪುರಸಭೆ ಗುರುಮಠಕಲ್

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.